23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 325 | ನವದೆಹಲಿ | ಬೆಲೆ ₹10 | ಮೇ 31 2026, ಭಾನುವಾರ

## ಒಳಪುಟಗಳಲ್ಲಿ

ಎಸ್ಐಆರ್ ಬಳಿಕ ವಿಶ್ವದಲ್ಲಿಯೇ ಅತಿ ಸ್ವಚ್ಛ, ನಿಖರ ಮತದಾರರ ಪಟ್ಟಿ ಸಿದ್ಧ: ಜ್ಞಾನೇಶ್ ಕುಮಾರ್ - ಪು.4

ವಿದ್ಯಾರ್ಥಿನಿಗೆ ಗರ್ಭಪಾತ ಮಾಡಿಸಿದ ನೀವೆಂಥಾ ವೈದ್ಯೆ: ಕಿಡಿಕಾರಿದ ಹೈಕೋರ್ಟ್ - ಪು.5

ಸಿದ್ಧರಾಮಯ್ಯ ವಿರುದ್ಧ ದ್ವೇಷವಿಲ್ಲ - ಪು.6

# ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ ಡಿ.ಕೆ. ಶಿವಕುಮಾರ್ ಆಯ್ಕೆ

**• ಜೂ.3ರಂದು ಒಂಬತ್ತು ಸಚಿವರೊಂದಿಗೆ ಮುಖ್ಯಮಂತ್ರಿಯಾಗಿ ಪದಗ್ರಹಣ, • ರಾಜಭವನದ ಗಾಜಿನ ಮನೆಯಲ್ಲಿ ಪದಗ್ರಹಣ ಸಮಾರಂಭ**






**ಬೆಂಗಳೂರು, ಮೇ 30: ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಡಿ.ಕೆ. ಶಿವಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಡಿ.ಕೆ. ಶಿವಕುಮಾರ್ ಅವರು ಬುಧವಾರ ನೂತನ ಮುಖ್ಯಮಂತ್ರಿಯಾಗಿ ಒಂಬತ್ತು ಸಚಿವರೊಂದಿಗೆ ಪದಗ್ರಹಣ ಮಾಡಲಿದ್ದಾರೆ.**

ವಿಧಾನಸೌಧದ ಮೂರನೇ ಮಹಡಿಯ ಸಮ್ಮೇಳನ ಸಭಾಂಗಣದಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಉಸ್ತುವಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಾಸಕಾಂಗ ನಾಯಕ ಸ್ಥಾನಕ್ಕಾಗಿ ಹೆಸರು ಘೋಷಿಸುವ ಅಧಿಕಾರವನ್ನು ಹೈಕಮಾಂಡ್ ವಿವೇಚನೆಗೆ ಬಿಡುವ ಪ್ರಸ್ತಾವನೆಯನ್ನು ಅಧಿಕೃತವಾಗಿ ಪ್ರಸ್ತಾಪಿಸಿದರು. ಹಿರಿಯ ಮುಖಂಡ ಡಾ.ಜಿ. ಪರಮೇಶ್ವರ್ ಇದನ್ನು ಅನುಮೋದಿಸಿದರು.

ಸಭೆಯ ಆರಂಭದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕನ ಆಯ್ಕೆ ಪ್ರಕ್ರಿಯೆಯು ಸಿದ್ದರಾಮಯ್ಯ ಅವರ ಪ್ರಸ್ತಾವನೆಯೊಂದಿಗೆ ನಡೆಯಲಿದೆ ಎಂದು ಎಐಸಿಸಿ ಮತ್ತೊಬ್ಬ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಪ್ರಕಟಿಸಿ ವಿಧ್ಯುಕ್ತವಾಗಿ ಚಾಲನೆ ನೀಡಿದರು. ಶಾಸಕಾಂಗ ಪಕ್ಷದ ನೂತನ ನಾಯಕನ ಆಯ್ಕೆ ವಿಚಾರವನ್ನು ಎಐಸಿಸಿ ವಿವೇಚನೆಗೆ ಬಿಡಲಾಗಿದೆ ಎಂಬ ಒಂದು ಸಾಲಿನ ನಿರ್ಣಯವನ್ನು ಸಿದ್ದರಾಮಯ್ಯ ಅವರು ಮಂಡಿಸಿದರು. ಪರಮೇಶ್ವರ್ ಅವರು ಅನುಮೋದಿಸಿದರು. ಎಲ್ಲ ಶಾಸಕರು ಕೈ ಎತ್ತುವ ಮೂಲಕ ಇದನ್ನು ಬೆಂಬಲಿಸಿದರು.

ಬಳಿಕ ಸುರ್ಜೇವಾಲ ಸಭೆಯನ್ನು ಹತ್ತು ನಿಮಿಷಗಳ ಕಾಲ ಮುಂದೂಡಿದರು.

ಸಿದ್ದರಾಮಯ್ಯ, ವೇಣುಗೋಪಾಲ್, ಸುರ್ಜೆವಾಲ ಅವರು ಮುಖ್ಯಮಂತ್ರಿ ಕೊಠಡಿಯಿಂದ ಹೈಕಮಾಂಡ್ ಗಮನಕ್ಕೆ ಈ ವಿಷಯವನ್ನು ತಂದು ಡಿ.ಕೆ. ಶಿವಕುಮಾರ್ ಅವರ ಆಯ್ಕೆಗೆ ಅನುಮೋದನೆ ಪಡೆದರು.

ಅಲ್ಲಿಂದ ಸಮ್ಮೇಳನ ಸಭಾಂಗಣಕ್ಕೆ ಬಂದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಡಿ ಕೆ ಶಿವಕುಮಾರ್ ಅವರು ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು.

ನಂತರ ನೂತನ ನಾಯಕ ಡಿ.ಕೆ.ಶಿವಕುಮಾರ್ ಅವರು ನಿರ್ಗಮಿತ ನಾಯಕ ಸಿದ್ದರಾಮಯ್ಯ ಅವರ ಮುಖ್ಯಮಂತ್ರಿ ಅವಧಿಯ ಸೇವೆಯನ್ನು ಕೊಂಡಾಡುವ ನಿರ್ಣಯ ಮಂಡಿಸಿ, ಸಭೆಯ ಬೆಂಬಲ ಕೋರಿದರು. ಸಭೆ ಒಕ್ಕೊರಲಿನಿಂದ ಬೆಂಬಲಿಸಿತು.



## ಸರ್ಕಾರ ರಚನೆಗೆ ಡಿಕೆಶಿ ಸಜ್ಜು ರಾಜ್ಯಪಾಲರ ಎದುರು ಹಕ್ಕು ಮಂಡನೆ




**ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಭೇಟಿಯಾಗಿ ಬೆಂಬಲಿಗರ ಪತ್ರ ಸಲ್ಲಿಕೆ**


**ಬೆಂಗಳೂರು, ಮೇ 30:** ಕಾಂಗ್ರೆಸ್ ಶಾಸಕಾಂಗ ಪಕ್ಷದ ನೂತನ ನಾಯಕನಾಗಿ ಆಯ್ಕೆಯಾದ ಬೆನ್ನಲ್ಲೇ ಡಿ.ಕೆ. ಶಿವಕುಮಾರ್ ಅವರು ರಾಜಭವನಕ್ಕೆ ತೆರಳಿ ಸರ್ಕಾರ ರಚಿಸಲು ಅಧಿಕೃತವಾಗಿ ಹಕ್ಕು ಮಂಡಿಸಿದರು.

ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಭೇಟಿಯಾದ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಹಿರಿಯ ನಾಯಕರ ನಿಯೋಗವು, ತಮಗೆ ಶಾಸಕರ ಸಂಪೂರ್ಣ ಬೆಂಬಲವಿರುವ ಅಧಿಕೃತ ಪತ್ರವನ್ನು ಹಸ್ತಾಂತರಿಸಿತು. ಜೊತೆಗೆ ರಾಜ್ಯದಲ್ಲಿ ನೂತನ ಸಂಪುಟ ರಚನೆಗೆ ಅವಕಾಶ ಮಾಡಿಕೊಡಬೇಕು ಎಂದು ಕೋರಿ, ಜೂನ್ 3ರಂದು ನಡೆಯಲಿರುವ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ರಾಜ್ಯಪಾಲರನ್ನು ಅಧಿಕೃತವಾಗಿ ಆಹ್ವಾನಿಸಲಾಯಿತು.

ವಿಧಾನಸೌಧದಲ್ಲಿ ಸಭೆ ಮುಗಿದ ತಕ್ಷಣವೇ ಲೋಕಭವನದತ್ತ ಧಾವಿಸಿದ ನಾಯಕರ ನಡೆ ತೀವ್ರ ಕುತೂಹಲ ಮೂಡಿಸಿತ್ತು. ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ, ನೂತನ ಸಿಎಂ ಡಿ.ಕೆ. ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ್ ಅವರು ಒಂದೇ ಕಾರಿನಲ್ಲಿ ಒಟ್ಟಿಗೆ ರಾಜಭವನಕ್ಕೆ ತೆರಳುವ ಮೂಲಕ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂಬ ಬಲವಾದ ಒಗ್ಗಟ್ಟಿನ ಸಂದೇಶವನ್ನು ರವಾನಿಸಿದರು.

**ರಾಜಭವನದ ಗ್ಲಾಸ್‌ಹೌಸ್‌ನಲ್ಲಿ ಸರಳ ಸಮಾರಂಭ:** ನೂತನ ಸಿಎಂ ಪಟ್ಟಾಭಿಷೇಕಕ್ಕೆ ಮುಹೂರ್ತ ನಿಗದಿಯಾಗಿದೆ. ಬುಧವಾರ ಅಂದರೆ ಜೂನ್ 3ರಂದು ಸಂಜೆ ಡಿ.ಕೆ. ಶಿವಕುಮಾರ್ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ರಾಜಭವನದಲ್ಲಿ ನಡೆಯುವ ಸರಳ ಸಮಾರಂಭದಲ್ಲಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಮತ್ತು ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಮಾಹಿತಿ ನೀಡಿದರು. ಈ ಮೊದಲು ವಿಧಾನಸೌಧದ ಮೆಟ್ಟಿಲುಗಳ ಮೇಲೆ ಪ್ರಮಾಣವಚನ ಸ್ವೀಕಾರಕ್ಕೆ ಡಿ.ಕೆ.ಶಿವಕುಮಾರ್ ನಿರ್ಧರಿಸಿದ್ದರು. ಆದರೆ, ಹೈಕಮಾಂಡ್ ಸೂಚನೆ ಮೇರೆಗೆ ಜೂನ್ 3ರಂದು ಸರಳವಾಗಿ ಲೋಕಭವನದ ಗ್ಲಾಸ್ ಹೌಸ್‌ನಲ್ಲಿ ಪ್ರಮಾಣವಚನ ಸ್ವೀಕರಿಸಲು ನಿರ್ಧಾರವಾಗಿದೆ. ಸಾರ್ವಜನಿಕವಾಗಿ ತೊಂದರೆ ಆಗಬಾರದು ಎನ್ನುವ ದೃಷ್ಟಿಯಿಂದ ಆಡಂಬರದ ಕಾರ್ಯಕ್ರಮ ಬೇಡ ಎಂದು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು. ಹಾಗೂ ಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಡಿಕೆ ಶಿವಕುಮಾರ್ ಅವರು ಜಿಲ್ಲೆಗಳಿಗೆ ತೆರಳಿ ಕಾರ್ಯಕರ್ತರಿಗೆ ಧನ್ಯವಾದ ಹೇಳಲಿದ್ದಾರೆ ಎಂದು ಮಾಹಿತಿ ನೀಡಿದರು.

## ಧರ್ಮಸ್ಥಳಕ್ಕೆ ಇಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್



**ಮಂಗಳೂರು, ಮೇ 30:** ಭಾರತದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಶನಿವಾರ ಮಂಗಳೂರಿಗೆ ಆಗಮಿಸಿದರು. ವಾಯುಪಡೆಯ ವಿಶೇಷ ವಿಮಾನದಲ್ಲಿ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಉಪರಾಷ್ಟ್ರಪತಿ ಅವರನ್ನು ಲೋಕಸಭಾ ಸದಸ್ಯ ಬ್ರಿಜೇಶ್ ಚೌಟ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಮತ್ತು ದ.ಕ.ಜಿಲ್ಲಾಧಿಕಾರಿ ದರ್ಶನ್ ಎಚ್.ವಿ, ಅವರು ಹಾಜರಿದ್ದರು. ಬಳಿಕ ಉಪರಾಷ್ಟ್ರಪತಿ ಹೆಲಿಕಾಪ್ಟರ್ ಮೂಲಕ ಧರ್ಮಸ್ಥಳಕ್ಕೆ ತೆರಳಿ ವಾಸ್ತವ್ಯ ಹೂಡಿದ್ದಾರೆ. ಭಾನುವಾರ ಬೆಳಗ್ಗೆ ಧರ್ಮಸ್ಥಳದ ಅಮೃತವರ್ಷಿಣಿ ಸಭಾಂಗಣದಲ್ಲಿ ಸಿರಿ ಕೈಗಾರಿಕಾ ಪಾರ್ಕ್ ಉದ್ಘಾಟನೆ ನೆರವೇರಿಸಲಿದ್ದಾರೆ.


## ಐಎಸ್ಐ, ದಾವೂದ್ ಜೊತೆ ಸಂಪರ್ಕ ಹೊಂದಿದ್ದ 9 ಮಂದಿ ಬಂಧನ

**ನವದೆಹಲಿ, ಮೇ 30:** ದೆಹಲಿ, ಮುಂಬೈ ಸೇರಿದಂತೆ ದೇಶದ ಹಲವೆಡೆ ದಾಳಿ ನಡೆಸಲು ಸಂಚು ರೂಪಿಸಿದ್ದ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್ಐ ಮತ್ತು ಪಾತಕಿ ದಾವೂದ್ ಇಬ್ರಾಹಿಂ ಜೊತೆ ನಿಕಟ ಸಂಪರ್ಕ ಹೊಂದಿದ್ದ 9 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳು ದೆಹಲಿ, ಮುಂಬೈ ಮತ್ತು ಪಂಜಾಬ್ ನಿವಾಸಿಗಳು ಮತ್ತು ಕೆಲವರು ವಿದೇಶಿ ಪ್ರಜೆಗಳು ಎಂದು ದೆಹಲಿ ಪೊಲೀಸರ ವಿಶೇಷ ಘಟಕ ತಿಳಿಸಿದೆ. ಬಂಧಿತರಿಂದ ಅಪಾರ ಪ್ರಮಾಣದ ಮದ್ದುಗುಂಡುಗಳು ಮತ್ತು ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ಪರಮಾಣು ಸ್ಥಾವರ, ವಿಮಾನ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳು ಮತ್ತು ವಿದ್ಯುತ್ ಸ್ಥಾವರಗಳ ಮೇಲೆ ದಾಳಿ ನಡೆಸುವ ಸಂಚು ಬಂಧಿತರ ಪಟ್ಟಿಯಲ್ಲಿತ್ತು ಎಂದು ಮೂಲಗಳು ತಿಳಿಸಿವೆ. ಬಂಧಿತರಿಗೆ ಇರುವ ಗಡಿಯಾಚೆಗಿನ ಸಂಪರ್ಕಗಳು, ಹಣಕಾಸಿನ ಮಾರ್ಗಗಳು ಮತ್ತು ಕಾರಸ್ಥಾನದ ಚಟುವಟಿಕೆಗಳನ್ನು ನಿರ್ದೇಶಿಸುವಲ್ಲಿ ವಿದೇಶಿ ನಿರ್ವಾಹಕರ ಪಾತ್ರವನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಭಯೋತ್ಪಾದಕ ದಾಳಿ ಬಗ್ಗೆ ಸಂಚು ರೂಪಿಸಿದ್ದ ಕುರಿತು ಗುಪ್ತಚರ ಮಾಹಿತಿ ಬಳಿಕ ದೆಹಲಿಯಲ್ಲಿ ಹೈ ಅಲರ್ಟ್ ಘೋಷಿಸಲಾಗಿದೆ. ಅಲ್ಲದೇ ಎಲ್ಲಾ ಜಿಲ್ಲಾ ಘಟಕಗಳು ಜಾಗರೂಕರಾಗಿರಲು ಮತ್ತು ಗುಪ್ತಚರ ಸಂಸ್ಥೆಗಳು ಮತ್ತು ಕೇಂದ್ರ ಅರೆಸೈನಿಕ ಪಡೆಗಳೊಂದಿಗೆ ನಿಕಟ ಸಮನ್ವಯವನ್ನು ಕಾಯ್ದುಕೊಳ್ಳಲು ಸೂಚಿಸಲಾಗಿದೆ.

**■ ದೆಹಲಿ, ಮುಂಬೈ ಸೇರಿ ದೇಶದ ಹಲವೆಡೆ ದಾಳಿಗೆ ಸಂಚು**

## ಬಿಜೆಪಿಯಿಂದ ಸೇಡಿನ ರಾಜಕಾರಣ

**ಅಭಿಷೇಕ್ ಬ್ಯಾನರ್ಜಿ ಮೇಲಿನ ದಾಳಿಗೆ ಮಲ್ಲಿಕಾರ್ಜುನ ಖರ್ಗೆ ಆಕ್ರೋಶ, ವಿರೋಧ ಪಕ್ಷದ ನಾಯಕರ ರಕ್ಷಣೆಗೆ ಆಗ್ರಹ**



**ನವದೆಹಲಿ, ಮೇ 30:** ಪಶ್ಚಿಮ ಬಂಗಾಳದ ಸೋನಾರ್‌ಪುರದಲ್ಲಿ ಅಭಿಷೇಕ್ ಬ್ಯಾನರ್ಜಿ ಮೇಲೆ ನಡೆದ ದಾಳಿಯನ್ನು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಖಂಡಿಸಿದ್ದಾರೆ. ಬಿಜೆಪಿ "ಸೇಡು ಮತ್ತು ಕಿರುಕುಳದ" ರಾಜಕಾರಣದಲ್ಲಿ ತೊಡಗಿದೆ ಎಂದು ಆರೋಪಿಸಿರುವ ಅವರು, ವಿರೋಧ ಪಕ್ಷದ ನಾಯಕರಿಗೆ ಭದ್ರತೆ ಒದಗಿಸುವಂತೆ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಬ್ಯಾನರ್ಜಿ ಮೇಲಿನ ಹಲ್ಲೆಗೆ ಬಗ್ಗೆ ಕಳವಳ ವ್ಯಕ್ತಪಡಿಸಿದ್ದು, ಪಶ್ಚಿಮ ಬಂಗಾಲದಲ್ಲಿ ಚುನಾವಣೋತ್ತರ ಹಿಂಸಾಚಾರದಿಂದ ಸಂತ್ರಸ್ತರಾದ ಕುಟುಂಬಗಳನ್ನು ಭೇಟಿ ಮಾಡಲು ಹೋಗಿದ್ದಾಗ ಅಭಿಷೇಕ್ ಬ್ಯಾನರ್ಜಿ ಮೇಲಿನ ದಾಳಿ ಆಘಾತ ತಂದಿದೆ. ವಿರೋಧ ಪಕ್ಷದ ನಾಯಕರೊಬ್ಬರಿಗೆ ಸೂಕ್ತ ಭದ್ರತಾ ವ್ಯವಸ್ಥೆ ಇಲ್ಲದಿರುವುದು ಕಳವಳಕಾರಿ ರಾಜಕೀಯ ವಾತಾವರಣವನ್ನು ಬಿಂಬಿಸುತ್ತದೆ. ಪ್ರಮುಖ ವಿರೋಧ ಪಕ್ಷದ ನಾಯಕರೊಬ್ಬರಿಗೆ ಉದ್ದೇಶಪೂರ್ವಕವಾಗಿ ಸೂಕ್ತ ಪೊಲೀಸ್ ರಕ್ಷಣೆ ನೀಡದಿರುವುದು, ಬಿಜೆಪಿಯ ಸೇಡು ಮತ್ತು ಕಿರುಕುಳದ ರಾಜಕೀಯಕ್ಕೆ ಸಾಕ್ಷಿಯಾಗಿದೆ. ಇಂತಹ ಘಟನೆ ಮರುಕಳಿಸದಂತೆ ಎಲ್ಲಾ ರಾಜಕೀಯ ಪಕ್ಷಗಳ ನಾಯಕರಿಗೆ ಭದ್ರತೆಯನ್ನು ಖಾತರಿಪಡಿಸಲು ತಕ್ಷಣವೇ ಕ್ರಮ ಕೈಗೊಳ್ಳುವಂತೆ ಪಶ್ಚಿಮ ಬಂಗಾಳ ಸರ್ಕಾರ ಮತ್ತು ಕೇಂದ್ರ ಸರ್ಕಾರ ಎರಡಕ್ಕೂ ಖರ್ಗೆ ಆಗ್ರಹಿಸಿದ್ದಾರೆ.

ಪ್ರಜಾಪ್ರಭುತ್ವದ ಮೌಲ್ಯಗಳ ಮಹತ್ವವನ್ನು ಪ್ರತಿಪಾದಿಸಿದ ಖರ್ಗೆ, ರಾಜಕೀಯ ವೈಷಮ್ಯವು ಎಂದಿಗೂ ಹಿಂಸಾಚಾರ ಅಥವಾ ಬೆದರಿಕೆಗೆ ಕಾರಣವಾಗಬಾರದು. ರಾಜಕೀಯ ಭಿನ್ನಾಭಿಪ್ರಾಯಗಳು ಯಾವುದೇ ರೀತಿಯ ಹಿಂಸಾಚಾರವನ್ನು ಎಂದಿಗೂ ಸಮರ್ಥಿಸಲು ಸಾಧ್ಯವಿಲ್ಲ ಎಂದು ಖರ್ಗೆ ಸ್ಪಷ್ಟಪಡಿಸಿದ್ದಾರೆ.

## ಗೋಮಾತೆ ರಾಷ್ಟ್ರೀಯ ಪ್ರಾಣಿ ಗೋಹತ್ಯೆ ನಿಷೇಧ ಪ್ರಸ್ತಾವ ಇಲ್ಲ



ನವದೆಹಲಿ, ಮೇ 30: ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸುವ ಅಥವಾ ದೇಶಾದ್ಯಂತ ಗೋಹತ್ಯೆ ನಿಷೇಧಿಸುವ ಪ್ರಸ್ತಾವ ಕೇಂದ್ರ ಸರ್ಕಾರದ ಮುಂದಿಲ್ಲ. ಗೋಹತ್ಯೆಗೆ ಸಂಬಂಧಿಸಿದ ಕಾನೂನುಗಳು ರಾಜ್ಯದಿಂದ ರಾಜ್ಯಕ್ಕೆ ಬದಲಾಗುತ್ತವೆ. ರಾಜ್ಯಗಳು ತಮ್ಮದೇ ಆದ ಸಂದರ್ಭಗಳನ್ನು ಆಧರಿಸಿ ನಿರ್ಧಾರ ತೆಗೆದುಕೊಳ್ಳುತ್ತವೆ ಎಂದು ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಹೇಳಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಅವರು, ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸಲು ಮತ್ತು ದೇಶಾದ್ಯಂತ ಗೋಹತ್ಯೆ ನಿಷೇಧಕ್ಕೆ ಒತ್ತಾಯಿಸಿ ಹಲವಾರು ಸಂಸ್ಥೆಗಳು ಸಂಸದರು ಮತ್ತು ಸರ್ಕಾರಕ್ಕೆ ಜ್ಞಾಪಕ ಪತ್ರಗಳನ್ನು ಸಲ್ಲಿಸುತ್ತಿದ್ದಾರೆ. ಆದಾಗ್ಯೂ, ಅಂತಹ ಪ್ರಸ್ತಾವ ಪ್ರಸ್ತುತ ಕೇಂದ್ರ ಸಚಿವ ಸಂಪುಟದ ಪರಿಗಣನೆಯಲ್ಲಿಲ್ಲ. ಸದ್ಯಕ್ಕೆ ಅಂತಹ ಯಾವುದೇ ವಿಷಯ ಸಂಪುಟದ ಮುಂದೆ ಬಾಕಿ ಉಳಿದಿಲ್ಲ. ಯಾವುದೇ ಸಮಯದಲ್ಲಿ ಪ್ರಸ್ತಾವನೆಯು ಸರ್ಕಾರದ ನಿರ್ಧಾರ ಅಥವಾ ಸಂಪುಟದ ಪರಿಗಣನೆಯ ಅಗತ್ಯವಿರುವ ಹಂತವನ್ನು ತಲುಪಿದರೆ, ತಿಳಿಸುತ್ತೇವೆ ಎಂದಿದ್ದಾರೆ.

ಬಿಜೆಪಿ ನೇತೃತ್ವದ ಪಶ್ಚಿಮ ಬಂಗಾಳ ಸರ್ಕಾರವು ರಾಜ್ಯದ 1950ರ ಕಾನೂನಿ ನಡಿಯಲ್ಲಿ ಪ್ರಾಣಿವಧೆ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಇತ್ತೀಚೆಗೆ ಕೈಗೊಂಡ ಕ್ರಮವನ್ನು ಉಲ್ಲೇಖಿಸಿ, ವಿವಿಧ ರಾಜ್ಯಗಳು ತಮ್ಮದೇ ಆದ ಸಂದರ್ಭಗಳ ಆಧಾರದ ಮೇಲೆ ಅಂತಹ ವಿಷಯಗಳ ಬಗ್ಗೆ ನಿರ್ಧಾರಗಳನ್ನು ತೆಗೆದುಕೊಳ್ಳುತ್ತವೆ ಎಂದರು.

ದೇಶದಲ್ಲಿ ಗೋಹತ್ಯೆ ನಿಷೇಧಕ್ಕೆ ಹಿಂದೂ ಗುಂಪುಗಳು ಒತ್ತಾಯಿಸುತ್ತಿದ್ದರೆ, ಹಲವಾರು ಮುಸ್ಲಿಂ ಸಂಘಟನೆಗಳು ಮತ್ತು ಧಾರ್ಮಿಕ ಮುಖಂಡರು ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸಬೇಕು ಮತ್ತು ರಾಷ್ಟ್ರವ್ಯಾಪಿ ಗೋಹತ್ಯೆ ನಿಷೇಧ ಹೇರಬೇಕು ಎಂದು ಒತ್ತಾಯಿಸಿದ್ದಾರೆ. ಜಮಿಯತ್ ಉಲೇಮಾ–ಎ–ಹಿಂದ್‌ನ ಮುಖ್ಯಸ್ಥ ಮೌಲಾನಾ ಅರ್ಷದ್ ಮದನಿ ಕೂಡ ಈ ಬೇಡಿಕೆಯನ್ನು ಬೆಂಬಲಿಸುತ್ತಿದ್ದಾರೆ.

**■ ದೆಹಲಿ, ಮುಂಬೈ ಸೇರಿ ದೇಶದ ಹಲವೆಡೆ ದಾಳಿಗೆ ಸಂಚು**

# ರಾಷ್ಟ್ರೀಯ ಮಟ್ಟದ ಪ್ರಮುಖ ಪರೀಕ್ಷೆ ನಡೆಸುವಲ್ಲಿ ಕೇಂದ್ರದಿಂದ ಸರಣಿ ವೈಫಲ್ಯ

**ನರೇಂದ್ರ ಮೋದಿ ಸರ್ಕಾರವೇ ನೇರ ಕಾರಣ: ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್‌ಗಾಂಧಿ ಆರೋಪ**

**ನವದೆಹಲಿ, ಮೇ 30:** ರಾಷ್ಟ್ರೀಯ ಮಟ್ಟದ ಪ್ರಮುಖ ಪರೀಕ್ಷೆಗಳನ್ನು ನಡೆಸುವಲ್ಲಿ ಸರಣಿ ವೈಫಲ್ಯ ಕಾಣುತ್ತಿರುವುದಕ್ಕೆ ನರೇಂದ್ರ ಮೋದಿ ಸರ್ಕಾರವೇ ಕಾರಣ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದ್ದಾರೆ. ಅಲ್ಲದೆ, ಸರ್ಕಾರವು ಭಾರತದ ಶಿಕ್ಷಣ ವ್ಯವಸ್ಥೆಯನ್ನು ಹಾಳುಗೆಡವುತ್ತಿದೆ ಎಂದು ಆರೋಪಿಸಿದ್ದಾರೆ.

ದೆಹಲಿ, ಬೆಂಗಳೂರು ಮತ್ತು ಇತರ ಕಡೆಗಳಲ್ಲಿ ಟಿಸಿಎಸ್ ನಿರ್ವಹಿಸುತ್ತಿದ್ದ ಹಲವು ಕೇಂದ್ರಗಳಲ್ಲಿ ಸಿಯುಇಟಿ–ಯುಜಿ ಪರೀಕ್ಷೆಯ ವೇಳೆ ತಾಂತ್ರಿಕ ದೋಷಗಳು ಕಂಡುಬಂದು, ಸಾವಿರಾರು ವಿದ್ಯಾರ್ಥಿಗಳಿಗೆ ತೊಂದರೆಯಾದ ಬೆನ್ನಲ್ಲೇ ಅವರ ಈ ಹೇಳಿಕೆಗಳು ಹೊರಬಿದ್ದಿವೆ.

ತಮ್ಮ ಎಕ್ಸ್ ಖಾತೆಯಲ್ಲಿ ಈ ಬಗ್ಗೆ ಶನಿವಾರ ಮಾಹಿತಿ ಹಂಚಿಕೊಂಡಿರುವ ಅವರು, ಇತ್ತೀಚಿನ ನೀಟ್, ಸಿಬಿಎಸ್ಇ, ಎಸ್ಎಸ್‌ಸಿ ಮತ್ತು ಸಿಯುಇಟಿ ಪರೀಕ್ಷೆಗಳಿಗೆ ಸಂಬಂಧಿಸಿದ ವಿವಾದಗಳನ್ನು ಪ್ರಸ್ತಾಪಿಸಿದ್ದು, ಇವೆಲ್ಲವೂ ಕೇಂದ್ರ ಸರ್ಕಾರದ ಆಡಳಿತ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದಿದ್ದಾರೆ.

ನೀಟ್, ಸಿಬಿಎಸ್ಇ, ಎಸ್ಎಸ್‌ಸಿ ಮತ್ತು ಇಂದು ಸಿಯುಇಟಿ ಈ 4 ಪರೀಕ್ಷೆಗಳನ್ನು ಪ್ರಾಮಾಣಿಕವಾಗಿ ನಡೆಸಲಾಗಿಲ್ಲ. ಇದರಿಂದ ಸುಮಾರು 1 ಕೋಟಿ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ ಎಂದಿದ್ದಾರೆ.

ಸರ್ಕಾರದ "ವಿಶ್ವಗುರು" ಎಂಬ ಪ್ರಚಾರವನ್ನು ಲೇವಡಿ ಮಾಡಿರುವ ರಾಹುಲ್‌ಗಾಂಧಿ, ವಿಶ್ವಗುರು ಎಂದು ಹೇಳಿಕೊಳ್ಳುತ್ತೀರಿ, ಆದರೆ ದೇಶದಲ್ಲಿ ಒಂದೇ ಒಂದು ಪರೀಕ್ಷೆಯನ್ನು ನಡೆಸಲು ನಿಮ್ಮಿಂದ ಸಾಧ್ಯವಾಗುತ್ತಿಲ್ಲ. ಮೋದಿ ಜಿ ಅವರು ಇಡೀ ಶಿಕ್ಷಣ ವ್ಯವಸ್ಥೆಯನ್ನು ಧ್ವಂಸಗೊಳಿಸಿದ್ದಾರೆ ಎಂದು ಕಿಡಿಕಾರಿದ್ದಾರೆ. ಯಾವ ಪೀಳಿಗೆಯ ಭವಿಷ್ಯವನ್ನು ಹಾಳು ಮಾಡುತ್ತಿದ್ದೀರೋ, ಅದೇ ಪೀಳಿಗೆಯು ನಿಮ್ಮನ್ನು ಹೊಣೆಗಾರರನ್ನಾಗಿ ಮಾಡುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.



ಮತ್ತೊಂದು ಹೇಳಿಕೆಯಲ್ಲಿ ರಾಹುಲ್ ಗಾಂಧಿ ಅವರು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಕ್ಷೇತ್ರದ ಮೇಲೂ ತಮ್ಮ ಟೀಕೆಯನ್ನು ವಿಸ್ತರಿಸಿದ್ದು, ವೈದ್ಯಕೀಯ ಕ್ಷೇತ್ರವು ನಂಬಿಕೆಯ ಮೇಲೆ ನಿಂತಿದೆ ಎಂದು ಒತ್ತಿ ಹೇಳಿದ್ದಾರೆ.

"ವೈದ್ಯರಾಗುವುದು ಮತ್ತು ಜನರ ಪ್ರಾಣ ಉಳಿಸುವುದು ಅತ್ಯಂತ ಉದಾತ್ತ ಕೆಲಸವಾಗಿದ್ದು, ಇದು ನಂಬಿಕೆಯೆಂಬ ಸೂಕ್ಷ್ಮ ಎಳೆಯಿಂದ ಬಂಧಿಸಲ್ಪಟ್ಟಿದೆ

ಆ ನಂಬಿಕೆಯನ್ನು ವ್ಯಾಪಾರವಾಗಿ ಪರಿವರ್ತಿಸಿದಾಗ, ದುಷ್ಕೃತ್ಯಗಳು ಪ್ರಾರಂಭವಾಗುತ್ತವೆ.


ಇದನ್ನು ಕೇವಲ ತೇಪೆ ಹಚ್ಚುವ ಸುಧಾರಣೆಗಳಿಂದ ಸರಿಪಡಿಸಲು ಸಾಧ್ಯವಿಲ್ಲ. ಈ ವ್ಯವಸ್ಥೆಯನ್ನು ಮೂಲದಿಂದಲೇ ಸರಿಪಡಿಸಬೇಕಾಗಿದೆ ಎಂದಿದ್ದಾರೆ.

ರಕ್ಷಣಾತ್ಮಕ ಕ್ರಮಗಳಿಲ್ಲದೆ ತಂತ್ರಜ್ಞಾನ ಆಧಾರಿತ ಸುಧಾರಣೆಗಳನ್ನು ತರುತ್ತಿರುವುದು ವಿದ್ಯಾರ್ಥಿಗಳಿಗೆ ಹಾನಿ ಮಾಡುತ್ತಿದೆ ಮತ್ತು ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದ ವಾಣಿಜ್ಯೀಕರಣಕ್ಕೆ ಬಲವಾದ ಸಾರ್ವಜನಿಕ ಮೇಲ್ವಿಚಾರಣೆಯ ಅಗತ್ಯವಿದೆ ಎಂದು ಕಾಂಗ್ರೆಸ್ ನಾಯಕರು ಪದೇ ಪದೇ ವಾದಿಸುತ್ತಿದ್ದಾರೆ.

2024ರ ಲೋಕಸಭಾ ಚುನಾವಣೆಯಲ್ಲಿ ಶಿಕ್ಷಣ, ಉದ್ಯೋಗ ಮತ್ತು ಯುವಕರಿಗೆ ಅವಕಾಶಗಳು ಮುಖ್ಯ ವಿಷಯಗಳಾಗಿದ್ದವು ಮತ್ತು ಇವುಗಳೇ ಈಗಲೂ ಕಾಂಗ್ರೆಸ್‌ನ ಪ್ರಮುಖ ಅಸ್ತ್ರಗಳಾಗಿವೆ.

ಹೊಸ ಪರೀಕ್ಷಾ ಗೊಂದಲ ಮತ್ತು ಪ್ರಶ್ನೆಪತ್ರಿಕೆ ಸೋರಿಕೆ ಆರೋಪ ಈ ವಿಷಯವನ್ನು ಜೀವಂತವಾಗಿಟ್ಟಿದ್ದು, ಕಠಿಣ ಭದ್ರತೆ ಮತ್ತು ಉತ್ತಮ ಆಡಳಿತಕ್ಕಾಗಿ ಸರ್ಕಾರ ನೀಡುತ್ತಿರುವ ಭರವಸೆಗಳಿಗೆ ಪ್ರತಿಯಾಗಿ, ವ್ಯವಸ್ಥೆಯಲ್ಲೇ ಆಳವಾದ ನ್ಯೂನತೆಗಳಿವೆ ಎಂದು ಕೇಂದ್ರ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ಆರೋಪಿಸುತ್ತಿವೆ.

## ನಿತ್ಯ ಪಂಚಾಂಗ 31.05.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ


ಅಧಿಕ ಜ್ಯೇಷ್ಠ ಶುದ್ಧ, ಪೂರ್ಣಿಮಾ,
ಅನುರಾಧ ನಕ್ಷತ್ರ,
ವಿಶ್ವ ಧೂಮಪಾನ ನಿಷೇಧ ದಿನ,
ಟ್ರಿನಿಟಿ ಸಂಡೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಈಡಿಗ – ಬಿಲ್ಲವ ಸಮುದಾಯಕ್ಕೆ ಎರಡು ಸಚಿವ ಸ್ಥಾನ ನೀಡಲು ಡಿಕೆಶಿಗೆ ಒತ್ತಾಯ

## ಬಿ..ಕೆ ಹರಿಪ್ರಸಾದ್, ಬೇಳೂರು ಗೋಪಾಲಕೃಷ್ಣಗೆ ಸಚಿವ ಸ್ಥಾನಕ್ಕೆ ಪರಿಗಣಿಸಿ







**ಕಲಬುರಗಿ, ಮೇ 30:** ರಾಜ್ಯದಲ್ಲಿ ಡಿ.ಕೆ ಶಿವಕುಮಾರ್ ಅವರು ನೂತನ ಮುಖ್ಯಮಂತ್ರಿಯಾಗಿ ಸಚಿವ ಸಂಪುಟ ರಚನೆ ಮಾಡುವ ಸಂದರ್ಭದಲ್ಲಿ ಈಡಿಗ, ಬಿಲ್ಲವ ಸೇರಿದಂತೆ 26 ಪಂಗಡಗಳನ್ನು ಪ್ರತಿನಿಧಿಸುವ ಜನಾಂಗಕ್ಕೆ ಎರಡು ಸಚಿವ ಸ್ಥಾನ ನೀಡಿ ನ್ಯಾಯ ನೀಡಬೇಕು ಎಂದು ಚಿತ್ತಾಪುರ ತಾಲೂಕು ಕರದಾಳ್ ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿಪೀಠ ಹಾಗೂ ಕಲ್ಯಾಣ ಕರ್ನಾಟಕ ಆರ್ಯ ಈಡಿಗ ಹೋರಾಟ ಸಮಿತಿಯು ಡಿ.ಕೆ ಶಿವಕುಮಾರ್ ಅವರಿಗೆ ಒತ್ತಾಯಿಸಿದೆ.

ರಾಜ್ಯ ಸರಕಾರದಲ್ಲಿ ರಚನೆಯಾಗುವ ನೂತನ ಸಚಿವ ಸಂಪುಟದಲ್ಲಿ ಈ ರಾಜ್ಯದಲ್ಲಿ ಸುಮಾರು 40 ಲಕ್ಷಕ್ಕಿಂತ ಅಧಿಕ ಜನಸಂಖ್ಯೆಯನ್ನು ಹೊಂದಿರುವ ಈಡಿಗ, ಬಿಲ್ಲವ ಸೇರಿದಂತೆ 26 ಪಂಗಡಗಳಿಗೆ ಪ್ರಾತಿನಿಧ್ಯ ನೀಡಲು ಈ ಹಿಂದೆ ಬಿಜೆಪಿ ಸರಕಾರ ನೀಡಿದಂತೆ ಎರಡು ಸಚಿವ ಸ್ಥಾನಗಳನ್ನು ನೀಡಿ ನ್ಯಾಯ ಒದಗಿಸಬೇಕು. ಇದ್ದ ಸಚಿವರನ್ನು ಕೈ ಬಿಟ್ಟು ನೂತನ ಸಚಿವರನ್ನು ನೇಮಕ ಮಾಡುವ ಪ್ರಸ್ತಾಪ ಇರುವುದರಿಂದ ಸಮಾಜದ ಹಿರಿಯ ಮುಖಂಡರು ಹಾಗೂ ಕಾಂಗ್ರೆಸ್ಸಿನ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷವನ್ನು ಕಟ್ಟಿ ಬೆಳೆಸಿದ ಬಿ.ಕೆ ಹರಿಪ್ರಸಾದ್ ಮತ್ತು ಬೇಳೂರು ಗೋಪಾಲಕೃಷ್ಣ ಅವರನ್ನು ಸಚಿವ ಸ್ಥಾನಕ್ಕೆ ಪರಿಗಣಿಸಬೇಕು ಎಂದು ಒತ್ತಾಯಿಸಲಾಗಿದೆ.

ಕರಾವಳಿ ಕರ್ನಾಟಕದಿಂದ ಬಿಲ್ಲವ ಸಮುದಾಯವನ್ನು ಪ್ರತಿನಿಧಿಸುವ ಬಿ.ಕೆ ಹರಿಪ್ರಸಾದ್ ಹೈಕಮಾಂಡ್ ನಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ಪಕ್ಷಕ್ಕಾಗಿ ಅವಿರತವಾಗಿ ದುಡಿದಿದ್ದಾರೆ ಹಾಗೂ ಈಡಿಗ ಸಮುದಾಯದಿಂದ ಮಲೆನಾಡನ್ನು ಪ್ರತಿನಿಧಿಸುವ ಬೇಳೂರು ಗೋಪಾಲಕೃಷ್ಣ ಅವರು ಮಾಜಿ ಮುಖ್ಯಮಂತ್ರಿ ಬಂಗಾರಪ್ಪ ಅವರ ಹೆಜ್ಜೆಯಲ್ಲಿ ಸಮಾಜದಲ್ಲಿ ಗುರುತಿಸಿಕೊಂಡವರು ಹಾಗೂ ನಾಲ್ಕು ಬಾರಿ ಶಾಸಕರಾಗಿ ಗೆದ್ದು ಬಂದವರು.

ಇವರಿಬ್ಬರನ್ನು ಸಚಿವ ಸ್ಥಾನಕ್ಕೆ ಪರಿಗಣಿಸಿ ಹಿಂದುಳಿದ ಸಮಾಜಕ್ಕೆ ನ್ಯಾಯ ಕಲ್ಪಿಸಬೇಕಾಗಿದೆ ಮತ್ತು ಅತ್ಯಂತ ಹಿಂದುಳಿದ ಈಡಿಗ ಬಿಲ್ಲವ ಸೇರಿದಂತೆ 26 ಪಂಗಡಗಳಿಗೆ ಅನುಕೂಲ ಕಲ್ಪಿಸಿದಂತಾಗುತ್ತದೆ ಎಂದು ಕಲ್ಯಾಣ ಕರ್ನಾಟಕ ಆರ್ಯ ಈಡಿಗ ಹೋರಾಟ ಸಮಿತಿಯ ಅಧ್ಯಕ್ಷ ಸತೀಶ್ ವಿ ಗುತ್ತೇದಾರ್, ಉಪಾಧ್ಯಕ್ಷ ಮಹಾದೇವ ಗುತ್ತೇದಾರ್, ಪ್ರಧಾನ ಕಾರ್ಯದರ್ಶಿ ವೆಂಕಟೇಶ ಎಂ. ಕಡೇಚೂರ್, ಕುಪೇಂದ್ರ ಗುತ್ತೇದಾರ್ ನಾಗೂರ್,ತಿಮ್ಮಪ್ಪ ಗಂಗಾವತಿ, ಸುರೇಶ ಗುತ್ತೇದಾರ್ ಮಟ್ಟೂರ್, ರಾಜೇಶ್ ಡಿ.ಗುತ್ತೇದಾರ್,

ಪ್ರವೀಣ್ ಜತ್ತನ್, ದಯಾನಂದ ಪೂಜಾರಿ ಮೈಖಾನ, ಪಂಚಮಿ ಸಂತೋಷ್ ಪೂಜಾರಿ ,ಪ್ರದೀಪ್ ಪೂಜಾರಿ, ಶರಣಯ್ಯ ಗುತ್ತೇದಾರ್ ಕೊಂಚೂರ್, ಅಂಬಯ್ಯ ಗುತ್ತೇದಾರ್ ಇಬ್ರಾಹಿಂಪುರ್,

ಮಹೇಶ್ ಯರಗೋಳ, ಸಂತೋಷ್ ಚೌಧರಿ, ಕಾಶಿನಾಥ್ ಗುತ್ತೇದಾರ್ ಚಿತ್ತಾಪುರ, ಮಲ್ಲಣ್ಣ ಜೀವಣಗಿ, ಅನಿಲ್ ಯರಗೋಳ, ಮಲ್ಲಿಕಾರ್ಜುನ ಕುಕ್ಕುಂದಿ, ಮಹೇಶ್ ಗುತ್ತೇದಾರ್, ಶಿವಯ್ಯ ಪೇಟಶಿರೂರು, ಬಿಜಿ ಶಕ್ತಿ ಪೀಠದ ಪ್ರಧಾನ ಕಾರ್ಯದರ್ಶಿ ವೆಂಕಟೇಶ ಗುಂಡಾನೂರು, ಟ್ರಸ್ಟಿಗಳಾದ ವಿನೋದ್ ಗುತ್ತೇದಾರ್, ಸುರೇಶ್ ಗುತ್ತೇದಾರ್ ಕರದಾಳ, ಮತ್ತಿತರರು ಒತ್ತಾಯಿಸಿದ್ದಾರೆ ಎಂದು ಶಕ್ತಿಪೀಠದ ಮಾಧ್ಯಮ ಸಂಚಾಲಕ ಡಾ. ಸದಾನಂದ ಪೆರ್ಲ ತಿಳಿಸಿದ್ದಾರೆ.

**ಡಿಸಿಎಂ ಸ್ಥಾನ ಈಡಿಗರಿಗೆ ನೀಡಲು ಡಾ.ಪ್ರಣವಾನಂದ ಶ್ರೀಗಳ ಹೇಳಿಕೆಗೆ ಬೆಂಬಲ**

ನೂತನ ಸಚಿವ ಸಂಪುಟದಲ್ಲಿ ಡಿಸಿಎಂ ಹುದ್ದೆ ನೀಡುವಾಗ ಈಡಿಗ, ಬಿಲ್ಲವ ಸೇರಿದಂತೆ 26 ಪಂಗಡಗಳನ್ನು ಪ್ರತಿನಿಧಿಸುವ ಒಬ್ಬರನ್ನು ಗುರುತಿಸಿ ಸ್ಥಾನ ನೀಡುವಂತೆ ಕರೆದಾಳ ಶಕ್ತಿ ಪೀಠದ ಡಾ. ಪ್ರಣವಾನಂದ ಶ್ರೀಗಳ ಹೇಳಿಕೆಗೆ ಕಲ್ಯಾಣ ಕರ್ನಾಟಕ ಆರ್ಯ ಈಡಿಗ ಹೋರಾಟ ಸಮಿತಿ ಹಾಗೂ ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿಪೀಠ ಪೂರ್ಣ ಬೆಂಬಲ ವ್ಯಕ್ತಪಡಿಸಿದೆ.

ರಾಜ್ಯದಲ್ಲಿ ಈ ಹಿಂದೆ ಬಂಗಾರಪ್ಪ ಅವರು ಮುಖ್ಯಮಂತ್ರಿ ಸ್ಥಾನವನ್ನು ಅಲಂಕರಿಸಿದ ನಂತರ ಇದುವರೆಗೆ ಈ ಸಮುದಾಯದಿಂದ ಡಿಸಿಎಂ ಆಗಲಿ ಅಥವಾ ಮುಖ್ಯಮಂತ್ರಿ ಸ್ಥಾನಕ್ಕೆ ಯಾರನ್ನೂ ಪರಿಗಣಿಸದೆ ಇರುವುದರಿಂದ ಈ ಬಾರಿ ಡಿಸಿಎಂ ಹುದ್ದೆಯನ್ನಾದರೂ ನೀಡಬೇಕು ಎಂದು ಒತ್ತಾಯಿಸಲಾಗಿದೆ.

# ಹಿರಿತನಕ್ಕೆ ತಕ್ಕಂತೆ ಸಚಿವ ಸ್ಥಾನ ನೀಡಲಿ

## ಯಾವುದೇ ಖಾತೆ ನೀಡಿದರೂ ಕೆಲಸ ಮಾಡುವೆ: ರಾಮಲಿಂಗಾರೆಡ್ಡಿ



**ಬೆಂಗಳೂರು, ಮೇ 30:** ನನ್ನ ಹಿರಿತನಕ್ಕೆ ತಕ್ಕಂತೆ ಸಚಿವ ಸ್ಥಾನ ನೀಡಲಿ. ನಿರ್ದಿಷ್ಟವಾಗಿ ಇಂತಹುದೇ ಖಾತೆ ನೀಡಿ ಎಂದು ಹೇಳುವುದಿಲ್ಲ. ಹಿರಿತನದ ಮೇಲೆ ಖಾತೆ ನೀಡಲಿ ಎಂದು ಶಾಸಕ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಶನಿವಾರ ಮಾತನಾಡಿದ ಅವರು, ಎಂಟು ಬಾರಿ ಸಚಿವನಾಗಿದ್ದೇನೆ. ಐದು ಬಾರಿ ಶಾಸಕನಾಗಿದ್ದೇನೆ. ಸಾರಿಗೆ, ಗೃಹ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸೇರಿ ವಿವಿಧ ಇಲಾಖೆಗಳ ಸಚಿವನಾಗಿ ಕಾರ್ಯನಿರ್ವಹಿಸಿದ್ದೇನೆ. ನೂತನ ಸಿಎಂ ಆಗಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಲಿದ್ದಾರೆ. ಹಿರಿತನ ಆಧಾರದ ಮೇಲೆ ಸಚಿವ ಸ್ಥಾನ ನೀಡುವಂತೆ ಕೇಳಿದ್ದೇನೆ. ನಿರ್ದಿಷ್ಟವಾಗಿ ಇಂತಹದ್ದೇ ಖಾತೆ ನೀಡಿ ಎಂದು ಕೇಳಿಲ್ಲ. ಯಾವುದೇ ಖಾತೆ ಕೊಟ್ಟರೂ ಕೆಲಸ ಮಾಡುವೆ ಎಂದರು. ಶಾಸಕಾಂಗ ಪಕ್ಷದ ಸಭೆಯಲ್ಲಿ ನೂತನ ಸಚಿವ ಸಂಪುಟದಲ್ಲಿ ಯಾರೆಲ್ಲಾ ಇರುತ್ತಾರೆ ಎಂಬುದರ ಬಗ್ಗೆ ಚರ್ಚೆಯಾಗಲಿದೆ ಎಂದ ಅವರು, ಕುರ್ಚಿ ಕಾಳಗ ಸಂಬಂಧ ಸುಗಮವಾಗಿ ಅಧಿಕಾರ ಹಂಚಿಕೆಯಾಗಿದೆಯಾ ಎಂಬ ಪ್ರಶ್ನೆಗೆ ಉತ್ತರಿಸಿದ ರಾಮಲಿಂಗಾರೆಡ್ಡಿ, ಒಪ್ಪಂದದಂತೆ ಅಧಿಕಾರ ಹಂಚಿಕೆಯಾಗಿದೆ. 2023ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ನಡೆದ ಮಾತುಕತೆಯಲ್ಲಿ ಅಧಿಕಾರ ಹಂಚಿಕೆ ಬಗ್ಗೆ ಹೈಕಮಾಂಡ್ ಮಾತುಕತೆ ನಡೆಸಿತ್ತು ಎಂದು ರಾಮಲಿಂಗಾರೆಡ್ಡಿ ತಿಳಿಸಿದರು.

# 34 ವರ್ಷಗಳ ಸುದೀರ್ಘ ವೋಲ್ವೋ ಸೇವೆ: ನಿವೃತ್ತಿ ಹೊಂದಿದ ಜೋಸೆಫ್ ಮಚಾದೊ



**ಬೆಂಗಳೂರು, ಮೇ 30:** ಕೆಎಸ್‌ಆರ್‌ಟಿಸಿಯ ದಂತಕಥೆ ಶನಿವಾರ ನಿವೃತ್ತರಾಗಿದ್ದಾರೆ. 34 ವರ್ಷಗಳ ವೋಲ್ವೋ ಚಕ್ರದ ಹಿಂದೆ ನಿಷ್ಕಳಂಕ ಸೇವೆ, ಕೆಎಸ್‌ಆರ್‌ಟಿಸಿಯ ಅತ್ಯಂತ ಶಿಸ್ತುಬದ್ಧ ಮತ್ತು ಹರ್ಷಚಿತ್ತದಿಂದ ಕೂಡಿದ ಚಾಲಕ ಜೋಸೆಫ್ ಮಚಾದೊ ಅವರು ತಮ್ಮ ಕೀಲಿಗಳನ್ನು ಸ್ಥಗಿತಗೊಳಿಸಿದ್ದಾರೆ.

ಎಂದಿಗೂ ತಡವಾಗಿ ಪ್ರಯಾಣಿಸಲಿಲ್ಲ, ಎಂದಿಗೂ ದುಡುಕಿನ ತಿರುವು ಪಡೆಯಲಿಲ್ಲ, ಪ್ರತಿಯೊಬ್ಬ ಪ್ರಯಾಣಿಕರಿಗೂ ಯಾವಾಗಲೂ ನಗು. ಮಂಗಳೂರಿನಿಂದ ಬೆಂಗಳೂರಿಗೆ, ಅವರ ಸ್ಥಿರ ಕೈಗಳು ಮತ್ತು ದಯೆಯ ಹೃದಯದಿಂದಾಗಿ ಸಾವಿರಾರು ಜನರು ಸುರಕ್ಷಿತವಾಗಿ ತಲುಪಿದರು.

ಅವರ ವಿದಾಯ ಕಾರ್ಯಕ್ರಮ, ಅವರು ಜನರಿಗೆ ಏನು ಅರ್ಥ ಎಂದು ತೋರಿಸಿದೆ – ಪ್ರಯಾಣಿಕರು, ಸಹೋದ್ಯೋಗಿಗಳು, ಡಿಪೋ ಸಿಬ್ಬಂದಿ, ಎಲ್ಲರೂ ಕಣ್ಣೀರು ಮತ್ತು ಹೂಮಾಲೆಗಳೊಂದಿಗೆ ಬಂದರು. 34 ವರ್ಷಗಳ ನಿಷ್ಠೆ ಮತ್ತು ಸೇವೆಯಿಂದ ಗಳಿಸಿದ ಗೌರವ ಅದು.

ಕೆಎಸ್‌ಆರ್‌ಟಿಸಿ ಒಬ್ಬ ಚಾಲಕನನ್ನು ಕಳೆದುಕೊಳ್ಳುತ್ತಿದೆ, ಕರ್ನಾಟಕ ಒಬ್ಬ ಮಾದರಿಯನ್ನು ಕಳೆದುಕೊಳ್ಳುತ್ತಿದೆ ಎಂದ ಅಧಿಕಾರಿಗಳು ಕಣ್ಣೀರ ವಿದಾಯ ಸೂಚಿಸಿದರು.

# ಮಹಿಳೆಯರ ಪಾಲಿನ 5000 ಕೋಟಿ ಗೃಹಲಕ್ಷ್ಮೀ ಹಣ ಎಲ್ಲಿ ಹೋಯಿತು

**ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಶಾಸಕ ಸುರೇಶ್‌ಕುಮಾರ್ ಪ್ರಶ್ನೆ**


**ಹಣದ ಅಸಲಿ ಸತ್ಯ, ಸ್ಥಿತಿಗತಿ ಸ್ಪಷ್ಟಪಡಿಸುವಂತೆ ಆಗ್ರಹ**



**ಬೆಂಗಳೂರು, ಮೇ 30:** ರಾಜ್ಯದಲ್ಲಿ ಕೆಲವೇ ದಿನಗಳಲ್ಲಿ ರಾಜಕೀಯ ಚಿತ್ರಣ ಬದಲಾಗಿದೆ. ಕಾಂಗ್ರೆಸ್ ಹೈಕಮಾಂಡ್ ಆದೇಶದಂತೆ ಸಿದ್ದರಾಮಯ್ಯ ರಾಜೀನಾಮೆ ನೀಡಿ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಿದ್ದಾರೆ. ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮಾಜಿ ಸಚಿವ ಬಿಜೆಪಿ ನಾಯಕ ಸುರೇಶ್ ಕುಮಾರ್ ಪ್ರಶ್ನೆಯೊಂದನ್ನು ಮುಂದಿಟ್ಟಿದ್ದಾರೆ.

ತಾವು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಡುವ ಮುನ್ನ, ರಾಜ್ಯದ 1.14 ಕೋಟಿ ಮಹಿಳೆಯರಿಗೆ ತಲುಪಬೇಕಾಗಿದ್ದ 5,000 ಕೋಟಿ ರೂ. ಹಣದ ಹಣೆಬರಹದ ಬಗ್ಗೆ ಸ್ಪಷ್ಟನೆ ನೀಡಬೇಕೆಂದು ಆಗ್ರಹಿಸಿ ಸೋಷಿಯಲ್ ಮೀಡಿಯಾದಲ್ಲಿ ಬಹಿರಂಗ ಪ್ರಶ್ನೆ ಮಾಡಿದ್ದಾರೆ. ಚುನಾವಣೆಯಲ್ಲಿ ಮತ ಗಳಿಸಲು ಸಾಧನವಾಗಿದ್ದ ಗೃಹಲಕ್ಷ್ಮಿ ಯೋಜನೆಯ ಹಣ 1.14 ಕೋಟಿ ಮಹಿಳೆಯರ ಕೈಸೇರದಿರುವುದು ಸಣ್ಣ ಪ್ರಮಾದವಲ್ಲ, ಇದು ರಾಜ್ಯದ ತಿಜೋರಿಯನ್ನೇ ಲೂಟಿ ಹೊಡೆದಿರುವ ಸ್ಪಷ್ಟ ಉದಾಹರಣೆ. ಈ ಪ್ರಸ್ತಾವನೆ ನಡೆದು 5 ತಿಂಗಳು ಕಳೆದರೂ ಇಂದಿಗೂ ರಾಜ್ಯದ ಗೃಹಲಕ್ಷ್ಮಿಯರಿಗೆ ಆ ಹಣ ತಲುಪಿಲ್ಲ. ಸಚಿವರು ಹಣ ಪಾವತಿಯಾಗಿದೆ ಎಂದು ಸುಳ್ಳು ಹೇಳುತ್ತಿದ್ದಾರೆ. ಹಾಗಾದರೆ ಈ ಭಾರಿ ಮೊತ್ತದ ಹಣ ಎಲ್ಲಿ ಹೋಯಿತು, ಯಾರ ಜೇಬು ಸೇರಿತು ಎಂದು ಪ್ರಶ್ನಿಸಿದ್ದಾರೆ. ಇಡೀ ದೇಶದಲ್ಲೇ ದಾಖಲೆ ಸಂಖ್ಯೆಯ ಬಜೆಟ್ ಮಂಡಿಸಿರುವ ನೀವು ರಾಜ್ಯದ ಆರ್ಥಿಕ ತಜ್ಞರು ಹಾಗೂ ತಿಜೋರಿಯ ಸಂಪೂರ್ಣ ನಿಯಂತ್ರಣ ಹೊಂದಿದ್ದವರು. ಸಾರ್ವಜನಿಕರ ತೆರಿಗೆ ಹಣದ ಪಾವಿತ್ರ್ಯತೆಯನ್ನು ಕಾಯುವುದು ಹಾಗೂ ಪ್ರತಿಯೊಂದು ಪೈಸೆಗೂ ಉತ್ತರದಾಯಿತ್ವ ವಹಿಸುವುದು ನಿಮ್ಮ ನೈತಿಕ ಜವಾಬ್ದಾರಿಯಾಗಿದೆ. ಆದ್ದರಿಂದ ಸಿಎಂ ಸ್ಥಾನದಿಂದ ನಿರ್ಗಮಿಸುವ ಮುನ್ನ ಈ 5,000 ಕೋಟಿ ರೂ ಹಣದ ಅಸಲಿ ಸತ್ಯ ಮತ್ತು ಸ್ಥಿತಿಗತಿಯನ್ನು ರಾಜ್ಯದ ನಾಗರಿಕರಿಗೆ ಸ್ಪಷ್ಟಪಡಿಸಬೇಕು ಎಂದು ಬಹಿರಂಗ ಪತ್ರದ ಮೂಲಕ ಸುರೇಶ್ ಕುಮಾರ್ ಸಿದ್ದರಾಮಯ್ಯನವರಿಗೆ ಆಗ್ರಹಿಸಿದರು.

# ಗೊಂದಲದ ವಾತಾವರಣದಲ್ಲಿ ಡಿಕೆಶಿ ಇನ್ನಿಂಗ್ಸ್ ಆರಂಭ: ಬಸವರಾಜ ಬೊಮ್ಮಾಯಿ



**ಬೆಂಗಳೂರು, ಮೇ 30:** ಗೊಂದಲದ ವಾತಾವರಣದಲ್ಲಿ ಡಿ.ಕೆ. ಶಿವಕುಮಾರ್ ತಮ್ಮ ಇನ್ನಿಂಗ್ಸ್ ಆರಂಭಿಸುತ್ತಿದ್ದಾರೆ. ರಾಜ್ಯದ ಜನತೆ ಈಗಾಗಲೇ ಈ ಸರ್ಕಾರದ ಮೇಲೆ ವಿಶ್ವಾಸ ಕಳೆದುಕೊಂಡಿದ್ದಾರೆ. ಅವರಿಗೆ ಅವಕಾಶ ಬಂದಾಗ ಈ ಸರ್ಕಾರವನ್ನು ಕಿತ್ತೊಗೆಯಲಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲಿನ ನಾಯಕತ್ವ ಬದಲಾವಣೆ ರಾಜ್ಯದ ಆಡಳಿತದಲ್ಲಿ ಯಾವುದೇ ಪರಿಣಾಮ ಬೀರುವುದಿಲ್ಲ ಇದು ಕಾಂಗ್ರೆಸ್ ದುರಾಡಳಿತದ ಮುಂದುವರೆದ ಭಾಗ. ರಾಜ್ಯದ ಆರ್ಥಿಕತೆಯ ವಿಚಾರದಲ್ಲಿ ಈಗಾಗಲೇ ಸಾಕಷ್ಟು ಹಾನಿ ಮಾಡಲಾಗಿದೆ. ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯ ಆಗಿದ್ದು, ವ್ಯವಸ್ಥೆಯನ್ನು ಸುಧಾರಿಸಲು ಡಿ.ಕೆ. ಶಿವಕುಮಾರ್ ಅವರಿಗೆ ಸಮಯ ಸಿಗುತ್ತದೆಯೊ ಇಲ್ಲವೊ ಗೊತ್ತಿಲ್ಲ ಎಂದರು.

ಸಂಪುಟ ರಚನೆಯ ಕಸರತ್ತಿನಲ್ಲಿ ಆಂತರಿಕ ಭಿನ್ನಮತ ಹೊರಬರುತ್ತಿದೆ. ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ, ಪರಮೇಶ್ವರ್ ಅವರನ್ನು ಮುಖ್ಯಮಂತ್ರಿ ಮಾಡದಿರುವುದರಿಂದ ಒಬಿಸಿ ಮತ್ತು ಎಸ್ಸಿ ಎಸ್ಟಿ ಸಮುದಾಯದವರು ಅಸಮಾಧಾನಗೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಡಿ.ಕೆ. ಶಿವಕುಮಾರ್ ಗೊಂದಲದ ವಾತಾವರಣದಲ್ಲಿ ತಮ್ಮ ಇನ್ನಿಂಗ್ಸನ್ನು ಆರಂಭಿಸುತ್ತಿದ್ದಾರೆ ಎಂದರು.

ಹೊಸ ಸಂಪುಟ ಸೇರಲು ಪ್ರಥಮ ಬಾರಿ ಆಯ್ಕೆಯಾದವರಿಂದ ಹಿಡಿದು ಐದಾರು ಬಾರಿ ಆಯ್ಕೆಯಾದವರೂ ಲಾಬಿ ಮಾಡುತ್ತಿದ್ದಾರೆ. ಸಿದ್ದರಾಮಯ್ಯ ಸಂಪುಟದಲ್ಲಿದ್ದ ಸಚಿವರು ಸ್ಥಾನ ಬಿಟ್ಟು ಕೊಡಲು ಸಿದ್ದರಿಲ್ಲ. ಹೀಗಾಗಿ ದೊಡ್ಡ ಮಟ್ಟದ ಪೈಪೋಟಿ ನಡೆಯುತ್ತಿದೆ. ಅಲ್ಲದೇ ನೂತನ ಸಂಪುಟ ರಚನೆಯಲ್ಲಿ ಸಿದ್ದರಾಮಯ್ಯ ಮಹತ್ವದ ಪಾತ್ರ ನಿರ್ವಹಿಸಲಿದ್ದಾರೆ. ಅಲ್ಲದೇ ಅವರು ರಾಜ್ಯ ರಾಜಕಾರಣ ದಲ್ಲಿಯೇ ಸಕ್ರೀಯರಾಗಿರುತ್ತೇನೆ ಎಂದು ಹೇಳಿರುವುದು ಅಪಾಯಕಾರಿ ಸಂದೇಶವಾಗಿದ್ದು ಇದು ಡಿ. ಕೆ.ಶಿವಕುಮಾರ್ ಮತ್ತು ಅವರ ಸರ್ಕಾರದ ಮೇಲೆ ತೂಗು ಕತ್ತಿ ನೇತಾಡಿದಂತಾಗುತ್ತದೆ ಎಂದು ಹೇಳಿದರು.

# ಸಾರ್ವಜನಿಕ ಗ್ರಂಥಾಲಯ ಆಯುಕ್ತ ಜಗದೀಶ್ ಅವರಿಂದ ದಿಟ್ಟಹೆಜ್ಜೆ

## ಪುಸ್ತಕಗಳ ಖರೀದಿಯಲ್ಲಿನ ಕೋಟ್ಯಂತರ ರೂ. ಅವ್ಯವಹಾರಕ್ಕೆ ತಡೆ

**ಬೆಂಗಳೂರು, ಮೇ 30:** ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ನಡೆಯುತ್ತಿದ್ದ ಪುಸ್ತಕ ಖರೀದಿ ಅವ್ಯವಹಾರಗಳಿಗೆ ಇಲಾಖೆಯ ನೂತನ ಆಯುಕ್ತ ಜಿ.ಜಗದೀಶ್ ಅವರು ತಡೆ ನೀಡುವ ಮೂಲಕ ದಿಟ್ಟತನ ಮೆರೆದಿದ್ದಾರೆ.

ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಯಾಗಿದ್ದು, ಇತ್ತೀಚೆಗಷ್ಟೇ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಹೆಚ್ಚುವರಿ ಪ್ರಭಾರವನ್ನು ವಹಿಸಿಕೊಂಡಿರುವ ಜಿ.ಜಗದೀಶ್ ಇಲಾಖೆಯಲ್ಲಿನ ಅಕ್ರಮಗಳ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಿದ್ದಾರೆ. ಬೆಂಗಳೂರಿನ ಭೂಗಳ್ಳರ ವಿರುದ್ಧ ಬುಲ್ಡೋಜರ್ ಬಳಸಿ ಕೋಟ್ಯಂತರ ರೂಪಾಯಿ ಮೌಲ್ಯದ ಸರ್ಕಾರಿ ಜಮೀನು ಮತ್ತು ನಿವೇಶನಗಳನ್ನು ಅತಿಕ್ರಮಣಕಾರರಿಂದ ವಾಪಸ್ಸು ಪಡೆದು ದಿಟ್ಟ ಅಧಿಕಾರಿ ಎನಿಸಿಕೊಂಡಿರುವ ಜಗದೀಶ್ ರವರು, ಇದೀಗ ಗ್ರಂಥಾಲಯ ಇಲಾಖೆಯನ್ನೂ ಸುವ್ಯವಸ್ಥೆಗೆ ತರಲು ಕಠಿಣ ನಿರ್ಧಾರ ಕೈಗೊಂಡಿದ್ದಾರೆ.

ಎರಡು ಪ್ರಕಾಶನಗಳ ಪುಸ್ತಕ ಖರೀದಿ ತಡೆಹಿಡಿಯಲು ಸುತ್ತೋಲೆ ಹೊರಡಿಸಿದ್ದು, ಇಲಾಖೆಯ ಕೆಲವು ಅಧಿಕಾರಿಗಳು ಮತ್ತು ಪ್ರಕಾಶಕರ ಅಕ್ರಮ ಒಳಸಂಚಿನಿಂದಾಗಿ ಸರ್ಕಾರಕ್ಕೆ ಕೋಟ್ಯಂತರ ರೂ.ಗಳ ನಷ್ಟವಾಗುತ್ತಿರುವುದು ಕಂಡುಬಂದಿದೆ. ಈ ಹಿಂದೆ ಸರ್ಕಾರವು ಇಲಾಖೆಯ ಹಿಂದಿನ ನಿರ್ದೇಶಕರನ್ನು ಅಮಾನತುಗೊಳಿಸಿ ತನಿಖೆ ಕೈಗೊಂಡಿದ್ದರೂ, ಕೆಲವು ಪ್ರಕಾಶಕರು ತಮ್ಮ ಅಕ್ರಮ ಚಟುವಟಿಕೆಗಳನ್ನು ಮುಂದುವರಿಸಿದ್ದರು. ಇದೀಗ ಇಲಾಖೆಯ ಪುಸ್ತಕ ಖರೀದಿಯಲ್ಲಿನ ಅಕ್ರಮವನ್ನು ಬಯಲಿಗೆಳೆದಿರುವ ಆಯುಕ್ತರು, ಪ್ರಮುಖವಾಗಿ ಎರಡು ಪ್ರಕಾಶನ ಸಂಸ್ಥೆಗಳ ವಿರುದ್ಧ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ.

ಅಲ್ಲದೆ, ಸರ್ಕಾರದಿಂದ ಮುಂದಿನ ಆದೇಶ ಬರುವವರೆಗೆ ಸೃಷ್ಠಿ ಪಬ್ಲಿಕೇಷನ್ಸ್ ಮತ್ತು ದೇಸಿ ಪುಸ್ತಕ ಪ್ರಕಾಶನ ಸಂಸ್ಥೆಗಳ ಪುಸ್ತಕ ಖರೀದಿಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ತಡೆಹಿಡಿಯಲು ಇಲಾಖೆಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸುತ್ತೋಲೆ ಮೂಲಕ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಆಯುಕ್ತರ ಈ ದಿಢೀರ್ ಮತ್ತು ದಿಟ್ಟಕ್ರಮಇಲಾಖೆಯಲ್ಲಿ ಅವ್ಯವಹಾರ ನಡೆಸುತ್ತಿದ್ದ ಕೆಲವು ಪ್ರಕಾಶಕರು ಹಾಗೂ ಭ್ರಷ್ಟ ಅಧಿಕಾರಿಗಳಲ್ಲಿ ನಡುಕ ಹುಟ್ಟಿಸಿದೆ. ಕೇವಲ ಇಷ್ಟಕ್ಕೇ ನಿಲ್ಲಿಸದೆ, ಮುಂದಿನ ದಿನಗಳಲ್ಲಿ ಇಲಾಖೆಯಲ್ಲಿ ಆರೋಪ ಎದುರಿಸುತ್ತಿರುವ ಎಲ್ಲಾ ಪ್ರಕಾಶನ ಸಂಸ್ಥೆಗಳ ವಿರುದ್ಧವೂ ಹಂತ-ಹಂತವಾಗಿ ಪ್ರಾಥಮಿಕ ವಿಚಾರಣೆಯನ್ನು ಕೈಗೊಂಡು ಕಾನೂನು ಕ್ರಮ ಜರುಗಿಸಲು ಆಯುಕ್ತರು ನಿರ್ಧರಿಸಿದ್ದಾರೆ.

ಇಲಾಖೆಯಲ್ಲಿ ಪಾರದರ್ಶಕತೆ ತರಲು ಮತ್ತು ಸರ್ಕಾರದ ಹಣ ವ್ಯರ್ಥವಾಗುವುದನ್ನು ತಡೆಯಲು ಈ ಕಠಿಣ ಕ್ರಮವನ್ನು ಕೈಗೊಳ್ಳಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಮನಬಂದಂತೆ ತೆರಿಗೆ ಹೇರುವ ಸರ್ಕಾರದಿಂದ ಜನರ ಬದುಕಿಗೆ ಗ್ಯಾರಂಟಿ ಇಲ್ಲ

**ಮಳೆ ಅವಾಂತರ ನಿಭಾಯಿಸುವಲ್ಲಿ ವಿಫಲ, ಸಾಮಾನ್ಯಜನರ ಜೀವಕ್ಕೆ ಬೆಲೆ ಇಲ್ಲ: ಡಾ.ಅಶ್ವತ್ಥನಾರಾಯಣ**



**ಬೆಂಗಳೂರು, ಮೇ 30:** ಸಿಕ್ಕಿದ್ದಕ್ಕೆಲ್ಲ ತೆರಿಗೆ ಹಾಕಿ ಸಂಗ್ರಹಿಸುವ ಸರ್ಕಾರ ಜನರ ಬದುಕಿಗೆ ಯಾವುದೇ ಗ್ಯಾರಂಟಿ ನೀಡಿಲ್ಲ. ಬೆಂಗಳೂರು ನಗರದಲ್ಲಿ ಮಳೆ ಬಂದರೆ ಬದುಕುತ್ತೇನೆ ಎಂಬ ಭರವಸೆ ಇಲ್ಲದೇ ಭಯದಲ್ಲೇ ದಿನ ಕಳೆಯುವಂತೆ ಮಾಡಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರ ಬದುಕಿದೆಯೇ ಇಲ್ಲವೇ ಗೊತ್ತಿಲ್ಲ. ಸರ್ಕಾರ ಎಲ್ಲ ರೀತಿಯಲ್ಲಿ ವಿಫಲವಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್.ಅಶ್ವತ್ಥನಾರಾಯಣ ಅವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಮಳೆ ಬಂದರೆ ಪ್ರತಿವರ್ಷ ನೂರಾರು ಸಮಸ್ಯೆ ಕಾಡಲಾರಂಭಿಸುತ್ತವೆ. ಆದರೆ ಒಂದೇ ಒಂದು ರೂಪಾಯಿ ಪರಿಹಾರ ಇಲ್ಲ. ಸತತ ಮಳೆಗೆ ಬೌರಿಂಗ್ ಆಸ್ಪತ್ರೆ ಸಮೀಪ ಕಾಪೌಂಡ್ ಕುಸಿದು ಏಳು ಜನ ಮೃತಪಟ್ಟರು. ನಿನ್ನೆ ಒಬ್ಬರು ಮೃತಪಟ್ಟಿದ್ದಾರೆ. ಇವೆಲ್ಲ ಲೆಕ್ಕಕ್ಕೆ ಸಿಕ್ಕ ಸಾವು. ಇನ್ನು ಗುಂಡಿಯಲ್ಲಿ ಬಿದ್ದು, ಮರದ ಕೊಂಬೆ ಬಿದ್ದು ಸತ್ತವರ ಲೆಕ್ಕ ಇಲ್ಲ. ಈ ಸರ್ಕಾರ ಜನರ ಸಾವಿಗೆ ತಲೆ ಕೆಡಿಸಿಕೊಂಡಿಲ್ಲ ಎಂದು ದೂರಿದರು.


ಮುಂಗಾರಿಗೆ ಮುಂಚೆ ನಗರದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆ ಸರ್ಕಾರಕ್ಕೆ ಗಮನವೇ ಇಲ್ಲ. ತಗ್ಗು ಪ್ರದೇಶಗಳಿಗ ನೀರು ನುಗ್ಗುತ್ತಲೇ ಇದೆ. ಮಾರತಹಳ್ಳಿ, ಸಿಲ್ಕ್ ಬೋರ್ಡ್, ಕೆ ಆರ್ ಸರ್ಕಲ್ ಜಂಕ್ಷನ್‌ಗಳು ಜಲಾವೃತವಾಗುತ್ತಿವೆ. ಇದರ ಬಗ್ಗೆ ಸರ್ಕಾರ ಗಮನವೇ ನೀಡುತ್ತಿಲ್ಲ ಎಂದು ಆಕ್ಷೇಪಿಸಿದರು.

ಮನೆ ತೆರಿಗೆ, ಘನತ್ಯಾಜ್ಯ ತೆರಿಗೆ, ವಿವಿಧ ಬಳಕೆ ಶುಲ್ಕ ಹೀಗೆ ಹಲವಾರು ತೆರಿಗೆಯನ್ನು ನಗರದ ಜನರ ಮೇಲೆ ಹಾಕಿ ಸಾವಿರಾರು ಕೋಟಿ ಸಂಗ್ರಹಿಸುವ ಸರ್ಕಾರ ಜನರಿಗಾಗಿ ಸೇವೆ ನೀಡುವುದು ಏನೂ ಇಲ್ಲ. ಎಲ್ಲದಕ್ಕೂ ಕೈಚೆಲ್ಲಿ ಕುಳಿತಿರುವ ಸರ್ಕಾರಕ್ಕೆ ನಾವು ಪದೇಪದೆ ಹೇಳಿದರೂ ನಿರ್ಲಕ್ಷ್ಯ ಮಾಡುತ್ತಿದೆ. ಆದ್ದರಿಂದ ತಕ್ಷಣ ಕ್ರಮವಹಿಸಬೇಕು. ಇದಕ್ಕೆಲ್ಲ ಹಣ ಇದೆ. ನಗರ ಮತ್ತು ರಾಜ್ಯ ನಿರ್ವಹಣೆಯನ್ನು ಕಾಂಗ್ರೆಸ್ ಸರಿಯಾಗಿ ಮಾಡುತ್ತಿಲ್ಲ ಎಂದು ಆರೋಪಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ. ರಾಮಮೂರ್ತಿ, ರಾಜ್ಯ ವಕ್ತಾರ ಪ್ರಕಾಶ್ ಶೇಷರಾಘವಾಚಾರ್, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್.ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ ಅವರು ಇದ್ದರು.

ಜನರ ಕಾಳಜಿಗಿಂತ ಕುರ್ಚಿ ಕಚ್ಚಾಟವೇ ಮುಖ್ಯ

ಜನರ ಕಾಳಜಿಗಿಂತ ಕುರ್ಚಿ ಕಚ್ಚಾಟವೇ ದೊಡ್ಡದಾಗಿದೆ. ಜನರ ಸಮಸ್ಯೆಯನ್ನು ಸಂಪೂರ್ಣವಾಗಿ ಮರೆತಿದೆ. ಬ್ರ್ಯಾಂಡ್ ಬೆಂಗಳೂರು ಕೇವಲ ಬ್ರ್ಯಾಂಡ್‌ಗೆ ಸೀಮಿತವಾಗಿದೆ. ಇದು ಅವ್ಯವಸ್ಥೆಯ ಬೆಂಗಳೂರು ಆಗಿದೆ ಎಂದರು. ಇನ್ನೂ ಮಳೆ ಆರ್ಭಟ ಶುರುವಾಗಿಲ್ಲ. ಸ್ವಲ್ಪ ಮಳೆಗೇ ಈ ರೀತಿ ಆಗಿದೆ. ಮಳೆ ಮುಂಚೆ ಮುನ್ನೆಚ್ಚರಿಕೆ ಕ್ರಮ ಜಾರಿ ಮಾಡಬೇಕು. ಅದಿಲ್ಲದಿದ್ದರೆ ಕೇವಲ ತೆರಿಗೆ ಸಂಗ್ರಹ ಮಾಡಿ ಏನು ಪ್ರಯೋಜನ. ಬೆಸ್ಕಾಂನಿಂದ, ಜಲಮಂಡಳಿಯಿಂದ ಸಾಕಷ್ಟು ತೆರಿಗೆ ಸರ್ಕಾರಕ್ಕೆ ಬರುತ್ತಿದೆ. ಆದರೆ ಇದನ್ನು ಸದುಪಯೋಗ ಮಾಡುತ್ತಿಲ್ಲ ಎಂದು ಡಾ.ಸಿ.ಎನ್. ಅಶ್ವತ್ಥನಾರಾಯಣ ಹೇಳಿದರು.



ಚಿಕ್ಕಬಳ್ಳಾಪುರದಲ್ಲಿ ಮೇ 31 ಭಾನುವಾರ ನಡೆಯಲಿರುವ ಪತ್ರಕರ್ತರ ಮಕ್ಕಳ ರಾಜ್ಯಮಟ್ಟದ ಕೆಯುಡಬ್ಲ್ಯುಜೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು, ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ವಿಧಾನಸೌಧದಲ್ಲಿ ಭೇಟಿ ಮಾಡಿ ಆಹ್ವಾನಿಸಿದರು.

# ತಾವು ಗಳಿಸಿದ ಸಂಪತ್ತನ್ನು ಸಮಾಜದ ಏಳಿಗೆಗೆ ಧಾರ್ಮಿಕ ಕಾರ್ಯಗಳಿಗೆ ನೀಡುತ್ತಿರುವುದೇ ನಿಜವಾದ ಧರ್ಮ: ಸಂಸದ ಡಾ. ಸಿ.ಎನ್.ಮಂಜುನಾಥ್

**"35 ರಿಂದ 40 ಕೋಟಿ ರೂ. ವೆಚ್ಚದಲ್ಲಿ ಭವ್ಯ ಬೆಟ್ಟದ ರಂಗನಾಥಸ್ವಾಮಿ ನೂತನ ದೇವಸ್ಥಾನ ನಿರ್ಮಾಣ"**

ಶನಿವಾರ ಕುಣಿಗಲ್ ತಾಲ್ಲೂಕಿನ ಬಿಳಿದೇವಾಲಯದ ಸಮೀಪದಲ್ಲಿರುವ ಇತಿಹಾಸ ಪ್ರಸಿದ್ಧ ಉಡಮುಡಿ ಶ್ರೀ ಬೆಟ್ಟದ ರಂಗನಾಥ ಸ್ವಾಮಿ ಮೊದಲನೇ ವರ್ಷದ ಜಾತ್ರಾ ಮಹೋತ್ಸವ" ಕಾರ್ಯಕ್ರಮದಲ್ಲಿ ಜನಪ್ರಿಯ ಬೆಂಗಳೂರು ಗ್ರಾಮಾಂತರ ಲೋಕಸಭಾ ಸಂಸದರಾದ ಪದ್ಮಶ್ರೀ ಡಾ. ಸಿ. ಎನ್. ಮಂಜುನಾಥ್ ರವರು ಭಾಗವಹಿಸಿ, ಶ್ರೀ ರಂಗನಾಥ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ಯ ಸಂಸದರು, ಶತಮಾನಗಳ ಇತಿಹಾಸ ಹೊಂದಿರುವ ಉಡಮುಡಿ ಶ್ರೀ ಬೆಟ್ಟದ ರಂಗನಾಥ ಸ್ವಾಮಿ ಕ್ಷೇತ್ರದ ಮಹತ್ವವನ್ನು ಸ್ಮರಿಸಿ, ಈ ದೇವಾಲಯವು ಭಕ್ತಿ, ನಂಬಿಕೆ ಹಾಗೂ ಧಾರ್ಮಿಕ ಪರಂಪರೆಯ ಪ್ರತೀಕವಾಗಿದೆ ಎಂದು ತಿಳಿಸಿದರು.

ದೇವಾಲಯಕ್ಕೆ ಬಾಗಿಲು ಇಲ್ಲದಿರುವ ವಿಶೇಷದ ಕುರಿತು ಉಲ್ಲೇಖಿಸಿ, ನೂರಾರು ವರ್ಷಗಳ ಹಿಂದೆ ಜನರ ಬದುಕಿನಲ್ಲಿ ಪ್ರಾಮಾಣಿಕತೆ, ಧರ್ಮನಿಷ್ಠೆ ಮತ್ತು ಪರಸ್ಪರ ವಿಶ್ವಾಸ ಹೆಚ್ಚಾಗಿತ್ತು. ಆಗ ಮನೆಗಳಿಗೂ ಬಾಗಿಲುಗಳ ಅವಶ್ಯಕತೆ ಇರಲಿಲ್ಲ. ಆದರೆ



ಇಂದು ಅತ್ಯಾಧುನಿಕ ಭದ್ರತಾ ವ್ಯವಸ್ಥೆಗಳು, ಲಾಕರ್‌ಗಳು ಇದ್ದರೂ ಕಳ್ಳತನಗಳನ್ನು ಸಂಪೂರ್ಣವಾಗಿ ತಡೆಯಲು ಸಾಧ್ಯವಾಗುತ್ತಿಲ್ಲ. ಇದು ಸಮಾಜದಲ್ಲಿ ನೈತಿಕ ಮೌಲ್ಯಗಳ ಮಹತ್ವವನ್ನು ನೆನಪಿಸುತ್ತದೆ? ಎಂದು ಹೇಳಿದರು.

ಅದೇ ರೀತಿ, ಸ್ಥಳೀಯ ಉದ್ಯಮಿಗಳಾದ ವಸಂತ್ ಹಾಗೂ ರಾಮಕೃಷ್ಣ ಕುಟುಂಬದವರು 35 ರಿಂದ 40 ಕೋಟಿಗೂ ಅಧಿಕ ವೆಚ್ಚದಲ್ಲಿ ನೂತನ ದೇವಾಲಯ ನಿರ್ಮಾಣ ಹಾಗೂ ಭಕ್ತರು ಮತ್ತು ಸಾರ್ವಜನಿಕರಿಗೆ ಅತ್ಯುತ್ತಮ ಸೌಲಭ್ಯಗಳನ್ನು ಕಲ್ಪಿಸುತ್ತಿರುವ ಕಾರ್ಯವನ್ನು ಶ್ಲಾಘಿಸಿದರು.

ದುಡ್ಡು ಇರುವುದು ಒಂದು ವಿಷಯ, ಆದರೆ ಸಮಾಜದ ಹಿತಕ್ಕಾಗಿ ಅದನ್ನು ವಿನಿಯೋಗಿಸುವ ಹೃದಯವಂತಿಕೆ ಎಲ್ಲರಲ್ಲೂ ಇರುವುದಿಲ್ಲ. ಇಂತಹ ಧಾರ್ಮಿಕ ಮತ್ತು ಜನೋಪಯೋಗಿ ಕಾರ್ಯಗಳು ಸಮಾಜಕ್ಕೆ ಮಾದರಿಯಾಗಿವೆ? ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕುಣಿಗಲ್ ತಾಲ್ಲೂಕಿನ ಅರೆಶಂಕರ ಮಠದ ಸಿದ್ದರಾಮ ಚೈತನ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಕುಣಿಗಲ್ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಜಗದೀಶ್ ನಾಗರಾಜಯ್ಯ, ಕುಣಿಗಲ್ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಶ್ರೀನಿವಾಸ್, ಧಾರ್ಮಿಕ ಮುಖಂಡರು, ಸ್ಥಳೀಯ ಜನಪ್ರತಿನಿಧಿಗಳು, ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ವಿಯೆಟ್ನಾಂ ಜೊತೆ ಬ್ರಹ್ಮೋಸ್ ರಫ್ತು ಒಪ್ಪಂದಕ್ಕೆ ಭಾರತ ದೃಢೀಕರಣ; ಇಂಡೋನೇಷ್ಯಾ ಒಪ್ಪಂದ ಅಂತಿಮ ಹಂತದಲ್ಲಿ



**ನವದೆಹಲಿ, ಮೇ 30:** ಆಗ್ನೇಯ ಏಷ್ಯಾದಲ್ಲಿ ಭಾರತದ ರಕ್ಷಣಾ ರಫ್ತು ಮತ್ತು ಕಾರ್ಯತಂತ್ರದ ಸಂಪರ್ಕಕ್ಕೆ ಸಂಬಂಧಿಸಿದಂತೆ ಪ್ರಮುಖ ಬೆಳವಣಿಗೆಯಲ್ಲಿ, ಇಂಡೋನೇಷ್ಯಾ ಜೊತೆಗಿನ ಮಾತುಕತೆಗಳು ಅಂತಿಮ ಹಂತದಲ್ಲಿದ್ದಾಗ, ವಿಯೆಟ್ನಾಂ ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿ ವ್ಯವಸ್ಥೆಯನ್ನು ಸ್ವಾಧೀನ ಪಡಿಸಿಕೊಳ್ಳುವ ಒಪ್ಪಂದಕ್ಕೆ ಸಹಿ ಹಾಕಿದೆ ಎಂದು ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ದೃಢಪಡಿಸಿದ್ದಾರೆ. ಸಿಂಗಾಪುರದಲ್ಲಿ ಇಂಟರ್‌ನ್ಯಾಷನಲ್ ಇನ್ಸ್ಟಿಟ್ಯೂಟ್ ಫಾರ್ ಸ್ಟ್ರಾಟೆಜಿಕ್ ಸ್ಟಡೀಸ್ (ಐಐಎಸ್‌ಎಸ್) ಆಯೋಜಿಸಿದ್ದ 23 ನೇ ಶಾಂಗ್ರಿಲಾ ಸಂವಾದದಲ್ಲಿ ನಡೆದ ಫಲಕ ಚರ್ಚೆಯ ಸಂದರ್ಭದಲ್ಲಿ ಈ ಘೋಷಣೆ ಮಾಡಲಾಯಿತು, ಇದು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ರಕ್ಷಣಾ ಪಾಲುದಾರನಾಗಿ ಭಾರತದ ಬೆಳೆಯುತ್ತಿರುವ ಸ್ಥಾನಮಾನವನ್ನು ಒತ್ತಿಹೇಳುತ್ತದೆ. ಆಗ್ನೇಯ ಏಷ್ಯಾದಲ್ಲಿ ಬ್ರಹ್ಮೋಸ್ ಕ್ಷಿಪಣಿಯ ಸಂಭಾವ್ಯ ಖರೀದಿದಾರರ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಂಗ್, ಸುಧಾರಿತ ರಕ್ಷಣಾ ತಂತ್ರಜ್ಞಾನಗಳ ವರ್ಗಾವಣೆಯು ನಂಬಿಕೆ ಮತ್ತು ಕಾರ್ಯತಂತ್ರದ ಪಾಲುದಾರಿಕೆಗಳನ್ನು ಆಧರಿಸಿದೆ ಎಂದು ಹೇಳಿದರು.

ನಡೆಯುತ್ತಿರುವ ಮಾತುಕತೆಗಳ ಕುರಿತು ನವೀಕರಣವನ್ನು ಒದಗಿಸುತ್ತಾ, ಸಿಂಗ್ ಹೇಳಿದರು, "ಇಂಡೋನೇಷ್ಯಾ ಮತ್ತು ವಿಯೆಟ್ನಾಂ ಎರಡರೊಂದಿಗೂ ಒಪ್ಪಂದವು ಅಂತಿಮ ಹಂತದಲ್ಲಿದೆ ಎಂಬುದು ನನ್ನ ತಿಳುವಳಿಕೆ. ವಾಸ್ತವವಾಗಿ, ವಿಯೆಟ್ನಾಂಗೆ, ಅದು ಈಗಾಗಲೇ ಸಹಿ ಮಾಡಲಾಗಿದೆ ಎಂದು ನಾನು ಅರ್ಥಮಾಡಿಕೊಂಡಿದ್ದೇನೆ. ಬಹುಶಃ ಸಾರ್ವಜನಿಕವಾಗಿ ಘೋಷಿಸಲಾಗಿಲ್ಲ, ಆದರೆ ಅದು ಈಗಾಗಲೇ ಸಹಿ ಮಾಡಲಾಗಿದೆ." ವಿಯೆಟ್ನಾಂ ಜೊತೆಗಿನ ವರದಿಯಾದ ಒಪ್ಪಂದವು ನವದೆಹಲಿ ಮತ್ತು ಹನೋಯ್ ನಡುವಿನ ಕಾರ್ಯತಂತ್ರದ ಸಹಕಾರವನ್ನು ಮತ್ತಷ್ಟು ಗಾಢವಾಗಿಸುವ ನಿರೀಕ್ಷೆಯಿದೆ, ಇದು ಈಗಾಗಲೇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಕಾಯ್ದುಕೊಂಡಿದೆ. ದಕ್ಷಿಣ ಚೀನಾ ಸಮುದ್ರದಲ್ಲಿ ಹೆಚ್ಚುತ್ತಿರುವ ಭದ್ರತಾ ಕಾಳಜಿಗಳ ನಡುವೆ ವಿಯೆಟ್ನಾಂ ತನ್ನ ಸಶಸ್ತ್ರ ಪಡೆಗಳನ್ನು ಸ್ಥಿರವಾಗಿ ಆಧುನೀಕರಿಸುತ್ತಿದೆ ಮತ್ತು ಕಡಲ ಸಾಮರ್ಥ್ಯಗಳನ್ನು ಹೆಚ್ಚಿಸುತ್ತಿದೆ. ಇಂಡೋನೇಷ್ಯಾದೊಂದಿಗಿನ ಸಂಭಾವ್ಯ ಒಪ್ಪಂದವು ಪ್ರಮುಖ ಆಗ್ನೇಯ ಏಷ್ಯಾದ ಕಡಲ ರಾಷ್ಟ್ರಗಳೊಂದಿಗೆ ಭಾರತದ ರಕ್ಷಣಾ ನಿಶ್ಚಿತಾರ್ಥವನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ನವದೆಹಲಿಯ ವಿಶಾಲವಾದ ಪೂರ್ವ-ಆಕ್ಟ್ ನೀತಿ ಮತ್ತು ಇಂಡೋ-ಪೆಸಿಫಿಕ್ ದೃಷ್ಟಿಕೋನಕ್ಕೆ ಹೊಂದಿಕೆಯಾಗುತ್ತದೆ.

ಜನವರಿ 2022 ರಲ್ಲಿ, ಫಿಲಿಪೈನ್ಸ್ ಸುಮಾರು 375 ದಶಲಕ್ಷ ಡಾಲರ್ ಮೌಲ್ಯದ ಹೆಗ್ಗುರುತು ಕರಾವಳಿ ರಕ್ಷಣಾ ಕ್ಷಿಪಣಿ ಒಪ್ಪಂದದ ಮೂಲಕ ಬ್ರಹ್ಮೋಸ್ ಕ್ಷಿಪಣಿ ವ್ಯವಸ್ಥೆಗೆ ಮೊದಲ ವಿದೇಶಿ ಗ್ರಾಹಕವಾಯಿತು. ಈ ಒಪ್ಪಂದವನ್ನು ಭಾರತದ ರಕ್ಷಣಾ ರಫ್ತು ಮಹತ್ವಾಕಾಂಕ್ಷೆಗಳಿಗೆ ಒಂದು ಪ್ರಗತಿ ಎಂದು ವ್ಯಾಪಕವಾಗಿ ನೋಡಲಾಯಿತು.

> ಬ್ರಹ್ಮೋಸ್ ಕ್ಷಿಪಣಿಯು ವಿಶ್ವದ ಅತ್ಯಂತ ವೇಗದ ಕಾರ್ಯಾಚರಣೆಯ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳಲ್ಲಿ ಒಂದಾಗಿದೆ ಮತ್ತು ಇದನ್ನು ಭಾರತದ ಬ್ರಹ್ಮೋಸ್ ಏರೋಸ್ಪೇಸ್ ಜಂಟಿಯಾಗಿ ಅಭಿವೃದ್ಧಿಪಡಿಸಿದೆ, ಇದು ಭಾರತದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ (DRDO) ಮತ್ತು ರಷ್ಯಾದ NPO ಮಶಿನೋಸ್ಟ್ರೋಯೆನಿಯಾ ನಡುವಿನ ಸಹಯೋಗವಾಗಿದೆ. ಭೂಮಿ, ಸಮುದ್ರ, ವಾಯು ಮತ್ತು ಜಲಾಂತರ್ಗಾಮಿ ವೇದಿಕೆಗಳಿಂದ ಉಡಾವಣೆ ಮಾಡುವ ಸಾಮರ್ಥ್ಯವಿರುವ ಬ್ರಹ್ಮೋಸ್, ಮ್ಯಾಕ್ 3 ಸಮೀಪಿಸುತ್ತಿರುವ ವೇಗದಲ್ಲಿ ಗುರಿಗಳನ್ನು ಹೊಡೆಯಬಲ್ಲದು, ಇದರಿಂದಾಗಿ ಪ್ರತಿಬಂಧಿಸುವುದು ಕಷ್ಟವಾಗುತ್ತದೆ. ಈ ಕ್ಷಿಪಣಿಯನ್ನು ಭೂ ಮತ್ತು ನೌಕಾ ಗುರಿಗಳ ವಿರುದ್ಧ ನಿಖರವಾದ ದಾಳಿಗಾಗಿ ವಿನ್ಯಾಸಗೊಳಿಸಲಾಗಿದೆ ಮತ್ತು ಇದು ಭಾರತದ ಸಾಂಪ್ರದಾಯಿಕ ತಡೆಗಟ್ಟುವಿಕೆ ಸಾಮರ್ಥ್ಯದ ಪ್ರಮುಖ ಅಂಶವಾಗಿದೆ.

# ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ರಾಷ್ಟ್ರೀಯ ಪ್ರಶಸ್ತಿಯ ಗರಿ: ಕ್ಲೌಡ್ ಅಡಾಪ್ಷನ್ ಸಾಧನೆಗೆ ಸಂದ ಗೌರವ

**ಬೆಂಗಳೂರು, ಮೇ 30 :** ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ತಂತ್ರಾಂಶ ಅಭಿವೃದ್ಧಿ ಹಾಗೂ ಅನುಷ್ಠಾನದಲ್ಲಿ ತೋರಿದ ಅತ್ಯುತ್ತಮ ಸಾಧನೆಗಾಗಿ ರಾಷ್ಟ್ರಮಟ್ಟದ ಪ್ರತಿಷ್ಠಿತ ಪ್ರಶಸ್ತಿಗೆ ಭಾಜನವಾಗಿದೆ. ನವದೆಹಲಿಯ ಹೊಟೇಲ್ ಇರೋಸ್ ಸಭಾಂಗಣದಲ್ಲಿ ಮೇ 29ರಂದು ಆಯೋಜಿಸಲಾಗಿದ್ದ **'11th INDIA PSU IT FORUM & AWARDS 2026'** ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಸಂಸ್ಥೆಗೆ **'Excellence in Cloud Adoption'** ವಿಭಾಗದಡಿಯಲ್ಲಿ ಈ ರಾಷ್ಟ್ರೀಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಂಸ್ಥೆಯ ಪರವಾಗಿ ಈ ಪ್ರತಿಷ್ಠಿತ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗದಗ ವಿಭಾಗೀಯ ಸಂಚಾರ ಅಧಿಕಾರಿಗಳಾದ ಪಡಿಯಪ್ಪ ಮೇತ್ರಿ ಅವರು, **'Governance Now'** ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಕೈಲಾಶ್ ಅಧಿಕಾರಿ ಅವರಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

ರಾಷ್ಟ್ರಮಟ್ಟದಲ್ಲಿ ತಂತ್ರಾಂಶ ಅಭಿವೃದ್ಧಿ ಮತ್ತು ಅನುಷ್ಠಾನದಲ್ಲಿ ಗಮನಾರ್ಹ ಹಾಗೂ ನವೀನ ಸಾಧನೆ ತೋರುವ ಸಾರ್ವಜನಿಕ ಸ್ವಾಮ್ಯದ ಸಂಸ್ಥೆಗಳನ್ನು ಗುರುತಿಸಿ ಪ್ರತಿ ವರ್ಷ ಈ ಪ್ರಶಸ್ತಿಯನ್ನು ನೀಡಲಾಗುತ್ತದೆ. ಸಂಸ್ಥೆಗೆ ಸಂದ ಈ ರಾಷ್ಟ್ರೀಯ ಗೌರವಕ್ಕೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಭರಮಗೌಡ (ರಾಜು) ಅ ಕಾಗೆ, ಉಪಾಧ್ಯಕ್ಷ ಸುನೀಲ್ ಹಣಮನ್ನವರ ಮತ್ತು ವ್ಯವಸ್ಥಾಪಕ ನಿರ್ದೇಶಕ ಪ್ರಿಯಾಂಗಾ ಎಂ. ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ, ಸಂಸ್ಥೆಯು ಈ ಉನ್ನತ ಮಟ್ಟದ ಪ್ರಶಸ್ತಿಯನ್ನು ಮುಡಿಗೇರಿಸಿಕೊಳ್ಳಲು ಹಗಲಿರುಳು ಶ್ರಮಿಸಿದ ತಾಂತ್ರಿಕ ವಿಭಾಗದ ಅಧಿಕಾರಿಗಳು ಹಾಗೂ ಸಮಸ್ತ ಸಿಬ್ಬಂದಿ ವರ್ಗಕ್ಕೆ ಮಂಡಳಿಯ ವತಿಯಿಂದ ಆತ್ಮೀಯ ಅಭಿನಂದನೆಗಳನ್ನು ಸಲ್ಲಿಸಲಾಗಿದೆ. ಸಂಸ್ಥೆಯ ಈ ಡಿಜಿಟಲ್ ಹೆಜ್ಜೆಯು ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸುಗಮಗೊಳಿಸಲು ಹಾಗೂ ಪ್ರಯಾಣಿಕರಿಗೆ ಉತ್ತಮ ಸೇವೆ ನೀಡಲು ಸಹಕಾರಿಯಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ವರಿಷ್ಠರಿಂದ ಸೂಕ್ತ ಆಯ್ಕೆ

**ಕಾಂಗ್ರೆಸ್‌ನಲ್ಲಿ ಒಬ್ಬರಿಗೆ ಒಂದೇ ಹುದ್ದೆ: ಸತೀಶ್ ಜಾರಕಿಹೊಳಿ**

**ಬೆಂಗಳೂರು, ಮೇ 30:** ಕಾಂಗ್ರೆಸ್‌ನಲ್ಲಿ ಒಬ್ಬ ವ್ಯಕ್ತಿ ಒಂದು ಹುದ್ದೆ ಎಂಬ ಬಗ್ಗೆ ಚರ್ಚೆ ನಡೆಯುತ್ತಿದೆ. ಭಾನುವಾರದ ವೇಳೆಗೆ ಎಲ್ಲವೂ ನಿರ್ಧಾರವಾಗಲಿದೆ ಎಂದು ಮಾಜಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುವುದು ಖಚಿತವಾಗಿದೆ. ಹಾಗಾಗಿ ಅವರು ರಾಜ್ಯಪಾಲರನ್ನು ಭೇಟಿ ಮಾಡಿ ಪ್ರಮಾಣವಚನ ಸ್ವೀಕಾರ ಹಾಗೂ ಇತರ ವಿಚಾರಗಳ ಕುರಿತು ಚರ್ಚಿಸಬಹುದು ಎಂದು ಹೇಳಿದರು. ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ತಮ್ಮ ಹೆಸರಿನಂತೆ, ಮಾಜಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೆಸರು ಕೇಳಿ ಬರುತ್ತಿದೆ. ಬಹುಶಃ ಭಾನುವಾರದೊಳಗೆ ಎಲ್ಲವೂ ಬಗೆಹರಿಯಲಿದೆ. ಹೈಕಮಾಂಡ್ ಎರಡು ಮೂರು ಹೆಸರುಗಳನ್ನು ಪರಿಶೀಲಿಸಿ, ಸೂಕ್ತವಾದವರನ್ನು ಆಯ್ಕೆ ಮಾಡಲಿದೆ ಎಂದು ಹೇಳಿದರು.

ಸಂಪುಟದಿಂದ ಹಿರಿಯರನ್ನು ಕೈಬಿಡುವ ಬಗ್ಗೆ ಏನು ಚರ್ಚೆ ನಡೆದಿದೆ ಎಂದು ಗೊತ್ತಿಲ್ಲ. ಆದರೆ ಸಂಪುಟಕ್ಕೆ ಹಳಬರು ಮತ್ತು ಹೊಸಬರು ಎರಡು ಆಯಾಮದಲ್ಲೂ ನೇಮಕವಾಗಬೇಕು. ಹೊಸಬರನ್ನೇ ಇಟ್ಟುಕೊಂಡು ಸರ್ಕಾರ ನಡೆಸಲಾಗುವುದಿಲ್ಲ ಎಂದು ಹೇಳಿದರು. ಉಪಮುಖ್ಯಮಂತ್ರಿ ಹುದ್ದೆಗಳು ಬೇಕೋ ಬೇಡವೋ ಎಂಬುದು ಇನ್ನೂ ನಿರ್ಧಾರವಾಗಿಲ್ಲ. ಎಲ್ಲವೂ ಚರ್ಚೆಯ ಹಂತದಲ್ಲಿದೆ. ಹೈಕಮಾಂಡ್‌ನ ನಾಯಕರು ಬೆಂಗಳೂರಿಗೆ ಬಂದು ಚರ್ಚಿಸಿದ ಬಳಿಕ ನಿರ್ಧರಿಸುತ್ತಾರೆ, ತಮಗೆ ಸಾಮರ್ಥ್ಯ ಇದೆ, ಸಂಪುಟದಲ್ಲಿ ಅವಕಾಶ ಕೊಡಿ ಎಂದು ಎಲ್ಲರೂ ಕೇಳುತ್ತಾರೆ. ಅಂತಿಮವಾಗಿ ಹೈಕಮಾಂಡ್ ತೀರ್ಮಾನ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.

# ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ನಿಯುಕ್ತರಾದ ಡಿ.ಕೆ.ಶಿವಕುಮಾರ್ ಅವರಿಗೆ ರಣದೀಪ್ ಸಿಂಗ್ ಸುರ್ಜೇವಾಲ ಅಭಿನಂದನೆ

**ಸಿದ್ದರಾಮಯ್ಯ ಅವರ ಕಾಲಾವಧಿ ಸುವರ್ಣಯುಗ**



ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ಏಕಮತದಿಂದ ಆಯ್ಕೆಯಾದ ನಾಯಕರಿಗೂ ಹಾಗೂ ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ನಿಯುಕ್ತರಾದ ಡಿ.ಕೆ.ಶಿವಕುಮಾರ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು.

ಹೋರಾಟವೇ ಜೀವನವಾಗಿಸಿಕೊಂಡಿರುವ ಅವರು, ಕಾಂಗ್ರೆಸ್ ಸಿದ್ಧಾಂತಗಳನ್ನು ರಕ್ತದಲ್ಲಿ ಬೆರೆಸಿಕೊಂಡ ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರು, ಅಪರೂಪದ ಸಂಘಟನಾ ಸಾಮರ್ಥ್ಯ ಹೊಂದಿದ ನಾಯಕರು, ಅದಕ್ಕಿಂತಲೂ ಮುಖ್ಯವಾಗಿ, ಏಳು ಕೋಟಿ ಕನ್ನಡಿಗರ ಮೇಲಿನ ಅಪಾರ ಪ್ರೀತಿ, ಕಾಳಜಿ ಮತ್ತು ಕರುಣೆಯನ್ನು ಹೃದಯದಲ್ಲಿ ಹೊತ್ತಿರುವ ಅವರು, ಕರ್ನಾಟಕವನ್ನು ಸಮಗ್ರ ಅಭಿವೃದ್ಧಿ ಮತ್ತು ವೈಭವದ ಹೊಸ ಎತ್ತರಗಳಿಗೆ ಕೊಂಡೊಯ್ಯುವ ಮಹತ್ವಾಕಾಂಕ್ಷಿ ಕನಸನ್ನು ಹೊಂದಿದ್ದಾರೆ. ಅವರ ಎಲ್ಲಾ ಪ್ರಯತ್ನಗಳು ಯಶಸ್ವಿಯಾಗಲಿ ಎಂದು ಹಾರೈಸುತ್ತೇನೆ.

ಸಿದ್ದರಾಮಯ್ಯ ಅವರಿಗೆ ಕರ್ನಾಟಕ ಹಾಗೂ ಕಾಂಗ್ರೆಸ್ ಪಕ್ಷಕ್ಕಾಗಿ ಸಲ್ಲಿಸಿದ ಅಮೂಲ್ಯ ಸೇವೆಗೆ ಹೃತ್ಪೂರ್ವಕ ಧನ್ಯವಾದಗಳು. ಕರ್ನಾಟಕದ ಕಾಂಗ್ರೆಸ್ ಮುಖ್ಯಮಂತ್ರಿಯಾಗಿ ಅವರು ನಿರ್ವಹಿಸಿದ ಎಂಟು ವರ್ಷಗಳ ಅವಧಿ, ದೂರದೃಷ್ಟಿಯ ನಾಯಕತ್ವ, ಸಾಮಾಜಿಕ ನ್ಯಾಯದತ್ತ ಅಚಲ ಬದ್ಧತೆ ಹಾಗೂ ಜನಕಲ್ಯಾಣ ಮತ್ತು ಅಭಿವೃದ್ಧಿಯನ್ನು ಸಮಾನವಾಗಿ ಮುನ್ನಡೆಸಿದ ಸುವರ್ಣಯುಗವಾಗಿ ಸದಾ ನೆನಪಿನಲ್ಲಿ ಉಳಿಯಲಿದೆ.

ವೈಯಕ್ತಿಕವಾಗಿ ಅವರೊಂದಿಗೆ ಕೆಲಸ ಮಾಡುವ, ಅವರ ಅನುಭವ ಮತ್ತು ನಾಯಕತ್ವದಿಂದ ಕಲಿಯುವ ಹಾಗೂ ಕಾಂಗ್ರೆಸ್‌ನ ಅಭಿವೃದ್ಧಿಯೊಂದಿಗೆ ಕಲ್ಯಾಣ ಎಂಬ ತತ್ವವನ್ನು ಸರ್ಕಾರದ ನೀತಿಗಳಾಗಿ ರೂಪಿಸುವ ಅವಕಾಶ ನನಗೆ ದೊರೆತಿದ್ದು ಮಹತ್ತರ ಗೌರವವಾಗಿದೆ. ವಿಶೇಷವಾಗಿ, ಕಾಂಗ್ರೆಸ್‌ನ ಐದು ಗ್ಯಾರಂಟಿಗಳನ್ನು ಜನರ ಬದುಕು ಬದಲಿಸಿದ ಪರಿಣಾಮಕಾರಿ ಕಾರ್ಯಕ್ರಮಗಳಾಗಿ ಜಾರಿಗೊಳಿಸಿದ ಪಯಣ ಎಂದೆಂದಿಗೂ ಸ್ಮರಣೀಯವಾಗಿರುತ್ತದೆ.

ನಮ್ಮ ಶಾಸಕರು, ಸಚಿವರು, ವಿಧಾನ ಪರಿಷತ್ ಸದಸ್ಯರು, ಪಕ್ಷದ ಪದಾಧಿಕಾರಿಗಳು ಹಾಗೂ ಲಕ್ಷಾಂತರ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವ ಮೂಲಕ ಕರ್ನಾಟಕದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷವೇ ಏಕೈಕ ಭರವಸೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ಅವರೆಲ್ಲರಿಗೂ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಕೃತಜ್ಞತೆಗಳು.

ನಾವು ಒಗ್ಗಟ್ಟಾಗಿ ನಿಲ್ಲುತ್ತೇವೆ, ಪರಸ್ಪರ ಐಕ್ಯತೆ ಮತ್ತು ಸಹಕಾರದೊಂದಿಗೆ, ಕರ್ನಾಟಕದ ಅಭಿವೃದ್ಧಿಗಾಗಿ,

ಕರ್ನಾಟಕದ ಜನರ ಕಲ್ಯಾಣಕ್ಕಾಗಿ, ಶಾಂತಿ, ಪ್ರಗತಿ ಮತ್ತು ಸಹೋದರತ್ವಕ್ಕಾಗಿ, ನಾವು ಒಗ್ಗಟ್ಟಾಗಿ ನಿಂತಿದ್ದೇವೆ, ಮುಂದೆಯೂ ಒಗ್ಗಟ್ಟಾಗಿಯೇ ನಿಲ್ಲುತ್ತೇವೆ.

-ರಣದೀಪ್ ಸಿಂಗ್ ಸುರ್ಜೇವಾಲ
ಪ್ರಧಾನ ಕಾರ್ಯದರ್ಶಿಗಳು
ಎಐಸಿಸಿ ಹಾಗೂ ಕರ್ನಾಟಕ ರಾಜ್ಯದ ಉಸ್ತುವಾರಿ



ಉತ್ತರ ಪ್ರದೇಶದ ಲಕ್ನೋದಲ್ಲಿ ಶನಿವಾರ ನಡೆದ ನೌಸೇನ ಶೌರ್ಯ ವಾಟಿಕ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್.

# ಶಾಸಕಾಂಗ ಸಭೆಗೂ ಮುನ್ನ ದೈವದ ಮೊರೆಹೋದ ಡಿಕೆಶಿ

**ವಿಧಾನಸೌಧದ ಕೊಠಡಿಯಲ್ಲಿ ಬೆಂಬಲಿಗರು, ಆಪ್ತರನ್ನು ಹೊರಗಿಟ್ಟು ಏಕಾಂಗಿಯಾಗಿ ಪೂಜೆ**

**ಬೆಂಗಳೂರು, ಮೇ 30:** ಶಕ್ತಿಕೇಂದ್ರ ವಿಧಾನಸೌಧದಲ್ಲಿ ಶುಕ್ರವಾರದಂದು ತೀವ್ರ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಕಾಂಗ್ರೆಸ್ ಪಕ್ಷದ ಮಹತ್ವದ ಶಾಸಕಾಂಗ ಸಭೆಗೂ ಮುನ್ನ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧದ ತಮ್ಮ ಕೊಠಡಿಯಲ್ಲಿ ವಿಶೇಷ ಪೂಜೆ ನೆರವೇರಿಸಿದರು. ರಾಜಕೀಯದ ಪ್ರಮುಖ ನಿರ್ಧಾರಗಳು ಹೊರಬೀಳುವ ಮುನ್ನ ಡಿ.ಕೆ. ಶಿವಕುಮಾರ್ ಅವರು ಧಾರ್ಮಿಕ ವಿಧಿವಿಧಾನಗಳಿಗೆ ಶರಣಾಗಿದ್ದಾರೆ. ತಮ್ಮ ಕೊಠಡಿಗೆ ಆಗಮಿಸುತ್ತಿದ್ದಂತೆ ಪೂಜಾ ಕಾರ್ಯಗಳಿಗೆ ಸಿದ್ಧತೆ ಮಾಡಿಕೊಂಡ ಡಿಸಿಎಂ, ಅತ್ಯಂತ ಭಕ್ತಿಭಾವದಿಂದ ದೈವದ ಮೊರೆ ಹೋಗಿರುವುದು ಸದ್ಯ ರಾಜಕೀಯ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ.ಡಿ.ಕೆ. ಶಿವಕುಮಾರ್ ಅವರು ತಮ್ಮ ಕೊಠಡಿಯಲ್ಲಿದ್ದ ಆಪ್ತರು, ಬೆಂಬಲಿಗರು ಹಾಗೂ ಭದ್ರತಾ ಸಿಬ್ಬಂದಿ ಸೇರಿದಂತೆ ಎಲ್ಲರನ್ನೂ ಹೊರಗೆ ಕಳುಹಿಸಿ, ಸಂಪೂರ್ಣವಾಗಿ ಏಕಾಂಗಿಯಾಗಿ ಈ ಪೂಜೆಯನ್ನು ನೆರವೇರಿಸಿದರು. ಯಾವುದೇ ಗದ್ದಲವಿಲ್ಲದೆ, ಏಕಾಗ್ರತೆಯಿಂದ ದೇವತಾ ಆರಾಧನೆಯಲ್ಲಿ ತೊಡಗಿಸಿಕೊಳ್ಳಲು ಅವರು ಬಯಸಿದ್ದರಿಂದ ಕೊಠಡಿಯ ಬಾಗಿಲು ಮುಚ್ಚಿ ರಹಸ್ಯವಾಗಿ ಪ್ರಾರ್ಥನೆ ಸಲ್ಲಿಸಿದರು.

ಡಿ.ಕೆ. ಶಿವಕುಮಾರ್ ಅವರ ಪರಮ ಆರಾಧ್ಯ ದೈವವಾಗಿರುವ 'ಕೋಡಿಹಳ್ಳಿ ಅಜ್ಜಯ್ಯ'ನ ಭಾವಚಿತ್ರಕ್ಕೆ ಈ ವೇಳೆ ವಿಶೇಷ ಪೂಜೆ ಸಲ್ಲಿಸಲಾಯಿತು. ತಮ್ಮ ಪ್ರತಿಯೊಂದು ರಾಜಕೀಯ ಏಳುಬೀಳುಗಳಲ್ಲೂ ಅಜ್ಜಯ್ಯನನ್ನೇ ನಂಬಿರುವ ಶಿವಕುಮಾರ್, ಇಂದಿನ ಮಹತ್ವದ ಶಾಸಕಾಂಗ ಸಭೆಗೂ ಮುನ್ನ ಅಜ್ಜಯ್ಯನಿಗೆ ಧೂಪ-ದೀಪ ಬೆಳಗಿ, ವಿಶೇಷ ನೈವೇದ್ಯ ಅರ್ಪಿಸಿ ಸುದೀರ್ಘವಾಗಿ ಪ್ರಾರ್ಥನೆ ಮಾಡಿಕೊಂಡಿದ್ದಾರೆ.ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಸರ್ಕಾರದ ಪ್ರಮುಖ ನಿರ್ಧಾರಗಳು ಹಾಗೂ ಮುಂದಿನ ಕಾರ್ಯತಂತ್ರಗಳ ಕುರಿತು ಚರ್ಚೆಯಾಗುವ ಸಾಧ್ಯತೆ ಇದೆ. ಇಂತಹ ನಿರ್ಣಾಯಕ ಸಭೆಗಿಂತ ಕೆಲವೇ ನಿಮಿಷಗಳ ಮುನ್ನ ಡಿ.ಕೆ. ಶಿವಕುಮಾರ್ ಅವರು ಏಕಾಂಗಿಯಾಗಿ ನಡೆಸಿದ ಈ ರಹಸ್ಯ ಪೂಜೆ ಮತ್ತು ದೈವದ ಆರಾಧನೆ ರಾಜಕೀಯವಾಗಿ ತೀವ್ರ ಕುತೂಹಲವನ್ನು ಕೆರಳಿಸಿದ್ದು, ಸಭೆಯ ಮುನ್ನಡೆಗೆ ದೈವಬಲದ ಆಶೀರ್ವಾದ ಪಡೆಯಲು ಅವರು ಮುಂದಾಗಿದ್ದಾರೆ ಎಂದು ವಿಶ್ಲೇಷಿಸಲಾಗುತ್ತಿದೆ.

**ಸಿಎಲ್‌ಪಿ ಸಭೆಗೂ ಮುನ್ನವೇ ಸೋದರನೊಂದಿಗೆ ರಾಜ್ಯಪಾಲರ ಭೇಟಿ ಮಾಡಿದ ಡಿಕೆಶಿ**

ರಾಜ್ಯದ ನೂತನ ಮುಖ್ಯಮಂತ್ರಿಯ ಪದಗ್ರಹಣ ಕಾರ್ಯಕ್ರಮ ನಿಗದಿ ಸೇರಿ ಹಲವು ವಿಚಾರಗಳ ಬಗ್ಗೆ ಡಿ.ಕೆ. ಶಿವಕುಮಾರ್ ಅವರು ರಾಜ್ಯಪಾಲರ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಶನಿವಾರ ಭೇಟಿಯಾಗಿ ಚರ್ಚಿಸಿದರು. ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನಾಗಿ ಆಯ್ಕೆಯಾಗುವ ಮೊದಲ ತಮ್ಮ ಸಹೋದರ ಮಾಜಿಸಂಸದ ಡಿ.ಕೆ. ಸುರೇಶ್ ಜೊತೆ ಶನಿವಾರ ಬೆಳಗ್ಗೆ 10.30 ಕ್ಕೆ ಲೋಕಭವನಕ್ಕೆ ತೆರಳಿ ರಾಜ್ಯಪಾಲರನ್ನು ಭೇಟಿಯಾದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರು ಮಧ್ಯಾಹ್ನ 1 ಗಂಟೆಯ ನಂತರ ಧರ್ಮಸ್ಥಳಕ್ಕೆ ತೆರಳಲಿದ್ದು, ಶಾಸಕಾಂಗ ಪಕ್ಷದ ಸಭೆಯ ನಂತರ ಅವರು ಬೆಂಗಳೂರಿನಲ್ಲಿ ಲಭ್ಯವಿಲ್ಲದ ಕಾರಣ ಡಿ.ಕೆ. ಶಿವಕುಮಾರ್ ಶನಿವಾರ ಬೆಳಗ್ಗೆಯೇ ರಾಜ್ಯಪಾಲರನ್ನು ಭೇಟಿ ಮಾಡಿ ನೂತನ ಮುಖ್ಯಮಂತ್ರಿಯ ಪ್ರಮಾಣ ವಚನ ಕಾರ್ಯಕ್ರಮ ಮತ್ತಿತರ ವಿಚಾರಗಳ ಬಗ್ಗೆ ಚರ್ಚಿಸಿದರು.

# ಮುಂದಿನ ಸಂಪುಟದಲ್ಲಿ ಡಿಸಿಎಂ ಸೇರಿ ಹೆಚ್ಚಿನ ರಾಜಕೀಯ ಪ್ರಾತಿನಿಧ್ಯಕ್ಕೆ ವೀರಶೈವ ಲಿಂಗಾಯತ ಮಹಾಸಭಾ ಒತ್ತಾಯ

**ಬೆಂಗಳೂರು, ಮೇ 31:** ಒಕ್ಕಲಿಗ ಸಮುದಾಯದ ಪ್ರಬಲ ನಾಯಕ ಡಿ.ಕೆ.ಶಿವ ಕುಮಾರ್ ಮುಖ್ಯಮಂತ್ರಿ ಸ್ಥಾನ ಅಲಂಕರಿಸಲು ಸಜ್ಜಾಗಿದ್ದಾರೆ, ಈ ನಡುವೆ ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾವು ಸಮುದಾಯಕ್ಕೆ ಉಪಮುಖ್ಯಮಂತ್ರಿ ಹುದ್ದೆ ಸೇರಿ ಹೆಚ್ಚಿನ ರಾಜಕೀಯ ಪ್ರಾತಿನಿಧ್ಯ ನೀಡಬೇಕೆಂದು ಒತ್ತಾಯಿಸಿದೆ.

ರಾಜ್ಯದಲ್ಲಿ ಸಂಖ್ಯಾತ್ಮಕವಾಗಿ ಬಲಿಷ್ಠ ಮತ್ತು ಸಾಮಾಜಿಕವಾಗಿ ಪ್ರಬಲವಾಗಿರುವ ಲಿಂಗಾಯತರು ಅಧಿಕಾರ ರಚನೆಯಲ್ಲಿ ಹೆಚ್ಚಿನ ಪಾಲು ಪಡೆಯಲು ಅರ್ಹರು ಎಂದು ಮಹಾಸಭಾ ಪ್ರತಿಪಾದಿಸಿದೆ. ಲಿಂಗಾಯತ ಸಮುದಾಯವು ಪ್ರಸ್ತುತ ಕಾಂಗ್ರೆಸ್ ಸಂಪುಟದಲ್ಲಿ ಎಂಟು ಸಚಿವ ಸ್ಥಾನಗಳನ್ನು ಹೊಂದಿದೆ. ವೀರಶೈವ-ಲಿಂಗಾಯತ ಸಂಪ್ರದಾಯಗಳ ಬಗ್ಗೆ ಶಿವಕುಮಾರ್ ಅವರಿಗೆ ಅಪಾರ ಗೌರವವಿದೆ. ಅವರು ವೀರಶೈವ-ಲಿಂಗಾಯತ ಸಂತ ಅಜ್ಜಯ್ಯ ಅವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ್ದನ್ನು ಇಲ್ಲಿ ಸ್ಮರಿಸಬಹುದು. ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯಲ್ಲಿರುವ ಅನೇಕರು ಅಭ್ಯರ್ಥಿಗಳಿಗೆ ಬಿ ಫಾರ್ಮ್‌ಗಳನ್ನು ವಿತರಿಸುವ ಮೊದಲು ಅಜ್ಜಯನ ಸಮ್ಮುಖದಲ್ಲಿ ಶಿವಕುಮಾರ್ ಪೂಜೆ ಸಲ್ಲಿಸಿದ್ದರು. ಕರ್ನಾಟಕದ ಪ್ರಸ್ತುತ ಸಾಂಸ್ಕೃತಿಕ ಪರಿಸರದಲ್ಲಿ, ಪ್ರತಿಯೊಬ್ಬ ಮುಖ್ಯಮಂತ್ರಿಯೂ ಯಾವುದೇ ಸಾಮಾಜಿಕ ಗುಂಪು ಅಥವಾ ಸಮುದಾಯದಿಂದ ಬಂದಿದ್ದರೂ ಕಾಯಕ ಮತ್ತು ದಾಸೋಹದ ಶರಣ ಸಂಪ್ರದಾಯ ದೊಂದಿಗೆ ಗುರುತಿಸಿ ಕೊಳ್ಳುತ್ತಾರೆ. ಕರ್ನಾಟಕದ ಇತ್ತೀಚಿನ ರಾಜಕೀಯ ಇತಿಹಾಸವು ಲಿಂಗಾಯತವಲ್ಲದ ನಾಯಕರು ಕೂಡ ಬಸವಣ್ಣ ಮತ್ತು ಲಿಂಗಾಯತ ಸಂಪ್ರದಾಯಗಳತ್ತ ವಾಲಿರುವ ಉದಾಹರಣೆಗಳಿಂದ ತುಂಬಿದೆ.

> 1991ರಲ್ಲಿ ಮಾಂಸಾಹಾರ ತ್ಯಜಿಸಿದ್ದ ಮಾಜಿ ಪ್ರಧಾನಿ ಎಚ್‌ಡಿಡಿ: ದೇವೇಗೌಡರು, ಮುಖ್ಯಮಂತ್ರಿ ಹುದ್ದೆಯನ್ನು ವಹಿಸಿಕೊಳ್ಳುವ ಮೊದಲು ಮತ್ತು ನಂತರ ದೇಶದ ಉನ್ನತ ಪ್ರಧಾನಿ ಹುದ್ದೆಯನ್ನು ಅಲಂಕರಿಸುವ ಮೊದಲು, 1991 ರಲ್ಲಿ ಮೂರುಸಾವಿರ ಮಠದಲ್ಲಿ ಲಿಂಗ ದೀಕ್ಷೆ ತೆಗೆದುಕೊಂಡು ನಂತರ ಮಾಂಸಾಹಾರ ತ್ಯಜಿಸಿದ್ದರು. ತಮ್ಮ ವಿಚಾರವಾದಿ ಇಮೇಜ್ ಬಿಂಬಿಸುವ ಮತ್ತು ತಾನು ಹೆಚ್ಚು ಧಾರ್ಮಿಕನಲ್ಲ ಎಂದು ಹೇಳಿಕೊಳ್ಳುವ ಸಿದ್ದರಾಮಯ್ಯ ಕೂಡ ತಮ್ಮನ್ನು ಬಸವಣ್ಣನ ಅನುಯಾಯಿ ಎಂದು ಬಹಿರಂಗವಾಗಿ ಘೋಷಿಸಿಕೊಂಡಿದ್ದಾರೆ. ಬಸವಣ್ಣನನ್ನು ಕರ್ನಾಟಕದ ಸಾಂಸ್ಕೃತಿಕ ಐಕಾನ್ ಆಗಿ ಘೋಷಿಸಿದ್ದು ಕೂಡ ಸಿದ್ದರಾಮಯ್ಯ ಸರ್ಕಾರ. ಲಿಂಗಾಯತ ಸಮುದಾಯವು ರಾಜ್ಯದ ಚುನಾವಣಾ ರಾಜಕೀಯದಲ್ಲಿ ಬಹಳ ಹಿಂದಿನಿಂದಲೂ ನಿರ್ಣಾಯಕ ಪಾತ್ರವನ್ನು ವಹಿಸಿದೆ. ಮಹಾಸಭಾ ಈಗ ಡಿಸಿಎಂ ಹುದ್ದೆ ಮತ್ತು ಹೆಚ್ಚಿನ ಪ್ರಾತಿನಿಧ್ಯಕ್ಕಾಗಿ ಒತ್ತಾಯಿಸುತಿದೆ. ತ್ತಿರುವುದರಿಂದ, ಮುಂದಿನ ದಿನಗಳಲ್ಲಿ ಪ್ರಾದೇಶಿಕ ಮತ್ತು ಸಮುದಾಯದ ಆಕಾಂಕ್ಷೆಗಳನ್ನು ಸಮತೋಲನಗೊಳಿಸುವ ಸೂಕ್ಷ್ಮ ಕಾರ್ಯವನ್ನು ಕಾಂಗ್ರೆಸ್ ನಾಯಕತ್ವ ಎದುರಿಸುತ್ತಿದೆ.

# ಸಿಎಂ ಪ್ರಮಾಣವಚನ ಸ್ವೀಕಾರ ಸಮಾರಂಭ ಹಿನ್ನೆಲೆಯಲ್ಲಿ ಭದ್ರತಾ ಸಿದ್ಧತೆ ಆರಂಭ

ರಾಜ್ಯದಲ್ಲಿ ನೂತನ ಮುಖ್ಯಮಂತ್ರಿಯವರ ಪದಗ್ರಹಣ ಮತ್ತು ಗೌಪ್ಯತಾ ಪ್ರಮಾಣ ವಚನ ಸ್ವೀಕಾರ ಸಮಾರಂಭದ ಹಿನ್ನೆಲೆಯಲ್ಲಿ ತುರ್ತು ಸಿದ್ಧತೆಗಳನ್ನು ಆರಂಭಿಸಿದೆ. ಮುಖ್ಯಮಂತ್ರಿಯವರ ಪದಗ್ರಹಣ ಸಮಾರಂಭದಲ್ಲಿ ಪಾಲ್ಗೊಳ್ಳುವ ಗಣ್ಯರ ಶಿಷ್ಟಾಚಾರ ಮತ್ತು ಭದ್ರತೆಯ ಉದ್ದೇಶಕ್ಕಾಗಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಒಟ್ಟು 100 ಡಿ.ವಿ ವಾಹನಗಳನ್ನು ಬೆಂಗಳೂರಿಗೆ ಕಳುಹಿಸಲು ಸರ್ಕಾರ ಆದೇಶಿಸಿದೆ.ಈ ಸಂಬಂಧ ಸರ್ಕಾರವು ಅಧಿಕೃತ ಪತ್ರವನ್ನು ಹೊರಡಿಸಿದ್ದು, ಜಿಲ್ಲಾಧಿಕಾರಿಗಳಿಗೆ ಈ ವಾಹನಗಳನ್ನು ತುರ್ತಾಗಿ ನಿಯೋಜಿಸುವಂತೆ ಸೂಚಿಸಲಾಗಿದೆ.ಆಯಾ ಜಿಲ್ಲೆಗಳಿಂದ ನಿಯೋಜಿಸಲ್ಪಟ್ಟ ವಾಹನಗಳು ಮೇ 31, 2026 ರಂದು ಸಂಜೆ 4:00 ಗಂಟೆಯೊಳಗೆ ಬೆಂಗಳೂರಿನ ಕುಮಾರ ಕೃಪಾ ಅತಿಥಿಗೃಹದಲ್ಲಿ ವರದಿ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಲಾಗಿದೆ.ವಾಹನಗಳು ಸುಸ್ಥಿತಿಯಲ್ಲಿರಬೇಕು ಮತ್ತು ಇಂಧನ ಭರ್ತಿಯಾಗಿರಬೇಕು ಎಂದು ಕಡ್ಡಾಯಗೊಳಿಸಲಾಗಿದೆ. ಒಂದು ವೇಳೆ ನಿಗದಿತ ವಾಹನಗಳು ದುರಸ್ತಿಯಲ್ಲಿದ್ದರೆ, ಬದಲಾಗಿ ಬೇರೆ ಸುಸ್ಥಿತಿಯಲ್ಲಿರುವ ವಾಹನಗಳನ್ನು ಚಾಲಕರೊಂದಿಗೆ ಕಳುಹಿಸಲು ತಿಳಿಸಲಾಗಿದೆ.ಇದು ಅತ್ಯಂತ ತುರ್ತು ಕಾರ್ಯವಾಗಿರುವುದರಿಂದ, ಯಾವುದೇ ಲೋಪವಾದಲ್ಲಿ ಸಂಬಂಧಪಟ್ಟವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಸರ್ಕಾರ ಎಚ್ಚರಿಸಿದೆ.

**ವಿವಿಧ ಜಿಲ್ಲೆಗಳಿಂದ 100 ಡಿ.ವಿ. ವಾಹನ ಬೆಂಗಳೂರಿಗೆ ಕಳಿಸಲು ಸರ್ಕಾರ ಆದೇಶ**

**ಯಾವ ಜಿಲ್ಲೆಯಿಂದ ಎಷ್ಟು ವಾಹನ**

ಚಿತ್ರದುರ್ಗ: 05, ಶಿವಮೊಗ್ಗ: 05, ಕೊಪ್ಪಳ: 03, ದಾವಣಗೆರೆ: 03, ಹಾವೇರಿ: 03, ಗದಗ: 05, ವಿಜಯಪುರ: 02, ಬಾಗಲಕೋಟೆ: 02, ರಾಯಚೂರು: 05, ಕಲಬುರಗಿ: 05, ಉತ್ತರ ಕನ್ನಡ: 05, ಬಳ್ಳಾರಿ: 05, ದಕ್ಷಿಣ ಕನ್ನಡ: 05, ಮೈಸೂರು: 05, ಧಾರವಾಡ: 05, ಉಡುಪಿ: 05, ಹಾಸನ: 02, ಚಾಮರಾಜನಗರ: 04, ಬೀದರ್: 02, ಚಿಕ್ಕಬಳ್ಳಾಪುರ: 02, ಚಿಕ್ಕಮಗಳೂರು: 02, ಕೊಡಗು: 02, ಕೋಲಾರ: 02, ಮಂಡ್ಯ: 02, ಬೆಂಗಳೂರು ದಕ್ಷಿಣ: 01, ತುಮಕೂರು: 03, ವಿಜಯನಗರ: 02, ಯಾದಗಿರಿ: 02, ಬೆಳಗಾವಿ: 06.

# ದೆಹಲಿ, ಸುತ್ತಮುತ್ತ ಬಿರುಗಾಳಿ, ಮಳೆ ಸ್ವಲ್ಪಮಟ್ಟಿಗೆ ತಂಪಾದ ರಾಜಧಾನಿ

**ನವದೆಹಲಿ, ಮೇ 30:** ಶನಿವಾರ ರಾಷ್ಟ್ರ ರಾಜಧಾನಿ ಮತ್ತು ಪಕ್ಕದ ಎನ್‌ಸಿಆರ್ ಪ್ರದೇಶಗಳಲ್ಲಿ ಮಧ್ಯಂತರ ಮಳೆ, ಗುಡುಗು ಸಹಿತ ಮತ್ತು ಬಿರುಗಾಳಿ ಬೀಸಿದ್ದು, ಬೇಸಿಗೆಯ ಸುಡುವ ಶಾಖ ಮತ್ತು ತಾಪಮಾನವನ್ನು ಸಾಮಾನ್ಯ ಮಟ್ಟಕ್ಕಿಂತ ಕಡಿಮೆ ಮಾಡಿದೆ ಎಂದು ಭಾರತ ಹವಾಮಾನ ಇಲಾಖೆ (ಐಎಂಡಿ) ತಿಳಿಸಿದೆ. ಪಶ್ಚಿಮದ ಕ್ಷೋಭೆ ಮತ್ತು ವಾಯುವ್ಯ ಭಾರತದ ಮೇಲೆ ಪರಿಣಾಮ ಬೀರುವ ಬಹು ಚಂಡಮಾರುತದ ಪರಿಚಲನೆಯಿಂದಾಗಿ ಹವಾಮಾನದಲ್ಲಿನ ಬದಲಾವಣೆ ಉಂಟಾಗಿದೆ, ಇದರ ಪರಿಣಾಮವಾಗಿ ಕಳೆದ 24 ಗಂಟೆಗಳಲ್ಲಿ ದೆಹಲಿ-ಎನ್‌ಸಿಆರ್‌ನಲ್ಲಿ ಮೋಡ ಕವಿದ ಆಕಾಶ, ಚದುರಿದ ಮಳೆ ಮತ್ತು ಬಲವಾದ ಮೇಲ್ಮೈ ಗಾಳಿ ಬೀಸಿದೆ. ನಗರದ ಪ್ರಮುಖ ಹವಾಮಾನ ವೀಕ್ಷಣಾಲಯವಾದ ಸಫ್ದರ್ಜಂಗ್‌ನಲ್ಲಿ ಕನಿಷ್ಠ ತಾಪಮಾನ 24.6 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ, ಇದು ಋತುಮಾನದ ಸರಾಸರಿಗಿಂತ ಎರಡು ಡಿಗ್ರಿ ಕಡಿಮೆಯಾಗಿದೆ. ಗರಿಷ್ಠ ತಾಪಮಾನವು 37.1 ಡಿಗ್ರಿ ಸೆಲ್ಸಿಯಸ್ಗೆ ತಲುಪಿದ್ದು, ಮೋಡ ಕವಿದ ವಾತಾವರಣ ಮತ್ತು ಗುಡುಗು ಸಹಿತ ಚಟುವಟಿಕೆಯ ತಂಪಾಗಿಸುವ ಪರಿಣಾಮವನ್ನು ಪ್ರತಿಬಿಂಬಿಸುತ್ತದೆ. ದೆಹಲಿ ಮತ್ತು ನೆರೆಯ ಪ್ರದೇಶಗಳಿಗೆ ಐಎಂಡಿ ಹಳದಿ ಎಚ್ಚರಿಕೆಯನ್ನು ಕಾಯ್ದುಕೊಂಡಿದ್ದು, ಮಧ್ಯಾಹ್ನ ಮತ್ತು ಸಂಜೆ ಸಮಯದಲ್ಲಿ ಗುಡುಗು ಸಹಿತ ಮಳೆ, ಮಿಂಚು ಮತ್ತು ಬಲವಾದ ಗಾಳಿಯೊಂದಿಗೆ ಹಗುರದಿಂದ ಹಗುರವಾದ ಮಳೆಯಾಗುವ ಮುನ್ಸೂಚನೆ ನೀಡಿದೆ. ಗಾಳಿಯ ವೇಗ ಗಂಟೆಗೆ 40-50 ಕಿ.ಮೀ ತಲುಪುವ ನಿರೀಕ್ಷೆಯಿದ್ದು, ಕೆಲವು ಪ್ರದೇಶಗಳಲ್ಲಿ ಗಂಟೆಗೆ 60 ಕಿ.ಮೀ.ವರೆಗೆ ಗಾಳಿ ಬೀಸಲಿದೆ. ಭಾನುವಾರವೂ ಇದೇ ರೀತಿಯ ಪರಿಸ್ಥಿತಿ ಮುಂದುವರಿಯುವ ಸಾಧ್ಯತೆಯಿದೆ ಎಂದು ಹವಾಮಾನ ಅಧಿಕಾರಿಗಳು ತಿಳಿಸಿದ್ದಾರೆ.

# ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಟೆಂಡರ್‌ನಲ್ಲಿ ಅಕ್ರಮ ತನಿಖೆಗೆ ಆಗ್ರಹ

**ರಾಜ್ಯ ಮುಖ್ಯ ಕಾರ್ಯದರ್ಶಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಪತ್ರ**



**ಬೆಂಗಳೂರು, ಮೇ 30:** ಬೆಂಗಳೂರು ಸಮಗ್ರ ಘನತ್ಯಾಜ್ಯ ನಿರ್ವಹಣಾ ಟೆಂಡರ್ ಪ್ರಕ್ರಿಯೆಯಲ್ಲಿ ಸುಮಾರು 39,437 ಕೋಟಿ ರೂ. ಸಾರ್ವಜನಿಕ ವೆಚ್ಚವನ್ನು ಒಳಗೊಂಡ ಗಂಭೀರ ಅಕ್ರಮಗಳ ಆರೋಪಗಳ ಹಿನ್ನೆಲೆಯಲ್ಲಿ, ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ.

ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಗಂಭೀರ ಲೋಪಗಳು, ಹಣಕಾಸು ಅಕ್ರಮಗಳು, ಕಾನೂನು ಉಲ್ಲಂಘನೆಗಳು ಹಾಗೂ ಆಡಳಿತಾತ್ಮಕ ಪಕ್ಷಪಾತದ ಬಗ್ಗೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ವಿಶೇಷವಾಗಿ ಹಣಕಾಸು ಇಲಾಖೆಯ ಸ್ಪಷ್ಟ ಆಕ್ಷೇಪಣೆ ಮತ್ತು ತಿರಸ್ಕಾರವಿದ್ದರೂ ಪ್ರಸ್ತಾವನೆಯನ್ನು ಮುಂದಕ್ಕೆ ತೆಗೆದುಕೊಂಡು ಅನುಮೋದಿ ಸಿರುವುದು ಪಾರದರ್ಶಕತೆ ಮತ್ತು ಕಾನೂನು ಬದ್ಧತೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ ಎಂದು ತಿಳಿಸಿದ್ದಾರೆ.

ತಾಂತ್ರಿಕ ಪರಿಶೀಲನೆಯ ನಂತರ ಡಿಪಿಆರ್ ಸಲಹೆಗಾರರನ್ನು ಕಾನೂನುಬಾಹಿರವಾಗಿ ಬದಲಾಯಿಸಿರುವ ಆರೋಪ. ಟೆಂಡರ್ ಪ್ರಕ್ರಿಯೆಯಲ್ಲಿ ತಾಂತ್ರಿಕ ಅರ್ಹತಾ ಮಾನದಂಡಗಳಲ್ಲಿ ಅಸ್ಪಷ್ಟ ಬದಲಾವಣೆಗಳು. ಕರ್ನಾಟಕ ಸಾರ್ವಜನಿಕ ಖರೀದಿ ಪಾರದರ್ಶಕತಾ ನಿಯಮಗಳ ಅಡಿಯಲ್ಲಿ ಕಡ್ಡಾಯ ಪ್ರಕಟಣಾ ನಿಯಮಗಳ ಉಲ್ಲಂಘನೆ. ಅಂಗೀಕರಿಸಲಾದ ಬಿಡ್‌ಗಳು ಅನುಮತಿ ಹಣಕಾಸು ಮಿತಿಗಳನ್ನು ಮೀರಿರುವುದು, ಭೂಮಿಯ ಮೌಲ್ಯಮಾಪನ ಮತ್ತು ಪರಿಹಾರ ಮೊತ್ತ ಹೆಚ್ಚಳಕ್ಕೆ ಹಣಕಾಸು ಇಲಾಖೆಯ ಸ್ಪಷ್ಟ ವಿರೋಧ.ಈ ಹಿನ್ನೆಲೆಯಲ್ಲಿ, ಟೆಂಡರ್ ಸಂಬಂಧಿತ ಎಲ್ಲಾ ಮುಂದಿನ ಕ್ರಮಗಳನ್ನು ತಕ್ಷಣವೇ ಸ್ಥಗಿತಗೊಳಿಸಿ, ಡಿಪಿಆರ್ ಸಿದ್ಧತೆಯಿಂದ ಅಂತಿಮ ಹಣಕಾಸು ಅನುಮೋದನೆವರೆಗೆ ಸಂಪೂರ್ಣ ಪ್ರಕ್ರಿಯೆಯ ಮೇಲೆ ಸ್ವತಂತ್ರ ಮತ್ತು ಸಮಗ್ರ ತನಿಖೆ ನಡೆಸುವಂತೆ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ.

ಹಣಕಾಸು ಮತ್ತು ಕಾನೂನುಬದ್ಧ ಸುರಕ್ಷತಾ ಕ್ರಮಗಳನ್ನು ಉಲ್ಲಂಘಿಸಿದ ಅಧಿಕಾರಿಗಳ ವಿರುದ್ಧ ಹೊಣೆಗಾರಿಕೆ ನಿಗದಿಪಡಿಸುವುದರ ಜೊತೆಗೆ, ಎಲ್ಲಾ ಅಧಿಕೃತ ದಾಖಲೆಗಳನ್ನು ಸಂರಕ್ಷಿಸುವಂತೆ ಅವರು ಸೂಚಿಸಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಅಕ್ರಮಗಳು ಸಾಬೀತಾದಲ್ಲಿ, ಪ್ರಕರಣವನ್ನು ಸಿಬಿಐ ಹಾಗೂ ಲೋಕಾಯುಕ್ತ ಸೇರಿದಂತೆ ಸೂಕ್ತ ತನಿಖಾ ಸಂಸ್ಥೆಗಳಿಗೆ ಹಸ್ತಾಂತರಿಸಬೇಕೆಂದು ಒತ್ತಾಯಿಸಿದ್ದಾರೆ.

# ಎಸ್ಐಆರ್ ಬಳಿಕ ವಿಶ್ವದಲ್ಲಿಯೇ ಅತಿ ಸ್ವಚ್ಛ, ನಿಖರ ಮತದಾರರ ಪಟ್ಟಿ ಸಿದ್ಧ: ಜ್ಞಾನೇಶ್ ಕುಮಾರ್

**ನವದೆಹಲಿ,ಮೇ 30:** ವಿಪಕ್ಷಗಳ ವಿಪರೀತ ಟೀಕೆ, ದಾಳಿ, ಹಲವು ಸವಾಲುಗಳ ನಡುವೆ ಕೇಂದ್ರ ಚುನಾವಣಾ ಆಯೋಗವು ದೇಶದಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಮುಂದುವರಿಸಿದ್ದು, ಈ ಪ್ರಯತ್ನವನ್ನು ಆಯೋಗದ ಮುಖ್ಯಸ್ಥ ಜ್ಞಾನೇಶ್ ಕುಮಾರ್ ಶ್ಲಾಘಿಸಿದ್ದಾರೆ.

ಮತದಾರರ ಪಟ್ಟಿ ಪರಿಷ್ಕರಣೆಯ ನಂತರ ವಿಶ್ವದ ಅತ್ಯಂತ ನಿಖರವಾದ 'ಮತದಾರರ ಪಟ್ಟಿ' ಇದಾಗಲಿದೆ. ಅಲ್ಲದೇ, ಹಗಲಿರುಳು ಎದುರಾಗುವ ಪ್ರತಿಕೂಲ ಒತ್ತಡಗಳ ನಡುವೆಯೂ ಮತದಾರರ ಪಟ್ಟಿಯನ್ನು ಪೂರ್ಣ ಪಾರದರ್ಶಕತೆಯಿಂದ ಸಿದ್ಧಪಡಿಸುವ ಜವಾಬ್ದಾರಿಯನ್ನು ತಮ್ಮ ಹೆಗಲ ಮೇಲೆ ಹೊತ್ತುಕೊಂಡಿದ್ದಾರೆ ಎಂದು ಚುನಾವಣಾ ಅಧಿಕಾರಿಗಳ ಕಾರ್ಯವೈಖರಿಯನ್ನು ಮುಕ್ತಕಂಠದಿಂದ ಹೊಗಳಿದರು.

ದೆಹಲಿಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಆಯುಕ್ತರು, ಎಲ್ಲ ರಾಷ್ಟ್ರೀಯ



ಮತ್ತು ಪ್ರಾದೇಶಿಕ ರಾಜಕೀಯ ಪಕ್ಷಗಳ 15 ಲಕ್ಷಕ್ಕೂ ಹೆಚ್ಚು ಬೂತ್‌ಮಟ್ಟದ ಏಜೆಂಟರು, ಜಿಲ್ಲಾ ಮತ್ತು ರಾಜ್ಯ ಘಟಕಗಳ ಅಧ್ಯಕ್ಷರ ನಿಕಟ ಉಸ್ತುವಾರಿಯಲ್ಲಿ ಈ ವಿಶೇಷ ಪರಿಷ್ಕರಣೆ ನಡೆಸಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ 11 ಲಕ್ಷಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ), ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು ಮತ್ತು ಮತದಾರರ ನೋಂದಣಿ ಅಧಿಕಾರಿಗಳು ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು.

ಇವರೆಲ್ಲರೂ ರಾಜ್ಯ ಸರ್ಕಾರಿ ನೌಕರರಾಗಿದ್ದು, ವಿಶ್ವದ ಅತ್ಯಂತ ನಿಖರವಾದ ಮತದಾರರ ಪಟ್ಟಿಗಳಲ್ಲಿ ಒಂದನ್ನು ಸಿದ್ಧಪಡಿಸಲು ಚುನಾವಣಾ ಆಯೋಗಕ್ಕೆ ನಿಯೋಜನೆಗೊಂಡಿದ್ದಾರೆ ಎಂದು ಮುಖ್ಯ ಚುನಾವಣಾ ಆಯುಕ್ತರು ಹೇಳಿದರು.

ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕುರಿತು ವಿರೋಧ ಪಕ್ಷಗಳಿಂದ ಕೇಳಿಬರುತ್ತಿರುವ ತೀವ್ರ ಟೀಕೆಗಳನ್ನು ಪರೋಕ್ಷವಾಗಿ ಉಲ್ಲೇಖಿಸಿದ ಕುಮಾರ್ ಅವರು, ಭಾರತೀಯ ಚುನಾವಣಾ ಆಯೋಗದ ಜೊತೆಗೂಡಿ ಮತದಾರರ ಪಟ್ಟಿಯಲ್ಲಿನ ಕೊಳಕನ್ನು ಸ್ವಚ್ಛ ಮಾಡುತ್ತಿರುವ ಎಲ್ಲ ಹಂತದ ಅಧಿಕಾರಿಗಳಿಗೆ ನಾವು ಸೆಲ್ಯೂಟ್ ಹೊಡೆಯಲೇಬೇಕು ಎಂದರು.

ಮತದಾರರ ಪಟ್ಟಿಯನ್ನು ವಿಶೇಷ ಸಮಗ್ರ ಪರಿಷ್ಕರಣೆ ನಡೆಸಲು ಭಾರತೀಯ ಚುನಾವಣಾ ಆಯೋಗಕ್ಕೆ ಸಂಪೂರ್ಣ ಅಧಿಕಾರವಿದೆ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದ ಬೆನ್ನಲ್ಲೇ ಮುಖ್ಯ ಚುನಾವಣಾ ಆಯುಕ್ತರ ಈ ಹೇಳಿಕೆ ಹೊರಬಿದ್ದಿರುವುದು ಮಹತ್ವದ್ದಾಗಿದೆ.

# ಪಂಜಾಬ್ ಸ್ಥಳೀಯ ಸಂಸ್ಥೆ ಚುನಾವಣೆ: ಆಪ್ ಜಯಭೇರಿ

**ಅಮೃತಸರ, ಮೇ 30:** ಪಂಜಾಬ್ ಸ್ಥಳೀಯ ಸಂಸ್ಥೆ ಚುನಾವಣೆಯ ಫಲಿತಾಂಶ ಶುಕ್ರವಾರ ಹೊರಬಿದ್ದಿದ್ದು, ಆಮ್ ಆದ್ಮಿ ಪಕ್ಷ ಭರ್ಜರಿ ಜಯ ಸಾಧಿಸಿದೆ. ಶೇ.48ಕ್ಕೂ ಅಧಿಕ ಹೆಚ್ಚು ಪುರಸಭೆಯ ವಾರ್ಡ್‌ಗಳನ್ನು ಮತ್ತು 900ಕ್ಕೂ ಹೆಚ್ಚು ಸ್ಥಾನಗಳನ್ನು ಆಪ್ ಗೆದ್ದಿದೆ. ಎಎಪಿ ನಂತರ ಕಾಂಗ್ರೆಸ್ ಎರಡನೇ ಸ್ಥಾನದಲ್ಲಿದೆ. ಆದರೆ 300ಕ್ಕೂ ಹೆಚ್ಚು ವಾರ್ಡ್‌ಗಳಲ್ಲಿ ತನ್ನ ಖಾತೆ ತೆರೆದಿದೆ.

ಇವೆಲ್ಲವುದರ ನಡುವೆ ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಪಂಜಾಬ್ ಅನ್ನು ತನ್ನ ಹಿಡಿತಕ್ಕೆ ಪಡೆದುಕೊಳ್ಳಬೇಕು ಎಂದುಕೊಂಡಿದ್ದ, ಈ ನಿಟ್ಟಿನಲ್ಲಿ ಸಿದ್ದತೆ ನಡೆಸುತ್ತಿದ್ದ ಬಿಜೆಪಿಗೆ ತೀವ್ರ ನಿರಾಸೆಯಾಗಿದೆ. ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಗಳು ಮತ್ತು ಶಿರೋಮಣಿ ಅಕಾಲಿ ದಳದ ಅಭ್ಯರ್ಥಿಗಳಿಗಿಂತಲೂ ಬಿಜೆಪಿ ಕೆಳಗಿನ ಸ್ಥಾನದಲ್ಲಿದೆ.

ಎಎಪಿಗೆ ಮತ ನೀಡಿದ ರಾಜ್ಯದ ಜನರಿಗೆ ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಧನ್ಯವಾದ ಅರ್ಪಿಸಿದ್ದಾರೆ. ಬಿಜೆಪಿಯನ್ನು ಇಡಿ ಪಕ್ಷದ ಎಂದು ಕರೆದು ಟೀಕಿಸಿದ್ದಾರೆ. ಇಡಿ ಪಕ್ಷವನ್ನು ನಿರ್ನಾಮ ಮಾಡಲಾಗಿದೆ. ಪಂಜಾಬ್‌ನಲ್ಲಿ ಸಣ್ಣ ವ್ಯಾಪಾರಿಗಳ ಮೇಲೆ ಹಲವಾರು ದಾಳಿಗಳನ್ನು



ನಡೆಸುವ ಮೂಲಕ ಜನರಿಗೆ ಕಿರುಕುಳ ನೀಡಿದ ಇ.ಡಿ. ಪಕ್ಷದ ಮೇಲೆ ಜನರು ಸೇಡು ತೀರಿಸಿಕೊಂಡಿದ್ದಾರೆ ಎಂದು ಕೇಜ್ರಿವಾಲ್ ಹೇಳಿದ್ದಾರೆ. ಇನ್ನು ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ದ್ವೇಷದ ರಾಜಕೀಯ ಸೋಲನುಭವಿಸಿದೆ ಎಂದಿದ್ದಾರೆ.

**ಯಾವ ಪಕ್ಷಕ್ಕೆ ಎಷ್ಟು ಸ್ಥಾನ?**

ಆಮ್ ಆದ್ಮಿ ಪಾರ್ಟಿ 958, ಕಾಂಗ್ರೆಸ್ 397, ಸ್ವತಂತ್ರ ಅಭ್ಯರ್ಥಿಗಳು 251, ಶಿರೋಮಣಿ ಅಕಾಲಿ ದಳ 191, ಬಿಜೆಪಿ 172 ಮತ್ತು ಬಿಎಸ್‌ಪಿ 7 ಸ್ಥಾನಗಳನ್ನು ಗೆದ್ದಿವೆ. ಸದ್ಯ ಒಟ್ಟು 8 ಮುನಿಸಿಪಲ್ ಕಾರ್ಪೊರೇಷನ್‌ಗಳಲ್ಲಿ 5 ಕಾರ್ಪೊರೇಷನ್‌ಗಳನ್ನು (ಮೊಹಾಲಿ, ಬಟಿಂಡಾ, ಬರ್ನಾಲಾ, ಮೋಗಾ ಮತ್ತು ಬಟಾಲಾ) ಆಪ್ ತನ್ನದಾಗಿಸಿಕೊಂಡಿದೆ. ಕಳೆದ ಬಾರಿಯ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಭರ್ಜರಿ ಜಯ ಸಾಧಿಸಿದ್ದ ಕಾಂಗ್ರೆಸ್ ಈ ಬಾರಿ 397 ಸ್ಥಾನಗಳನ್ನು ಮಾತ್ರ ಗೆದ್ದು ಎರಡನೇ ಸ್ಥಾನದಲ್ಲಿದೆ. ಪಂಜಾಬ್‌ನಲ್ಲಿ ಸ್ವತಂತ್ರವಾಗಿ ಅಧಿಕಾರ ಹಿಡಿಯಲು ಬಿಜೆಪಿ ಹವಣಿಸುತ್ತಿರುವ ನಡುವೆ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಹಿನ್ನಡೆ ಬಿಜೆಪಿಗೆ ನಿರಾಸೆ ಮೂಡಿಸಿದೆ. ಈ ಚುನಾವಣೆಯಲ್ಲಿ ಬಿಜೆಪಿಗಿಂತ ಅಧಿಕ ಪಕ್ಷೇತರ ಅಭ್ಯರ್ಥಿಗಳು (251) ಗೆಲುವು ಸಾಧಿಸಿದ್ದಾರೆ.

# ಆಪರೇಷನ್ ಸಿಂದೂರ್ 2.0ಗೆ ಮೂರು ಸೇನೆ ಸಿದ್ಧತೆ

**ಪುಣೆ, ಮೇ 30:** ಆಪರೇಷನ್ ಸಿಂದೂರ್ 2.0ಗೆ ಅಗತ್ಯವಿದ್ದಲ್ಲಿ ಭಾರತೀಯ ಸಶಸ್ತ್ರ ಪಡೆಯ ಮೂರು ಸೇನೆಗಳು ಸಿದ್ಧತೆ ನಡೆಸಿದೆ ಎಂದು ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ತಿಳಿಸಿದ್ದಾರೆ.

ಪುಣೆಯ ರಾಷ್ಟ್ರೀಯ ರಕ್ಷಣಾ ಅಕಾಡೆಮಿಯಲ್ಲಿ (ಎನ್ಡಿಎ) 150ನೇ ಕೋರ್ಸ್ನ ಪಾಸಿಂಗ್ ಔಟ್ ಪರೇಡ್ ಪರಿಶೀಲಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮೂರು ಪಡೆಗಳು ಜಂಟಿಯಾಗಿ ಹೆಚ್ಚಿಸುವ ಮತ್ತು ಭವಿಷ್ಯದ ಯುದ್ಧಕ್ಕೆ ಸಿದ್ಧತೆ ನಡೆಸುವತ್ತ ಗಮನಹರಿಸಿವೆ.

ಆಧುನಿಕ ಯುದ್ಧಭೂಮಿಗಳು ಹೆಚ್ಚು ಪಾರದರ್ಶಕವಾಗಿದ್ದು, ಪಡೆಗಳ ನಿಯೋಜನೆ ಮತ್ತು ನಾಗರಿಕ ರಕ್ಷಣೆಯಲ್ಲಿ ನಿರಂತರ ಜಾಗರೂಕತೆಯ ಅಗತ್ಯವಿರುತ್ತದೆ ಎಂದರು.

ಆಪರೇಷನ್ ಸಿಂದೂರ್ ಇನ್ನು ಮುಂದುವರೆಯುತ್ತಿದೆ. ಇದು ತಾತ್ಕಾಲಿಕವಾಗಿ ನಿಂತಿದೆ. ಭಾರತೀಯ ಸೇನೆ ಮತ್ತು ಎಲ್ಲಾ ಮೂರು ಸೇವೆಗಳು ಕೂಡ ಆಪರೇಷನ್ ಸಿಂದೂರ್ 2.0 ಅಗತ್ಯಬಿದ್ದಲ್ಲಿ ಅದಕ್ಕೆ ಸೂಕ್ತ ಸಿದ್ಧತೆ ನಡೆಸುತ್ತದೆ. ಸದ್ಯ ನಾವು ನಮ್ಮ ನಾವು ಮೂರು ಸೇವೆಗಳಲ್ಲಿ ನಮ್ಮ ಸಿನರ್ಜಿಯನ್ನು




ಹೆಚ್ಚಿಸುವತ್ತ ಗಮನಹರಿಸುತ್ತಿದ್ದೇವೆ. ಮುಂದಿನ ಯುದ್ಧಕ್ಕೆ ನಮ್ಮನ್ನು ಸಜ್ಜುಗೊಳಿಸಿಕೊಳ್ಳುತ್ತಿದ್ದೇವೆ ಎಂದರು. ಯುದ್ಧಭೂಮಿ ಎಷ್ಟು ಪಾರದರ್ಶಕವಾಗಿದೆಯೆಂದರೆ ಪ್ರತಿಯೊಂದು ಚಲನವಲನವೂ ಇನ್ನೊಂದು ಬದಿಗೆ ತಿಳಿದಿದೆ. ಆದ್ದರಿಂದ, ನಮ್ಮ ನಿಯೋಜನೆ, ಉದ್ಯೋಗ ಮತ್ತು ಗಡಿ ಪ್ರದೇಶಗಳಲ್ಲಿನ ನಮ್ಮ ಪಡೆಗಳನ್ನು ಹಾಗೂ ನಾಗರಿಕರನ್ನು ರಕ್ಷಿಸಲು ಅಗತ್ಯವಿರುವ ರಕ್ಷಣೆಯ ವಿಷಯದಲ್ಲಿ ನಾವು ಬಹಳ ಜಾಗರೂಕರಾಗಿರಬೇಕು. ಮಾಹಿತಿ ಯುದ್ಧದ ಬಗ್ಗೆ ಮಾತನಾಡಿದ ಅವರು, ಯಶಸ್ಸು ಸಾರ್ವಜನಿಕ ನಂಬಿಕೆ ಮತ್ತು ರಾಷ್ಟ್ರೀಯ ಏಕತೆಯನ್ನು ಅವಲಂಬಿಸಿರುತ್ತದೆ.

ರಾಷ್ಟ್ರವು ಒಟ್ಟಾಗಿ ಸೇರಿ ಮಾಹಿತಿಯನ್ನು ನೀಡುವ ಜನರನ್ನು ನಂಬಿದರೆ ಮಾತ್ರ ಮಾಹಿತಿ ಯುದ್ಧ ಯಶಸ್ವಿಯಾಗುತ್ತದೆ. ಅದು ಸಂಭವಿಸಿದಲ್ಲಿ ಪರಸ್ಪರ ನಂಬುವ ದೇಶ ಮತ್ತು ಎಲ್ಲಾ ಪಾಲುದಾರರು ಯಾವಾಗಲೂ ಯುದ್ಧವನ್ನು ಗೆಲ್ಲುತ್ತಾರೆ ಎಂದರು

ಒಂದು ರೀತಿಯ ಸಿನರ್ಜಿ ತರಬೇಕಾದಾಗಲೆಲ್ಲಾ ಮೂರೂ ಸೇನೆಗಳಿಂದ ಒಂದು ರೀತಿಯ ಕೊಡುಗೆ ಇರುತ್ತದೆ. ಆದ್ದರಿಂದ, ಸೇವಾ ಮುಖ್ಯಸ್ಥರು ಸಂಯಮ ಮತ್ತು ಸುಸ್ಥಿರತೆಗೆ ಜವಾಬ್ದಾರರಾಗಿರುತ್ತಾರೆ. ರಂಗಭೂಮಿ ಕಮಾಂಡರ್ಗಳು ಪಡೆಗಳ ಕಾರ್ಯಾಚರಣೆ ಮತ್ತು ಸಂಯೋಜನೆಗೆ ಜವಾಬ್ದಾರರಾಗಿರುತ್ತಾರೆ. ಹೊಸ ಸಿಡಿಎಸ್ ಅಡಿಯಲ್ಲಿ ಬರುವ ಮುಂದಿನ ಸೆಟಪ್ ಪ್ರಯಾಣವನ್ನು ಮುಂದಕ್ಕೆ ಕೊಂಡೊಯ್ಯಲು ಸಾಧ್ಯವಾಗುತ್ತದೆ. ಮುಂದಿನ 2 ರಿಂದ 3 ವರ್ಷಗಳಲ್ಲಿ, ಅದು ನೆಲದ ಮೇಲೆ ನಡೆಯುವುದನ್ನು ನಾವು ನೋಡಲು ಸಾಧ್ಯವಾಗುತ್ತದೆ ಎಂದು ನಾವು ಆಶಿಸುತ್ತೇವೆ ಎಂದು ತಿಳಿಸಿದರು.

ಇದೆ ವೇಳೆ ಎನ್ಡಿಎ ಕೆಡೆಟ್ ಆಗಿ ತಮ್ಮ ದಿನಗಳನ್ನು ನೆನಪಿಸಿಕೊಂಡ ಜನರಲ್ ದ್ವಿವೇದಿ, ಈ ಅವಧಿಯಲ್ಲಿ ಚಾಂಪಿಯನ್ ಸ್ಕ್ವಾಡ್ರನ್ ಆಗಿ ಹೊರಹೊಮ್ಮಿದ ಚಾರ್ಲಿ ಸ್ಕ್ವಾಡ್ರನ್ನ ನೆನಪುಗಳನ್ನು ಹಂಚಿಕೊಂಡರು. ಪ್ರಸ್ತುತ ಪೀಳಿಗೆಯ ಕೆಡೆಟ್ಗಳನ್ನು ಶ್ಲಾಘಿಸಿದ ಅವರು, ಸಶಸ್ತ್ರ ಪಡೆಗಳನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯುವ ಅವರ ಸಾಮರ್ಥ್ಯದ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದರು.




**ಸಿಬಿಎಸ್‌ಇ 12ನೇ ತರಗತಿಯ ಓಎಸ್‌ಎಂ ವಿವಾದದ ವಿರುದ್ಧ ಮತ್ತು ಸಂತ್ರಸ್ತ ವಿದ್ಯಾರ್ಥಿಗಳಿಗೆ ಬೆಂಬಲವಾಗಿ, ನ್ಯಾಯ, ಪಾರದರ್ಶಕತೆ ಮತ್ತು ಓಎಸ್‌ಎಂ ವ್ಯವಸ್ಥೆಯನ್ನು ಹಿಂಪಡೆಯುವಂತೆ ಒತ್ತಾಯಿಸಿ ಶನಿವಾರ ನವದೆಹಲಿಯ ಪತ್ಪರ್‌ಗಂಜ್‌ನಲ್ಲಿರುವ ಸಿಬಿಎಸ್‌ಇ ಪ್ರಧಾನ ಕಚೇರಿಯಲ್ಲಿ ಎನ್‌ಎಸ್‌ಯುಐ ಬೃಹತ್ ಪ್ರತಿಭಟನೆ ನಡೆಸಿದೆ.**

# ಸ್ವಾಭಿಮಾನ ಮಾರಿಕೊಂಡ ದ್ರೋಹಿಗಳು ಪಕ್ಷಾಂತರಿಗಳಿಗೆ ಕವಿತೆಯಲ್ಲೇ ತಿವಿದ ದೀದಿ

**ಕೊಲ್ಕತ್ತಾ, ಮೇ 30:** ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಟಿಎಂಸಿ ಸೋಲು ಕಂಡ ಬೆನ್ನಲ್ಲೇ ಪಕ್ಷದಲ್ಲಿ ಭಿನ್ನಮತ ಸ್ಫೋಟಗೊಂಡಿದೆ. ಈ ನಡುವೆ ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಪಕ್ಷಾಂತರಿಗಳ ವಿರುದ್ಧ ಲೇಖನಿಯನ್ನೇ ಅಸ್ತ್ರವನ್ನಾಗಿಸಿಕೊಂಡಿದ್ದಾರೆ.



ಪಕ್ಷ ಬದಲಾಯಿಸುವವರನ್ನು ಊಸರವಳ್ಳಿಗೆ ಹೋಲಿಸಿ ಗಿರ್ಗಿಟ್ (ಗೋಸುಂಬೆ) ಎಂಬ ವ್ಯಂಗ್ಯ ಕವನ ಬರೆಯುವ ಮೂಲಕ ಬಂಡಾಯಗಾರರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಪಕ್ಷಕ್ಕೆ ದ್ರೋಹ ಬಗೆದ ನಾಯಕರನ್ನು ಉದ್ದೇಶಿಸಿ ದೀದಿ ಬರೆದಿರುವ ಬಂಗಾಳಿ ಕವಿತೆಯ ಕನ್ನಡ ರೂಪ ಹೀಗಿದೆ. ನಿಮಗೆ ಅದೆಷ್ಟು ರಾಜಕೀಯ ಮಹತ್ವಾಕಾಂಕ್ಷೆ, ಇಷ್ಟು ಬಣ್ಣ ಬದಲಾಯಿಸಲು ಇನ್ನೆಷ್ಟು ಬೇಕು, ಅದೆಷ್ಟು ಭ್ರಷ್ಟಾಚಾರ ನಿಮ್ಮ ಪದತಲದಲ್ಲಿ ತಾಸುಗಳೊಳಗಾಗಿ ಬಣ್ಣ ಬದಲಿಸುವಿರಲ್ಲ!. ಸಂಕಷ್ಟದ ಸಮಯದಲ್ಲಿ ಸ್ವಾರ್ಥಕ್ಕಾಗಿ ಪಕ್ಷದ ಸೈದ್ಧಾಂತಿಕ ಮೌಲ್ಯಗಳನ್ನು, ಕಾರ್ಯಕರ್ತರನ್ನು ಕೈಬಿಟ್ಟ ನಾಯಕರು ?ಊಸರವಳ್ಳಿಗಿಂತಲೂ ಹೆಚ್ಚು ಅಪಾಯಕಾರಿ ಎಂದು ಆಕ್ರೋಶ ಹೊರಹಾಕಿದ್ದಾರೆ.

ಪಕ್ಷಾಂತರಿಗಳು ಕೇವಲ ತಮ್ಮನ್ನು ತಾವು ಮಾರಿಕೊಳ್ಳುತ್ತಿಲ್ಲ; ಬದಲಿಗೆ ಜನಸಾಮಾನ್ಯರ ಮತ್ತು ಪಕ್ಷದ ಕಾರ್ಯಕರ್ತರ ಸ್ವಾಭಿಮಾನವನ್ನು ಮಾರಾಟ ಮಾಡುತ್ತಿದ್ದಾರೆ. ಇಂತಹ ಅವಕಾಶವಾದಿಗಳ ಸ್ಥಾನ ಯಾವಾಗಲೂ ಕೆಳಮಟ್ಟದಲ್ಲೇ ಇರುತ್ತದೆ. ಒಂದು ದಿನ ಅವರ ಈ ದುರಾಸೆಯೇ ಅವರನ್ನು ಕಾಡಲಿದೆ. ಅಂದು ಈ ದ್ರೋಹಿಗಳಿಗೆ ಮಾನವೀಯತೆ ಇಲ್ಲದ ಬದುಕು ಎಷ್ಟು ನಗಣ್ಯ ಎಂಬುದು ಅರ್ಥವಾಗಲಿದೆ ಎಂದು ಕವಿತೆಯ ಕೊನೆಯಲ್ಲಿ ಬರೆದಿದ್ದಾರೆ. ವಿಧಾನಸಭೆ ಚುನಾವಣೆಯ ಸೋಲಿನ ಬಳಿಕ ಟಿಎಂಸಿ ಹಿರಿಯ ನಾಯಕರು ಸರಣಿ ರಾಜೀನಾಮೆ ನೀಡುತ್ತಿದ್ದು, ಬಹಿರಂಗವಾಗಿಯೇ ಅಸಮಾಧಾನ ಹೊರಹಾಕುತ್ತಿದ್ದಾರೆ. ಪಕ್ಷದ ಒಳಗೆ ಇಂತಹ ತಲ್ಲಣ ಸೃಷ್ಟಿಯಾಗಿರುವ ಬೆನ್ನಲ್ಲೇ ಈ ಕವಿತೆ ಹೊರಬಿದ್ದಿದೆ.

ಇದಕ್ಕೂ ಮುನ್ನ, ಅಂದರೆ ಸೋಲು ಕಂಡ ಕೇವಲ ಒಂದು ವಾರದ ಅವಧಿಯಲ್ಲಿ ಮಮತಾ ಬ್ಯಾನರ್ಜಿ ಬ್ರೇವ್ (ಧೀರ) ಎಂಬ ಮತ್ತೊಂದು ಕವಿತೆ ಬರೆದಿದ್ದರು. ಸೋಲಿನಿಂದ ಕಂಗೆಟ್ಟಿದ್ದ ಕಾರ್ಯಕರ್ತರಲ್ಲಿ ಧೈರ್ಯ ತುಂಬಲು ಆ ಕವಿತೆ ಬರೆಯಲಾಗಿತ್ತು. ಅದರಲ್ಲಿ, ಧೈರ್ಯವಾಗಿ ಮತ್ತು ಶಕ್ತಿಯುತವಾಗಿರಿ, ಕ್ರೂರರನ್ನು ಯಾವಾಗಲೂ ನಗುತ್ತಲೇ ಎದುರಿಸಿ. ನೀವು ಹುಟ್ಟುವಾಗ ಒಂಟಿಯಾಗಿ ಬಂದಿದ್ದೀರಿ, ಸಾಯುವಾಗಲೂ ಒಂಟಿಯಾಗಿಯೇ ಹೋಗಬೇಕು. ಹಾಗಾಗಿ ನಿಮ್ಮ ಮೇಲೆ ನಂಬಿಕೆ ಇರಲಿ ಎಂದು ಪಕ್ಷದ ನಾಯಕರನ್ನು ಹುರಿದುಂಬಿಸಿದ್ದರು.

ರಾಜಕೀಯ ಸಂಘರ್ಷಗಳನ್ನು ಎದುರಿಸಲು ಮಮತಾ ಬ್ಯಾನರ್ಜಿ ಅವರು ಕಾವ್ಯ ಮತ್ತು ಕಲೆಯನ್ನೇ ಹೆಚ್ಚಾಗಿ ಬಳಸಿಕೊಳ್ಳುತ್ತಾರೆ. ಅವರು ಇದುವರೆಗೆ 162 ಪುಸ್ತಕಗಳು, 27 ಕವಿತೆಗಳು ಮತ್ತು ಹಲವಾರು ಹಾಡುಗಳನ್ನು ರಚಿಸಿದ್ದಾರೆ. ಕೇವಲ ಬರವಣಿಗೆ ಮಾತ್ರವಲ್ಲದೆ ವರ್ಣಚಿತ್ರಗಳ ಪ್ರದರ್ಶನವನ್ನೂ ನೀಡಿದ್ದಾರೆ. ಹಿಂದಿನ ಸರ್ಕಾರದ ಪತನಕ್ಕೆ ಕಾರಣವಾಗಿದ್ದ ಸಿಂಗೂರು ಮತ್ತು ನಂದಿಗ್ರಾಮ ಚಳವಳಿಯ ಸಮಯದಲ್ಲೂ ಮಮತಾ ಬ್ಯಾನರ್ಜಿ ಅವರು ಕವಿತೆಗಳ ಮೂಲಕವೇ ಜನರನ್ನು ತಲುಪಿದ್ದರು. ಇತ್ತೀಚಿನ ಪಶ್ಚಿಮ ಬಂಗಾಳದ ವಿಶೇಷ ತೀವ್ರ ಪರಿಷ್ಕರಣೆ ಸಮಯದಲ್ಲೂ ಅವರು ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ಕವಿತೆಗಳನ್ನು ಹಂಚಿಕೊಳ್ಳುವ ಮೂಲಕ ರಾಜಕೀಯ ಸಂದೇಶ ರವಾನಿಸಿದ್ದರು. ಈಗ ಪಕ್ಷದೊಳಗಿನ ಬಂಡಾಯ ಶಮನಗೊಳಿಸಲು ಮತ್ತೆ ಕಾವ್ಯದ ಮೊರೆ ಹೋಗಿದ್ದಾರೆ.

# 2 ತಿಂಗಳಲ್ಲಿ 8 ಹುಲಿ ಸಾವು: ವರದಿ ಕೇಳಿದ ಮಧ್ಯಪ್ರದೇಶ ಹೈಕೋರ್ಟ್

**ಭೂಪಾಲ್, ಮೇ 30:** ಮಧ್ಯಪ್ರದೇಶದ ಪ್ರಸಿದ್ಧ ಕನ್ಹಾ ರಾಷ್ಟ್ರೀಯ ಉದ್ಯಾನವನದಲ್ಲಿ 2 ತಿಂಗಳ ಅವಧಿಯಲ್ಲಿ ಬರೋಬ್ಬರಿ 8 ಹುಲಿಗಳು ಮೃತಪಟ್ಟಿರುವುದು ಆತಂಕ ಮೂಡಿಸಿದೆ. ಈ ಗಂಭೀರ ಪ್ರಕರಣವನ್ನು ಕೈಗೆತ್ತಿಕೊಂಡಿರುವ ಮಧ್ಯಪ್ರದೇಶ ಹೈಕೋರ್ಟ್‌ನ ಜಬಲ್ಪುರ ಪೀಠವು, ಹುಲಿಗಳ ಸರಣಿ ಸಾವನ್ನು ತಡೆಯಲು ಕೈಗೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ನೋಟಿಸ್ ಜಾರಿ ಮಾಡಿದೆ.

ಸುಬಿತ್ ಚಕ್ರವರ್ತಿ – ಯೂನಿಯನ್ ಆಫ್ ಇಂಡಿಯಾ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ವಿವೇಕ್ ಜೈನ್ ಮತ್ತು ಅಜಯ್ ಕುಮಾರ್ ನಿರಂಖಾರಿ ಅವರಿದ್ದ ದ್ವಿಸದಸ್ಯ ಪೀಠವು ಈ ಆದೇಶ ನೀಡಿದೆ. ಮುಂಬೈ ಮೂಲದ ವಕೀಲ ಸುಬಿತ್ ಚಕ್ರವರ್ತಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಕೇಂದ್ರ ಸರ್ಕಾರ, ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ, ಮಧ್ಯಪ್ರದೇಶ ಸರ್ಕಾರ ಮತ್ತು ಹಿರಿಯ ಅರಣ್ಯ ಅಧಿಕಾರಿಗಳಿಗೆ ನೋಟಿಸ್ ನೀಡಿದೆ. ಹಾಗೂ ಕನ್ಹಾ ರಾಷ್ಟ್ರೀಯ ಉದ್ಯಾನವನದಲ್ಲಿ ಹುಲಿಗಳ ಸಾವು ತಡೆಯಲು ಮತ್ತು ಈ ಕಾಯಿಲೆಗೆ ಚಿಕಿತ್ಸೆ ನೀಡಲು ಕೈಗೊಂಡಿರುವ ನಿರ್ದಿಷ್ಟ ಮುನ್ನೆಚ್ಚರಿಕಾ ಕ್ರಮಗಳ ವಿವರಗಳೊಂದಿಗೆ ಮುಂದಿನ ಎರಡು ವಾರಗಳಲ್ಲಿ ಉತ್ತರಿಸಬೇಕು ಎಂದು ಪೀಠವು ಆದೇಶ ನೀಡಿದೆ.

ಕಳೆದ ಏಪ್ರಿಲ್ ಮತ್ತು ಮೇ ತಿಂಗಳ ಅವಧಿಯಲ್ಲಿ ಕನ್ಹಾದಲ್ಲಿ 8 ಹುಲಿಗಳು ಮೃತಪಟ್ಟಿವೆ. ಇದರಲ್ಲಿ ಅರಣ್ಯ ಪ್ರೇಮಿಗಳ ನೆಚ್ಚಿನ ಹುಲಿಗಳಾಗಿದ್ದ ಸುನೈನಾ, ಅಮಾಹಿ ಮತ್ತು ಅದರ ನಾಲ್ಕು ಅರೆ ವಯಸ್ಕ ಮರಿಗಳು, ದಿಗ್ದೋಲಾ ಎಂದು ಕರೆಯಲ್ಪಡುವ



ಗಂಡು ಹುಲಿ ಹಾಗೂ ಮಹಾವೀರ್ ಹುಲಿಗಳು ಸೇರಿವೆ. ಅಧಿಕಾರಿಗಳ ಪ್ರಕಾರ, ಈ ಹುಲಿಗಳ ಸಾವಿಗೆ ಶ್ವಾಸಕೋಶದ ಸೋಂಕು ಅಥವಾ ನಾಯಿಗಳಿಂದ ಹರಡುವ ಮಾರಕ ಕನೈನ್ ಡಿಸ್ಟೆಂಪರ್ ವೈರಸ್ ಕಾರಣ ಇರಬಹುದು ಎಂದು ಶಂಕಿಸಲಾಗಿದೆ. ಹುಲಿಗಳು ಸಾವನ್ನಪ್ಪಿರುವ ಕನ್ಹಾದ ಸರ್ಹಿ ವಲಯವು ಹಲವು ಗ್ರಾಮಗಳ ಗಡಿಗೆ ಹೊಂದಿಕೊಂಡಿದೆ. ಈ ಸೂಕ್ಷ್ಮ ಪ್ರದೇಶಗಳಲ್ಲಿ ಹರಡುವ ರೋಗಗಳನ್ನು ತಡೆಯಲು ಮತ್ತು ಸ್ಥಳೀಯ ನಾಯಿಗಳಿಗೆ ಲಸಿಕೆ ಹಾಕುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ. ಎನ್‌ಟಿಸಿಎಯ ಆನ್‌ಲೈನ್ ಅಂಕಿ–ಅಂಶದಲ್ಲಿ ಹುಲಿಗಳ ಸಾವಿನ ನಿಖರ ಮಾಹಿತಿ ಇಲ್ಲ. ಟಿ–141 ಹುಲಿ ಮತ್ತು ಅದರ ನಾಲ್ಕು ಮರಿಗಳ ಸಾವಿನ ಸರಣಿ ಪ್ರಕರಣವನ್ನು ಪಾರದರ್ಶಕವಾಗಿ ದಾಖಲಿಸಿಲ್ಲ ಎಂದು ಅರ್ಜಿದಾರರು ಆರೋಪಿಸಿದ್ದಾರೆ.

ಹೀಗಾಗಿ, ಹುಲಿಗಳ ಮರಣೋತ್ತರ ಪರೀಕ್ಷೆಯ ಸಂಪೂರ್ಣ ದಾಖಲೆಗಳನ್ನು ಸುರಕ್ಷಿತವಾಗಿಡಬೇಕು, ವೈರಸ್ ತಡೆಗಟ್ಟುವ ಕುರಿತು ಎನ್ಟಿಸಿಎ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಮತ್ತು ಈ ವೈಫಲ್ಯದ ತನಿಖೆಗಾಗಿ ಸ್ವತಂತ್ರ ಪರಿಣಿತರ ಸಮಿತಿಯನ್ನು ರಚಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

# ಯುಪಿಎಸ್‌ಸಿ ಫಲಿತಾಂಶದ ಬಗ್ಗೆ ತಪ್ಪು ಜಾಹೀರಾತು: ಕೋಚಿಂಗ್ ಸಂಸ್ಥೆಗೆ 7 ಲಕ್ಷ ರೂ. ದಂಡ

**ನವದೆಹಲಿ, ಮೇ 30:** ಯುಪಿಎಸ್‌ಸಿ ನಾಗರಿಕ ಸೇವೆಗಳ ಪರೀಕ್ಷೆಯ ಫಲಿತಾಂಶಕ್ಕೆ ಸಂಬಂಧಿಸಿದಂತೆ ದಾರಿತಪ್ಪಿಸುವ ಜಾಹೀರಾತು ನೀಡಿದ ಪ್ರಮುಖ ಕೋಚಿಂಗ್ ಸಂಸ್ಥೆ ವಾಜಿರಾಮ್ ಮತ್ತು ರವಿ ಐಎಎಸ್ ಸ್ಟಡಿ ಸೆಂಟರ್‌ಗೆ ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ ಬರೋಬ್ಬರಿ 7 ಲಕ್ಷ ರೂ. ದಂಡ ವಿಧಿಸಿದೆ. ಗ್ರಾಹಕ ರಕ್ಷಣಾ ಕಾಯ್ದೆ 2019ರ ಉಲ್ಲಂಘನೆ ಮತ್ತು ಉದ್ದೇಶಪೂರ್ವಕವಾಗಿ ಪ್ರಮುಖ ಮಾಹಿತಿಯನ್ನು ಮರೆಮಾಚಿದ್ದಕ್ಕಾಗಿ ಈ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಮುಖ್ಯ ಆಯುಕ್ತೆ ನಿಧಿ ಖರೆ ಮತ್ತು ಆಯುಕ್ತೆ ಅನುಪಮ್ ಮಿಶ್ರಾ ನೇತೃತ್ವದ ಪೀಠವು ಈ ಆದೇಶವನ್ನು ಹೊರಡಿಸಿದೆ.

2023ರ ಯುಪಿಎಸ್ಸಿ ಪರೀಕ್ಷೆಯಲ್ಲಿ ಯಶಸ್ವಿಯಾದ ಅಭ್ಯರ್ಥಿಗಳ ಹೆಸರು ಮತ್ತು ಚಿತ್ರಗಳನ್ನು ಸಂಸ್ಥೆಯು ತನ್ನ ವೆಬ್‌ಸೈಟ್‌ನಲ್ಲಿ ದೊಡ್ಡದಾಗಿ ಪ್ರದರ್ಶಿಸಿತ್ತು. ಆದರೆ, ಆ ಅಭ್ಯರ್ಥಿಗಳು ಸಂಸ್ಥೆಯಲ್ಲಿ ಯಾವ ಕೋರ್ಸ್ ಪಡೆದಿದ್ದರು ಎಂಬ ನಿಖರ ಮಾಹಿತಿಯನ್ನು ಮರೆಮಾಚಿತ್ತು. ಅಭ್ಯರ್ಥಿಗಳು ಕೇವಲ ಉಚಿತ ಸಂದರ್ಶನ ಮಾರ್ಗದರ್ಶನ ಪಡೆದಿದ್ದರೂ, ಅವರು ಸಂಸ್ಥೆಯಲ್ಲೇ ಪೂರ್ಣಾವಧಿ ಹಣ ಪಾವತಿಸಿ ಓದಿದ ವಿದ್ಯಾರ್ಥಿಗಳು ಎನ್ನುವಂತೆ ಬಿಂಬಿಸಿ ಗ್ರಾಹಕರನ್ನು ದಾರಿತಪ್ಪಿಸಲಾಗಿತ್ತು. ಎರಡು ಕಠಿಣ ಹಂತಗಳನ್ನು ಸ್ವಂತವಾಗಿ ಪಾಸ್ ಮಾಡಿದ ಅಭ್ಯರ್ಥಿಗಳಿಗೆ ಕೇವಲ ಸಂದರ್ಶನದ ವೇಳೆ ಮಾರ್ಗದರ್ಶನ ನೀಡಿ, ಇಡೀ ಯಶಸ್ಸು ತಮ್ಮದೇ ಎಂದು ತೋರಿಸಿಕೊಳ್ಳುವುದು ಕಾನೂನುಬಾಹಿರ. ಇದು ವಿದ್ಯಾರ್ಥಿಗಳಿಗೆ ಮಾಹಿತಿ ಪಡೆಯುವ ಹಕ್ಕಿನ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಸಿಸಿಪಿಎ ಹೇಳಿದೆ.

60ಕ್ಕೂ ಹೆಚ್ಚು ಸಂಸ್ಥೆಗಳಿಗೆ ಬಿಸಿ ಮುಟ್ಟಿಸಿದ ಸಿಸಿಪಿಎ ತರಬೇತಿ ವಲಯದಲ್ಲಿ ಪಾರದರ್ಶಕತೆ ತರಲು ಮತ್ತು ವಿದ್ಯಾರ್ಥಿಗಳ ಹಿತಾಸಕ್ತಿ ಕಾಯಲು ಸಿಸಿಪಿಎ ದೇಶಾದ್ಯಂತ ಭಾರಿ ಕಾರ್ಯಾಚರಣೆ ನಡೆಸುತ್ತಿದೆ. ದಾರಿತಪ್ಪಿಸುವ ಜಾಹೀರಾತು ನೀಡಿದ ಐಐಟಿ–ಜೆಇಇ, ನೀಟ್, ಆರ್‌ಬಿಐ ಮತ್ತು ಯುಪಿಎಸ್‌ಸಿ ತರಬೇತಿ ನೀಡುವ 60ಕ್ಕೂ ಹೆಚ್ಚು ಕೋಚಿಂಗ್ ಸಂಸ್ಥೆಗಳಿಗೆ ಈಗಾಗಲೇ ನೋಟಿಸ್ ನೀಡಲಾಗಿದೆ. ಇದುವರೆಗೆ ಇಂತಹ ನಿಯಮ ಉಲ್ಲಂಘಿಸಿದ ಸಂಸ್ಥೆಗಳ ಮೇಲೆ ಒಟ್ಟು 1.46 ಕೋಟಿ ರೂ. ಗೂ ಹೆಚ್ಚು ದಂಡ ವಿಧಿಸಲಾಗಿದೆ. ಯಾವುದೇ ತರಬೇತಿ ಸಂಸ್ಥೆಯನ್ನು ಆಯ್ಕೆ ಮಾಡುವ ಮುನ್ನ ಅಲ್ಲಿನ ಕೋರ್ಸ್‌ಗಳ ಬಗ್ಗೆ ನಿಖರ ಮತ್ತು ಪಾರದರ್ಶಕ ಮಾಹಿತಿ ಪಡೆಯುವ ಸಂಪೂರ್ಣ ಹಕ್ಕು ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಇದೆ.

# 11ನೇ ವರ್ಷದ ಪಟ್ಲ ಸಂಭ್ರಮ, ಡಾ.ಆಳ್ವರಿಗೆ ಯಕ್ಷಧ್ರುವ ಮಹಾಪೋಷಕ, ಪೊಲ್ಯರಿಗೆ ಯಕ್ಷಧ್ರುವ ಪಟ್ಲ ಪ್ರಶಸ್ತಿ

ಮುಂಬಯಿ, ಮೆ.30: ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ (ರಿ) ಮಂಗಳೂರು ಇದರ 11 ನೇ ವರ್ಷದ ಪಟ್ಲ ಸಂಭ್ರಮ 2026 ಇಂದಿಲ್ಲಿ ಶನಿವಾರ ಅಡ್ಯಾರ್ ಬಳಿಯ ಅಡ್ಯಾರ್ ಗಾರ್ಡನ್ ನಲ್ಲಿ ನಡೆಯಿತು.

ಯಕ್ಷಧ್ರುವ ಪಟ್ಲ ಸಂಭ್ರಮ 2026 ಕಾರ್ಯಕ್ರಮವನ್ನು ಪಾವಂಜೆ ನಾಗವೃಜ ಕ್ಷೇತ್ರದ ಧರ್ಮಧರ್ಶಿಗಳಾದ ಡಾ ಯಾಜಿ ನಿರಂಜನ ಭಟ್ ಉದ್ಘಾಟಿಸಿದರು. ಸಭಾ ಕಾರ್ಯಕ್ರಮವನ್ನು ಪಟ್ಲ ಫೌಂಡೇಶನ್ ಟ್ರಸ್ಟ್ ನ ಪ್ರಧಾನ ಸಂಚಾಲಕರಾದ, ಉದ್ಯಮಿ ಶಶಿಧರ ಬಿ ಶೆಟ್ಟಿ ಉದ್ಘಾಟಿಸಿದರು.

ಸಂಘ ಸಂಸ್ಥೆಗಳು ಬೆಳೆಯ ಬೇಕಾದರೆ ಎಲ್ಲರ ಸಹಕಾರ ಬೇಕು. ಯಕ್ಷಗಾನ ಕಲೆಯನ್ನು ಉಳಿಸಿ ಬೇಕಾದುದು ನಮ್ಮೆಲ್ಲರ ಕರ್ತವ್ಯವಾಗಿದೆ. ಕಾಲಮಿತಿ ಯಕ್ಷಗಾನದಿಂದ ಇವತ್ತು ಕಲಾವಿದರು ಬೇರೆ ಉದ್ಯೋಗವನ್ನೂ ಮಾಡುತ್ತಿದ್ದಾರೆ. ಕಲಾವಿದರ ಬದುಕು ಕಟ್ಟಿ ಕೊಡುವ ಕೆಲಸ ಪಟ್ಲ ಫೌಂಡೇಶನ್ ಮಾಡುತ್ತಿದೆ. ಕಲಾವಿದರ ಶ್ರೇಯೋಭಿವೃದ್ಧಿಯ ನಿಟ್ಟಿನಲ್ಲಿ ದಾನಿಗಳಿಗೆ ದಾನ ಮಾಡುವ ಶಕ್ತಿ ಕೊಡಲಿ ಎಂದರು.

11ನೇ ವರ್ಷದ ಪಟ್ಲ ಸಂಭ್ರಮದಲ್ಲಿ ಡಾ। ಎಂ ಮೋಹನ್ ಆಳ್ವ ಅವರಿಗೆ 2026 ರ ಯಕ್ಷಧ್ರುವ ಮಹಾಪೋಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. 2026 ರ ಸಾಲಿನ ಪಟ್ಲ ಪ್ರಶಸ್ತಿಯನ್ನು ಪೊಲ್ಯ ಲಕ್ಷ್ಮೀನಾರಾಯಣ ಶೆಟ್ಟಿ ಅವರಿಗೆ ಒಂದು ಲಕ್ಷ ರೂ. ನಗದು, ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಡಾ। ಎಂ ಮೋಹನ್ ಆಳ್ವ ಮಾತನಾಡಿ ಕಲೆ ಎಂಬುದು ನಮ್ಮ ಸಂಪತ್ತು, ಜಾನಪದ ಕಲೆಗಳಲ್ಲಿ ಯಕ್ಷಗಾನ ಕಲೆ ವಿಜೃಂಭಿಸಿದೆ. ಯಕ್ಷಗಾನ ಎಂದೂ ಸೊರಗದ ಕಲೆ. ಅದು ಶ್ರೀಮಂತಿಕೆಯಾಗಿ ಎತ್ತರಕ್ಕೆ ಬೆಳೆದಿದೆ. ಜಾನಪದ ಕಲೆಗಳಲ್ಲಿ ಯಕ್ಷಗಾನ ನಂಬರ್ ಒನ್ ಸ್ಥಾನದಲ್ಲಿದೆ. ಪಟ್ಲ ಫೌಂಡೇಶನ್ ಟ್ರಸ್ಟ್ ರಾಜ್ಯದಲ್ಲಿ ಸಾಂಸ್ಕೃತಿಕ ರಂಗದಲ್ಲಿ ಹೆಸರು ಮಾಡಿದ ಸಂಸ್ಥೆ. ಪಟ್ಲರು ಮದ್ದಲೆಗಾರರಾಗಿ, ಭಾಗವತರಾಗಿ ಯಜಮಾನರಾಗಿ ಯಕ್ಷಗಾನದ ಕಲೆಯಲ್ಲಿ ಯಾರೂ ಊಹಿಸದ ರೀತಿಯಲ್ಲಿ ಕೆಲಸ ಮಾಡಿದ್ದಾರೆ ಎಂದರು.



ಪೊಲ್ಯ ಲಕ್ಷ್ಮೀನಾರಾಯಣ ಶೆಟ್ಟಿ ಸನ್ಮಾನ ಸ್ವೀಕರಿಸಿ ಕಲಾವೇವೆಯ ನಿವೃತ್ತಿಯ ಅಂಚಿನಲ್ಲಿದ್ದಾಗ ಪಟ್ಲ ಪ್ರಶಸ್ತಿಯ ಸನ್ಮಾನ ಜವಾಬ್ದಾರಿಯನ್ನು ಹೆಚ್ಚಿಸಿದೆ ಎಂದರು.

ಸಭಾ ಕಾರ್ಯಕ್ರಮದಲ್ಲಿ ಎಡನೀರು ಮಠದ ಶ್ರೀ ಸಚ್ಚಿದಾನಂದ ಭಾರತೀ ಶ್ರೀ ಪಾದರು ಮಾತನಾಡಿ ಪಟ್ಲ ಟ್ರಸ್ಟ್ ಕಲಾತ್ಮಕವಾಗಿ ಮತ್ತು ಸಂಘಟನಾತ್ಮಕವಾಗಿ ಬೆಳೆಯುತ್ತಿದೆ ಎಂದರು.

ಒಡಿಯೂರು ಕ್ಷೇತ್ರದ ಗುರುದೇವಾನಂದ ಸ್ವಾಮೀಜಿ ಮಾತನಾಡಿ ಯಕ್ಷಗಾನ ಕ್ಷೇತ್ರದಲ್ಲಿ ಪಟ್ಲ ಹೆಸರಿನಲ್ಲಿ ದೊಡ್ಡ ಮರ ಬೆಳೆದಿದೆ. ಅದು ಎಲ್ಲರಿಗೂ ನೆರಳನ್ನು ಕೊಡುತ್ತದೆ. ಜನರ ಮನಸ್ಸಿನಲ್ಲಿ ಉಳಿಯುವ ಕೆಲಸವನ್ನು ಪಟ್ಲ ಫೌಂಡೇಶನ್ ಟ್ರಸ್ಟ್ ಮಾಡುತ್ತಿದೆ ಎಂದು ಆಶೀರ್ವಚನ ನೀಡಿದರು.

ಮುಂಬಯಿಯ ಹೇರಂಭ ಇಂಡಸ್ಟ್ರೀಸ್ ಸಂಸ್ಥೆಯ ಅಧ್ಯಕ್ಷರಾದ ಡಾ। ಸದಾಶಿವ ಶೆಟ್ಟಿ ಕನ್ಯಾನ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ನಾಮಕಾವಸ್ಥೆಗೆ ಸಂಘಟನೆಗಳು ಇರಬಾರದು, ಸಂಸ್ಥೆಗಳು ಪಾರದರ್ಶಕವಾಗಿ ಕೆಲಸ ಮಾಡಬೇಕು. ದಾನಿಗಳನ್ನು ಗೌರವಯುತವಾಗಿ ನೋಡಿಕೊಳ್ಳಬೇಕು. ಪಟ್ಲ ಫೌಂಡೇಶನ್ ಟ್ರಸ್ಟ್ ಪಾರದರ್ಶಕವಾಗಿ ಕೆಲಸ ಮಾಡಿ ಕಲಾವಿದರ ಏಳಿಗೆಗಾಗಿ ಶ್ರಮಿಸುತ್ತಿದೆ. ಮುಂದೆಯೂ ಪಟ್ಲ ಫೌಂಡೇಶನ್ ಟ್ರಸ್ಟ್‌ಗೆ ಸಹಕಾರ ನೀಡುತ್ತೇನೆ ಎಂದರು.


ಸಮಾರಂಭದಲ್ಲಿ ಚಂಡೀಗಢ ಕಾರ್ಯದರ್ಶಿ ರಾಜೇಶ್ ಪ್ರಸಾದ್ ಐಎಎಸ್, ಪ್ರೊ ಎಂಎಲ್ ಸಾಮಗ, ಮುಂಬೈ ವಿ ಕೆ ಗ್ರೂಪ್ಸ್ ನ ಅಧ್ಯಕ್ಷ ಕರುಣಾಕರ ಎಂ ಶೆಟ್ಟಿ ಮಧ್ಯಗುತ್ತು, ಉದ್ಯಮಿ ವೇಣುಗೋಪಾಲ್ ಶೆಟ್ಟಿ ಮುಬೈ, ಅಜಿತ್ ಶೆಟ್ಟಿ ಅಂಕಿಲೇಶ್ವರ, ಸಂಸದ ಬ್ರಿಜೇಶ್ ಚೌಟ, ದಿವಾಕರ ರಾವ್ ಕಟೀಲು, ಯೋಗೀಂದ್ರ ಭಟ್ ಉಳಿ, ಉದ್ಯಮಿ ಜಿ ಶಂಕರ್ ಉಡುಪಿ, ಪಟ್ಲಗುತ್ತು ಮಹಾಬಲ ಶೆಟ್ಟಿ, ಸತೀಶ್ ಶೆಟ್ಟಿ ಪಟ್ಲ, ಪ್ರಧಾನ ಕಾರ್ಯದರ್ಶಿ ಪುರುಷೋತ್ತಮ ಕೆ ಭಂಡಾರಿ ಅಡ್ಯಾರ್, ಕೋಶಾಧಿಕಾರಿ ಸಿಎ ಸುದೇಶ್ ಕುಮಾರ್ ರೈ, ಯೋಜನಾ ನಿರ್ದೇಶಕ ಡಾ ಸತೀಶ್ ಭಂಡಾರಿ, ಉಪಾಧ್ಯಕ್ಷರಾದ ಅಶೋಕ್ ಆರ್ ಶೆಟ್ಟಿ ಪೆರ್ಮುದೆ, ದುರ್ಗಾಪ್ರಸಾದ್ ಪಿವಿ ಪಡುಬಿದ್ರೆ, ಸಂಘಟನಾ ಕಾರ್ಯದರ್ಶಿ ಕದ್ರಿ ನವನೀತ ಶೆಟ್ಟಿ, ಬಾಳ ಜಗನ್ನಾಥ ಶೆಟ್ಟಿ, ಪ್ರದೀಪ್ ಆಳ್ವ ಕದ್ರಿ, ಜತೆ ಕಾರ್ಯದರ್ಶಿ ರಾಜೀವ ಪೂಜಾರಿ ಕೈಕಂಬ, ರವಿಚಂದ್ರ ಶೆಟ್ಟಿ ಅಶೋಕನಗರ, ಉದಯಕುಮಾರ್ ಶೆಟ್ಟಿ ಉಪಸ್ಥಿತರಿದ್ದರು.

ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ ನ ಸ್ಥಾಪಕಾಧ್ಯಕ್ಷ ಪಟ್ಲಗುತ್ತು ಸತೀಶ್ ಶೆಟ್ಟಿ ಸ್ವಾಗತಿಸಿದರು. ಪ್ರದೀಪ್ ಆಳ್ವ ಕದ್ರಿ ವಂದಿಸಿದರು. ಕದ್ರಿ ನವನೀತ ಶೆಟ್ಟಿ ಕಾರ್ಯಕ್ರಮ ನಿರ್ವಹಿಸಿದರು. ಸಮಾರಂಭದಲ್ಲಿ ನಾಲ್ಕು ಸಾವಿರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಯಿತು. ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್ 11 ವರ್ಷಗಳಲ್ಲಿ 16 ಕೋಟಿ ಮೌಲ್ಯದ ಸೇವಾ ಕಾರ್ಯಗಳನ್ನು ನೆರವೇರಿಸಿದೆ.

### ಸಿಎಂ ಸ್ಥಾನದಿಂದ ನಿರ್ಗಮಿಸುವ ಮುನ್ನ ಸಿದ್ದರಾಮಯ್ಯ ಅವರಿಂದ ನೇಮಕ

## ರಾಜ್ಯ ಮಾನವಹಕ್ಕು ಆಯೋಗಕ್ಕೆ ನಿವೃತ್ತ ನ್ಯಾ.ಪಿ.ಎನ್. ದೇಸಾಯಿ ಅಧ್ಯಕ್ಷ

**ಬೆಂಗಳೂರು, ಮೇ. 30:** ಸಿಎಂ ಸ್ಥಾನದಿಂದ ನಿರ್ಗಮಿಸುವ ಮೊದಲು ಸಿದ್ದರಾಮಯ್ಯ ಅವರು ನಿವೃತ್ತ ನ್ಯಾಯಮೂರ್ತಿ ಪಿ.ಎನ್. ದೇಸಾಯಿ ಅವರನ್ನು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರನ್ನಾಗಿ ನೇಮಿಸಿದ್ದಾರೆ.



ಈ ನೇಮಕ ರಾಜ್ಯ ರಾಜಕೀಯದಲ್ಲಿ ಪಕ್ಷಪಾತದ ಹೊಸ ಆರೋಪಗಳಿಗೆ ಕಾರಣವಾಗಿದೆ. ಮೇ 28ರಂದು ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುವ ಕೆಲವೇ ದಿನಗಳ ಮೊದಲು, ಮೇ 21ರ ಸುಮಾರಿಗೆ ನ್ಯಾಯಮೂರ್ತಿ ದೇಸಾಯಿ ಅವರನ್ನು ನೇಮಕ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿತು. ಮುಖ್ಯಮಂತ್ರಿಗಳ ಪತ್ನಿ ಪಾರ್ವತಿ ಸಿದ್ದರಾಮಯ್ಯ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ದಲ್ಲಿ ಪಡೆದ ನಿವೇಶನ ಸಂಬಂಧ, ಭೂ ಮಂಜೂರಾತಿ ಪ್ರಕರಣದ ತನಿಖೆ ನಡೆಸಿದ ಏಕಸದಸ್ಯ ನ್ಯಾಯಾಂಗ ಆಯೋಗದ ನೇತೃತ್ವವನ್ನು ನ್ಯಾಯಮೂರ್ತಿ ದೇಸಾಯಿ ವಹಿಸಿದ್ದರು, ಮುಡಾದಿಂದ ಪರ್ಯಾಯ ನಿವೇಶನಗಳ ಹಂಚಿಕೆ ಕಾನೂನುಬಾಹಿರವಲ್ಲ ಎಂದು ತೀರ್ಮಾನಿಸಿ ನ್ಯಾಯಮೂರ್ತಿ ದೇಸಾಯಿ ಆಯೋಗವು ಸಿದ್ದರಾಮಯ್ಯ ಮತ್ತು ಅವರ ಕುಟುಂಬಕ್ಕೆ ಕ್ಲೀನ್‌ಚಿಟ್ ನೀಡಿತ್ತು. ಈ ವರದಿಯನ್ನು ಸೆಪ್ಟೆಂಬರ್ 2025ರಲ್ಲಿ ರಾಜ್ಯ ಸಚಿವ ಸಂಪುಟ ಅಂಗೀಕರಿಸಿತು.ಸಿದ್ದರಾಮಯ್ಯ ಯಾರ ಸಾಲವನ್ನೂ ಇಟ್ಟುಕೊಳ್ಳುವ ವ್ಯಕ್ತಿಯಲ್ಲ. ಹೀಗಾಗಿ ನ್ಯಾಯಮೂರ್ತಿ ಪಿ.ಎನ್. ದೇಸಾಯಿ ಅವರಿಗೆ ಕೃತಜ್ಞತೆ ಸಲ್ಲಿಸಲು ಅವರನ್ನು ರಾಜ್ಯ ಮಾನವಹಕ್ಕುಗಳ ಆಯೋಗದ ಅಧ್ಯಕ್ಷರನ್ನಾಗಿ ನೇಮಕ ಮಾಡಿದ್ದಾರೆ ಎನ್ನಲಾಗಿದೆ.

ಮುಡಾ ಪ್ರಕರಣವು ಸಿದ್ದರಾಮಯ್ಯ ಸರ್ಕಾರಕ್ಕೆ ದೊಡ್ಡ ರಾಜಕೀಯ ಮುಜುಗರವನ್ನುಂಟು ಮಾಡಿತ್ತು. ನಿಯಮಗಳನ್ನು ಉಲ್ಲಂಘಿಸಿ, ಪಾರ್ವತಿ ಸಿದ್ದರಾಮಯ್ಯ ಅವರು ಪೂರ್ವಜರ ಭೂಮಿಗೆ ಬದಲಾಗಿ ಮೈಸೂರಿನ ಪ್ರಮುಖ ಬಡಾವಣೆಯಲ್ಲಿ 14 ಪರಿಹಾರ ನಿವೇಶನಗಳನ್ನು ಪಡೆದಿದ್ದಾರೆ ಎಂದು ವಿರೋಧ ಪಕ್ಷಗಳು ಆರೋಪಿಸಿದವು.ತೀವ್ರ ಒತ್ತಡದ ನಡುವೆ ಸರ್ಕಾರ ಆರೋಪಗಳನ್ನು ತನಿಖೆ ಮಾಡಲು ನ್ಯಾಯಮೂರ್ತಿ ದೇಸಾಯಿ ಅವರನ್ನು ನೇಮಿಸಿತು. ಅವರ ವರದಿಯು ಕೆಲವು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಶಿಫಾರಸು ಮಾಡುವುದರ ಜೊತೆಗೆ ಕುಟುಂಬವನ್ನು ಹೆಚ್ಚಾಗಿ ದೋಷಮುಕ್ತಗೊಳಿಸಿತು. ಅನುಕೂಲಕರ ವರದಿಯನ್ನು ನೀಡಿದ ಅದೇ ನ್ಯಾಯಾಧೀಶರನ್ನು ರಾಜ್ಯದ ಪ್ರಮುಖ ಮಾನವ ಹಕ್ಕುಗಳ ಸಂಸ್ಥೆಯ ಮುಖ್ಯಸ್ಥರನ್ನಾಗಿ ನೇಮಿಸಿರುವುದು, ಅದು ಕೂಡ ಮುಖ್ಯಮಂತ್ರಿ ಸ್ವತಃ ನಿರ್ಗಮಿಸುವ ಮುನ್ನಾದಿನ ತೆಗೆದುಕೊಂಡಿರುವ ಈ ನಿರ್ಧಾರ ರಾಜಕೀಯ ವಲಯಗಳಲ್ಲಿಯೂ ಹುಬ್ಬೇರಿಸಿದೆ. ಹೊರಹೋಗುವ ಸರ್ಕಾರಗಳಿಂದ ಕೊನೆಯ ಕ್ಷಣದಲ್ಲಿ ನಡೆಯುವ ಇಂತಹ ನೇಮಕಾತಿಗಳನ್ನು ಸಾಮಾನ್ಯವಾಗಿ ನಿಷ್ಠಾವಂತರಿಗೆ ಪ್ರತಿಫಲ ನೀಡುವುದಾಗಿದೆ ಎಂದು ಹೇಳಲಾಗುತ್ತಿದೆ. ಅಧಿಕಾರ ಕೈ ಬದಲಾಗುವ ಮೊದಲು ಬಾಧ್ಯತೆಗಳನ್ನು ಇತ್ಯರ್ಥಪಡಿಸುವ ಪ್ರಯತ್ನಗಳಾಗಿ ನೋಡಲಾಗುತ್ತದೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾ ಸ್ಪೀಕರ್ ಯುಟಿ ಖಾದರ್ ಮತ್ತು ವಿರೋಧ ಪಕ್ಷದ ನಾಯಕರನ್ನು ಒಳಗೊಂಡ ಸಮಿತಿಯು ಈ ನೇಮಕಾತಿಯನ್ನು ಅನುಮೋದಿಸಿದೆ.



ಬೆಂಗಳೂರಿನ ರಾಷ್ಟ್ರೀಯ ಫ್ಯಾಷನ್ ತಂತ್ರಜ್ಞಾನ ಸಂಸ್ಥೆಯಲ್ಲಿ ಶುಕ್ರವಾರ ಸಂಜೆ ಆಯೋಜಿಸಿದ್ದ ವಿವಿಧ ತೊಡುಗೆಗಳ ವಿನ್ಯಾಸಗಳನ್ನು ರೂಪದರ್ಶಿಗಳು ರ್‍ಯಾಂಪ್ ಮೇಲೆ ಪ್ರದರ್ಶಿಸಿದರು.

### ನಿರೀಕ್ಷಣಾ ಜಾಮೀನು ನೀಡಲು ನಿರಾಕರಣೆ

## ವಿದ್ಯಾರ್ಥಿನಿಗೆ ಗರ್ಭಪಾತ ಮಾಡಿಸಿದ ನೀವೆಂಥಾ ವೈದ್ಯೆ: ಕಿಡಿಕಾರಿದ ಹೈಕೋರ್ಟ್

**ಬೆಂಗಳೂರು, ಮೇ. 30:** ಪ್ರೌಢಶಾಲೆ ವಿದ್ಯಾರ್ಥಿನಿಗೆ ಕಾನೂನುಬಾಹಿರವಾಗಿ ಗರ್ಭಪಾತ ಮಾಡಿಸಿದ ಆರೋಪ ಎದುರಿಸುತ್ತಿರುವ 70 ವರ್ಷ ವೈದ್ಯೆಗೆ "ನೀವೆಂಥಾ ವೈದ್ಯೆ" ಎಂದು ಕಿಡಿ ಕಾರಿರುವ ಕರ್ನಾಟಕ ಹೈಕೋರ್ಟ್ ಶುಕ್ರವಾರ ಅವರಿಗೆ ನಿರೀಕ್ಷಣಾ ಜಾಮೀನು ನಿರಾಕರಿಸಿದೆ.




ಚಿತ್ರದುರ್ಗದ ಶಿ ನರ್ಸಿಂಗ್ ಹೋಮ್‌ನ ವೈದ್ಯೆ ಡಾ. ಬಿ. ಶಂಕರಲಕ್ಷ್ಮಿ ಅವರ ನಡತೆಯ ಬಗ್ಗೆ ನ್ಯಾಯಮೂರ್ತಿ ಆರ್ ನಟರಾಜ್ ಅವರ ಏಕಸದಸ್ಯ ಪೀಠವು ಕಳವಳ ವ್ಯಕ್ತಪಡಿಸಿದೆ. ನೀವು ಘನತೆಯುತ ವೈದ್ಯರು ಎಂದು ಹೇಳಿಕೊಳ್ಳುತ್ತೀರಿ. ಸಂತ್ರಸ್ತ ಬಾಲಕಿಯು ನಿಮ್ಮ ಮುಂದೆ ಗರ್ಭಿಣಿಯಾಗಿ ಬಂದಿದ್ದಾಳೆ. ಆದರೆ, ನೀವು, ಆಕೆ ಋತುಚಕ್ರದಲ್ಲಿ ವ್ಯತ್ಯಾಸಕ್ಕಾಗಿ ಚಿಕಿತ್ಸೆ ಪಡೆಯಲು ಬಂದಿದ್ದಳು ಎನ್ನುತ್ತಿದ್ದೀರಿ. ಇದರ ತನಿಖೆಯಾಗಬೇಕಿದೆ. ಇಂಥ ಪ್ರಕರಣಗಳನ್ನು ಸುಲಭವಾಗಿ ಪರಿಗಣಿಸಲಾಗದು. ನೀವೆಂಥಾ ವೈದ್ಯೆ ಎಂದು ನ್ಯಾಯಾಲಯವು ಕಿಡಿಕಾರಿತು.

ವೈದ್ಯೆಯನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಎಂ.ಎಸ್.ಶ್ಯಾಮ್ ಸುಂದರ್ ಅವರು ಗುಪ್ತಾಂಗದಲ್ಲಿ ರಕ್ತಸ್ರಾವ ಮತ್ತು ಮುಟ್ಟಿನಲ್ಲಿ ವ್ಯತ್ಯಾಸವಾಗಿದೆ ಎಂದು ಹೇಳಿ ಬಾಲಕಿಯನ್ನು ನಮ್ಮ ಆಸ್ಪತ್ರೆಗೆ ಕರೆತರಲಾಗಿತ್ತು. ಆಸ್ಪತ್ರೆಗೆ ಬರುವ ವೇಳೆಗೆ ಗರ್ಭಪಾತವಾಗಿತ್ತು. ವೈದ್ಯೆಯು ಚಿಕಿತ್ಸೆ ಮಾತ್ರ ನೀಡಿದ್ದಾರೆ ಎಂದರು.

ಡಾ. ಶಂಕರಲಕ್ಷ್ಮಿ ಅವರು 70 ವರ್ಷಗಳಿಂದ ವೈದ್ಯೆಯಾಗಿ ಕೆಲಸ ಮಾಡುತ್ತಿದ್ದು, ಅಕ್ರಮವಾಗಿ ಗರ್ಭಪಾತ ಮಾಡಿಸಿಲ್ಲ ಎಂದರು. ಆಗ ಪೀಠವು ನಿಮಗೆ 70 ವರ್ಷವೋ ಅಥವಾ 700 ವರ್ಷವೋ ನಮಗೆ ಬೇಕಿಲ್ಲ. ನೀವು ನಡೆದುಕೊಂಡಿರುವ ರೀತಿ ಕಳವಳಕಾರಿಯಾಗಿದೆ. ಸಂತ್ರಸ್ತ ಬಾಲಕಿಯು ಗರ್ಭಧರಿಸಿ ನಿಮ್ಮ ಬಳಿ ಬಂದಿದ್ದರೂ ನೀವು ಋತುಚಕ್ರದಲ್ಲಿ ವ್ಯತ್ಯಾಸಕ್ಕೆ ಬಂದಿದ್ದರು ಎನ್ನುತ್ತಿದ್ದೀರಿ ಎಂದಿತು.

ಆಗ ಶ್ಯಾಮ್‌ಸುಂದರ್ ಅವರು ವೈದ್ಯೆಯು ತನಿಖೆಗೆ ಸಹಕರಿಸಲಿದ್ದಾರೆ ಮತ್ತು ಆಸ್ಪತ್ರೆಯಲ್ಲಿನ ಸಿಸಿಟಿವಿ ದೃಶ್ಯಾವಳಿಯನ್ನು ಸಲ್ಲಿಸಲಾಗುವುದು. ಅಕ್ರಮವಾಗಿ ಗರ್ಭಪಾತ ಮಾಡಿಸಿದ್ದಾರೆ ಎಂಬ ಆರೋಪದ ಮೇಲೆ ಪೋಕ್ಸೊ ಕಾಯಿದೆಯಡಿ ಕಸ್ಟಡಿಗೆ ಪಡೆದು ವೈದ್ಯೆಯನ್ನು ತನಿಖೆ ನಡೆಸುವ ಅಗತ್ಯವಿಲ್ಲ ಎಂದರು.

ವಿಚಾರಣೆಯ ಒಂದು ಹಂತದಲ್ಲಿ ಪೀಠವು ನೀವು ಸ್ತ್ರೀರೋಗ ತಜ್ಞೆಯ ಬಳಿಗೆ ಹೋದ ತಕ್ಷಣ ಮೊದಲಿಗೆ ಅವರು ಕೇಳುವುದು ಕೊನೆಯ ಬಾರಿಗೆ ಯಾವಾಗ ಮುಟ್ಟಾಗಿದ್ದಿರಿ ಎಂದಿತು.

ಪ್ರೌಢಶಾಲೆಯ ವಿದ್ಯಾರ್ಥಿನಿಯನ್ನು ಶಿಕ್ಷಕ ರಾಜಣ್ಣ ಎಂಬಾತ ಅಜ್ಞಾತ ಸ್ಥಳಕ್ಕೆ ಕರೆದೊಯ್ದು ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದನು. ಕಾಲ ಕಳೆದಂತೆ ವಿದ್ಯಾರ್ಥಿನಿಯ ದೈಹಿಕ ಬದಲಾವಣೆಯನ್ನು ಮಹಿಳಾ ಶಿಕ್ಷಕಿಯೊಬ್ಬರು ಪ್ರಶ್ನಿಸಿದ್ದು, ಆಕೆ ಘಟನೆಯ ಬಗ್ಗೆ ತಿಳಿಸಿದ್ದಳು.

ಈ ಹಿನ್ನೆಲೆಯಲ್ಲಿ ಮಹಿಳಾ ಶಿಕ್ಷೆಯು ಕಿಟ್ ನೆರವಿನಿಂದ ಆಕೆಯ ಮೂತ್ರ ಪರೀಕ್ಷೆ ಮಾಡಿದ್ದರು. ಇದರಲ್ಲಿ ವಿದ್ಯಾರ್ಥಿನಿ ಗರ್ಭಧರಿಸಿದ್ದು, ಪತ್ತೆಯಾಗಿತ್ತು. ವಿಚಾರವನ್ನು ಶಿಕ್ಷಕರು ಸೇರಿ ಸಂತ್ರಸ್ತೆಯ ಗಮನಕ್ಕೆ ತಂದಿದ್ದರು. ನಂತರ ಆಕೆಯನ್ನು ಆಸ್ಪತ್ರೆಗೆ ಕರೆದೊಯ್ದು ಗರ್ಭಪಾತ ಮಾಡಿಸಲಾಗಿತ್ತು ಎಂದು ಆರೋಪಿಸಲಾಗಿದೆ.

### ವಿಜಯಾನಂದ ಕಾಶಪ್ಪನವರಿಗೆ ಸಚಿವ ಸ್ಥಾನ, ವೀಣಾ ಕಾಶಪ್ಪನವರಿಗೆ ನಿಗಮ-ಮಂಡಳಿ ಅಧ್ಯಕ್ಷ ಸ್ಥಾನ ನೀಡುವಂತೆ ಆಗ್ರಹ



**ಬೆಂಗಳೂರು, ಮೇ 30:** ಉತ್ತರ ಕರ್ನಾಟಕದ ಧ್ವನಿಯಾಗಿ, ಯುವ ಜನಾಂಗ ಹಾಗೂ ಜನ ಸಾಮಾನ್ಯರ ಸಮಸ್ಯೆಗಳ ಪರವಾಗಿ ನಿರಂತರ ಹೋರಾಟ ಮಾಡುತ್ತಿರುವ ಶಾಸಕ ವಿಜಯಾನಂದ ಕಾಶಪ್ಪನವರಿಗೆ ಸಚಿವ ಸ್ಥಾನ ನೀಡಬೇಕು ಹಾಗೂ ಸಮಾಜಮುಖಿ ಕಾರ್ಯಗಳು, ಮಹಿಳಾ ಸಬಲೀಕರಣ ಮತ್ತು ಜನಪರ ಆಡಳಿತದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ವೀಣಾ ಕಾಶಪ್ಪ ಅವರಿಗೆ ನಿಗಮ–ಮಂಡಳಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಕರ್ನಾಟಕ ರಾಜ್ಯ ಯುವ ಸಮೂಹ ರಾಜ್ಯಾಧ್ಯಕ್ಷ ಡಾ. ಎಸ್. ಸಂಗಮೇಶ್ ಆಗ್ರಹಿಸಿದ್ದಾರೆ. ಪ್ರಾದೇಶಿಕ ಸಮತೋಲನ ಆಧಾರದ ಮೇಲೆ ಸಚಿವ ಸಂಪುಟದ ಪುನಾರಚನೆಯಾಗಬೇಕು. ಉತ್ತರ ಕರ್ನಾಟಕದ ಪ್ರಭಾವಿ ಜನನಾಯಕರಾದ ವಿಜಯನಂದ ಕಾಶಪ್ಪ ಅವರಿಗೆ ಸಚಿವ ಸ್ಥಾನ ನೀಡುವುದು ಅತ್ಯಂತ ಸೂಕ್ತ ಹಾಗೂ ನ್ಯಾಯಸಮ್ಮತವಾಗಿದೆ. ಇದರಿಂದ ವೀರಶೈವ–ಲಿಂಗಾಯತ ಸಮುದಾಯದ ಪ್ರಾತಿನಿಧ್ಯ ಮತ್ತಷ್ಟು ಬಲಗೊಳ್ಳುವ ಜೊತೆಗೆ ಉತ್ತರ ಕರ್ನಾಟಕದ ಜನರ ಆಶೋತ್ತರಗಳಿಗೆ ಗೌರವ ದೊರೆಯಲಿದೆ ಎಂದಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ವಿಜಯನಂದ ಕಾಶಪ್ಪ ಅವರು ಯುವ ಜನಾಂಗದ ಕಣ್ಮಣಿಯಾಗಿದ್ದು, ಅವರ ಕುಟುಂಬ ಹಲವು ದಶಕಗಳಿಂದ ಕಾಂಗ್ರೆಸ್ ಗೆ ನಿಷ್ಠೆ ಹೊಂದಿದೆ. ಪಕ್ಷ ಸಂಘಟನೆ, ಜನಪರ ಹೋರಾಟಗಳು ಹಾಗೂ ಉತ್ತರ ಕರ್ನಾಟಕದ ಅಭಿವೃದ್ಧಿಗಾಗಿ ಅವರು ಸಲ್ಲಿಸಿರುವ ಸೇವೆ ಅಪಾರ. ಕರ್ನಾಟಕದಲ್ಲಿ ಮೊದಲ ಬಾರಿಗೆ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಿಸುವ ಮೂಲಕ ಇತಿಹಾಸ ನಿರ್ಮಿಸಿದ ಹೆಗ್ಗಳಿಕೆಗೆ ಅವರು ಪಾತ್ರರಾಗಿದ್ದಾರೆ ಎಂದು ಡಾ. ಎಸ್. ಸಂಗಮೇಶ್ ಹೇಳಿದ್ದಾರೆ. ವೀಣಾ ಕಾಶಪ್ಪ ಅವರು ಮಹಿಳಾ ಸಬಲೀಕರಣ, ಸಾಮಾಜಿಕ ಸೇವೆ, ಜನಸಂಪರ್ಕ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಬಾಗಲಕೋಟೆ ಜಿಲ್ಲೆಯ ಅಭಿವೃದ್ಧಿ ಹಾಗೂ ಮಹಿಳಾ ನಾಯಕತ್ವದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆ ಗಮನಾರ್ಹವಾಗಿದೆ. ಅವರ ಸೇವೆ ಮತ್ತು ನಾಯಕತ್ವವನ್ನು ಗುರುತಿಸಿ ರಾಜ್ಯದ ಪ್ರಮುಖ ನಿಗಮ–ಮಂಡಳಿಗಳಲ್ಲಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದಿದ್ದಾರೆ.

### ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ, ನ್ಯಾಯಮೂರ್ತಿ ಟಿ.ಜಿ. ಶಿವಶಂಕರೇಗೌಡ

## ಆರೋಗ್ಯ ವಿಮೆ ಎಚ್ಚರಿಕೆ ಅಗತ್ಯ, ದಾರಿತಪ್ಪಿಸುವ ವಿಮಾ ಕಂಪನಿಗಳು




**ಬೆಂಗಳೂರು, ಮೇ 29:** ಆರೋಗ್ಯ ವಿಮೆ ಮಾಡಿಸುವಾಗ ವ್ಯಾಪಕ ಮುಂಜಾಗ್ರತೆ ವಹಿಸುವುದು ಅಗತ್ಯ ವಾಗಿದ್ದು, ಜನಸಾಮಾನ್ಯರು ಮೋಸ ಹೋಗಬಾರದು ಎಂದು ರಾಜ್ಯ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷದ ನ್ಯಾ.ಟಿ.ಜಿ. ಶಿವಶಂಕರೇಗೌಡ ಹೇಳಿದ್ದಾರೆ.

ದೇವಾಂಗ ಸಂಘ ಕಾಲೇಜ್ ಆಫ್ ಲಾ ಹಾಗೂ ಯುವ ವಕೀಲರ ಸ್ನೇಹ ಬಳಗದಿಂದ ದೇವಾಂಗ ಸಂಘದ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಮೂರು ದಿನಗಳ ಪೋಕ್ಸೊ ಕಾಯ್ದೆ ಕುರಿತು ಶ್ರೀಪತಿಯಪ್ಪ ಸ್ಮರಣಾರ್ಥ ಅಖಿಲ ಕರ್ನಾಟಕ ಪ್ರಥಮ ಕನ್ನಡ ಅಣಕು ನ್ಯಾಯಾಲಯ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಹಕರು ವಿಮೆ ಕ್ಲೈಮ್ ಮಾಡುವಾಗ ಆರೋಗ್ಯ ವಿಮಾ ಕಂಪೆನಿಗಳು ಅನಗತ್ಯವಾಗಿ ಆಕ್ಷೇಪ ತೆಗೆಯುತ್ತಿವೆ. ರೋಗಿಗೆ ಅಧಿಕ ರಕ್ತದೊತ್ತಡವಿತ್ತು. ಮಧುಮೇಹವಿದೆ. ಹೀಗಾಗಿ ವಿಮಾ ಮೊತ್ತ ಪಾವತಿಸಲು ಸಾಧ್ಯವಿಲ್ಲ ಎಂದು ಹೇಳುತ್ತಿವೆ.

ಸಹಸ್ರಾರು ರೂಪಾಯಿ ಪಾವತಿಸಿ ವಿಮೆ ಪಡೆಯುವವರಿಗೆ ವಂಚನೆ ಯಾಗುತ್ತಿದೆ. ಇಂತಹ ಹಲವು ಪ್ರಕರಣಗಳಲ್ಲಿ ಗ್ರಾಹಕರ ಪರವಾಗಿ ತೀರ್ಪುಗಳು ಬಂದಿವೆ. ವಿಮಾ ಕಂಪೆನಿಗಳನ್ನು ಪ್ರತಿಬಾರಿ ತರಾಟೆಗೆ ತೆಗೆದುಕೊಳ್ಳಲಾಗುತ್ತಿದೆ.

ಯುವ ವಕೀಲರು ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಮೊದಲು ವೃತ್ತಿ ಆರಂಭಿಸಬೇಕು. ಏಕೆಂದರೆ ಪ್ರಕರಣಗಳು ಕೇವಲ ಮೂರು, ನಾಲ್ಕು ತಿಂಗಳಲ್ಲಿ ಇತ್ಯರ್ಥವಾಗಿ ತೀರ್ಪುಗಳು ಬರುತ್ತಿವೆ. ಪ್ರತಿಯೊಂದು ಪ್ರಕರಣವೂ ವಿಭಿನ್ನವಾಗಿದ್ದು, ಕಲಿಯಲು ವಿಪುಲ ಅವಕಾಶಗಳಿವೆ ಎಂದರು.

ಪೋಕ್ಸೋ ಕಾಯ್ದೆ ಬಗ್ಗೆ ಇಂದು ಚಿಂತನೆ ನಡೆಯುತ್ತಿದ್ದು, ಯುವ ವಕೀಲರು ವಿಷಯದ ಬಗ್ಗೆ ಬೆಳಕು ಚೆಲ್ಲಬೇಕು. 45 ಕಾಲೇಜುಗಳು ಸ್ಪರ್ಧೆಯಲ್ಲಿ ಭಾಗವಹಿಸಿರುವುದು ವಿಶೇಷವಾಗಿದೆ.

ಕೇಂದ್ರ ಸರ್ಕಾರ ಬಾಲಪರಾಧಿ ಕಾಯ್ದೆಗೆ ತಿದ್ದುಪಡಿ ತರುತ್ತಿದ್ದು, ಬಾಲನ್ಯಾಯ ವ್ಯವಸ್ಥೆಯಲ್ಲಿ ವಯೋಮಿತಿಯನ್ನು 18 ರಿಂದ 16 ವರ್ಷಕ್ಕೆ ಇಳಿಸಲು ಚಿಂತನೆ ನಡೆಯುತ್ತಿದೆ.


ಹಾಗೇನಾದರೂ ತಿದ್ದುಪಡಿ ಯಾದರೆ ದೇಶದಲ್ಲಿರುವ ಪೋಕ್ಸೋ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಲಿದೆ. ಪೋಕ್ಸೋ ಕಾಯ್ದೆಯಲ್ಲಿ ಸಂತ್ರಸ್ತರಿಗೆ ನ್ಯಾಯ ದೊರೆಯಬೇಕು. ಜೊತೆಗೆ ದುರ್ಬಳಕೆ ತಡೆಗಟ್ಟಲು ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದರು.

ಹೈಕೋರ್ಟ್ ನ್ಯಾ.ಡಾ.ಜಗಹದೀಶ್ ಹಾಲಶೆಟ್ಟಿ, ದೇವಾಂಗ ಸಂಘದ ಅಧ್ಯಕ್ಷ ಡಾ. ಜಿ. ರಮೇಶ್, ಖಜಾಂಚಿ ಶ್ವೇತಾ ರವಿಶಂಕರ್, ವಕೀಲ ಗೌರೀಶ್ ಎಸ್, ದೇವಾಂಗ ಸಂಘದ ಉಪಾಧ್ಯಕ್ಷ ಎ.ವಿಜಯ್ ಕುಮಾರ್, ಪಾರ್ವತಿ, ಯುವ ವಕೀಲರ ಸ್ನೇಹ ಬಳಗದ ಅಧ್ಯಕ್ಷ ಅನಿಲ್ ರೆಡ್ಡಿ, ಕಾಲೇಜಿನ ಪ್ರಾಂಶು ಪಾಲ ಡಾ. ಶಿಲ್ಪ, ದೇವಾಂಗ ಸಂಘದ ಕಾರ್ಯದರ್ಶಿ ಆರ್. ಭಾಸ್ಕರ್, ಖಜಾಂಚಿ ಎಂ. ಲಕ್ಷ್ಮೀ ನಾರಾಯಣ, ಜಂಟಿ ಕಾರ್ಯದರ್ಶಿ ಊರುಕರೆ ಜಿ. ದಯಾನಂದ್ ಮತ್ತಿತರರು ಉಪಸ್ಥಿತರಿದ್ದರು.

### ಇಂಧನ ಬೆಲೆ ಏರಿಕೆ, ಕನಿಷ್ಠ ವೇತನ ಹೆಚ್ಚಳ, ಬಾಕಿ ಪಾವತಿ ಸಮಸ್ಯೆ ಕಾರಣ

## ಯಾವುದೇ ಸಮಯದಲ್ಲಿ ತ್ಯಾಜ್ಯ ಸಂಗ್ರಹ ಸ್ಥಗಿತ: ಕಸ ಗುತ್ತಿಗೆದಾರರ ಎಚ್ಚರಿಕೆ

**ಬೆಂಗಳೂರು, ಮೇ 30:** ಡೀಸೆಲ್ ಹಾಗೂ ಪೆಟ್ರೋಲ್ ದರ ಏರಿಕೆ, ಕನಿಷ್ಠ ವೇತನ ಹೆಚ್ಚಳ ಮತ್ತು ಬಾಕಿ ಪಾವತಿಗಳ ಸಮಸ್ಯೆಯಿಂದಾಗಿ ಬೆಂಗಳೂರಿನಾದ್ಯಂತ ತ್ಯಾಜ್ಯ ಸಂಗ್ರಹ ಸೇವೆಗಳನ್ನು ಯಾವುದೇ ಸಮಯದಲ್ಲಿ ಸ್ಥಗಿತಗೊಳಿಸುವ ಪರಿಸ್ಥಿತಿ ಎದುರಾಗಿದೆ ಎಂದು ಕಸ ಗುತ್ತಿಗೆದಾರರು ಎಚ್ಚರಿಕೆ ನೀಡಿದ್ದಾರೆ.



ಈ ಕುರಿತು ಘನತ್ಯಾಜ್ಯ ಘಟಕದ ಮುಖ್ಯಸ್ಥರಿಗೆ ಹಾಗೂ ಜಿಬಿಎ ಮುಖ್ಯ ಆಯುಕ್ತರಿಗೆ ಪತ್ರ ಬರೆದಿರುವ ಘನತ್ಯಾಜ್ಯ ಸಂಗ್ರಹಣೆ, ಸಾಗಾಣಿಕೆ ಮತ್ತು ವಿಲೇವಾರಿ ಗುತ್ತಿಗೆದಾರರ ಸಂಘ, ತುರ್ತು ಸಭೆ ಕರೆಯುವಂತೆ ಮನವಿ ಮಾಡಿದೆ.

ಸಂಘದ ಪ್ರಧಾನ ಕಾರ್ಯದರ್ಶಿ ಬಾಲ ಸುಬ್ರಮಣ್ಯ ಮಾತನಾಡಿ, ಡೀಸೆಲ್ ದರ, ಕೂಲಿ ವೆಚ್ಚ, ವಾಹನ ನಿರ್ವಹಣಾ ಖರ್ಚು ಹಾಗೂ ಟ್ರಾಕ್ಟರ್ ಮತ್ತು ಆಟೋ ಟಿಪ್ಪರ್ ವೆಚ್ಚಗಳು ನಿರಂತರವಾಗಿ ಏರಿಕೆಯಾ ಗುತ್ತಿವೆ. ಈ ಪರಿಸ್ಥಿತಿಯಲ್ಲಿ ಹಾಲಿ ದರದಲ್ಲಿ ಸೇವೆ ಮುಂದುವರಿಸುವುದು ಅಸಾಧ್ಯವಾಗಿದೆ ಎಂದು ಹೇಳಿದ್ದಾರೆ.

2017–18ರಲ್ಲಿ ಆಟೋ ಟಿಪ್ಪರ್ ದರ ನಿಗದಿಪಡಿಸಿದ ವೇಳೆ ಡೀಸೆಲ್ ದರ ಲೀಟರ್‌ಗೆ 68 ರೂ. ಇತ್ತು. ಆದರೆ ಪ್ರಸ್ತುತ ದರವು ಸುಮಾರು 26 ರೂ.ಗಿಂತ ಹೆಚ್ಚು ಏರಿಕೆಯಾಗಿದೆ. ಆದ್ದರಿಂದ ಇಂಧನ ವೆಚ್ಚದ ಪ್ರಸ್ತುತ ಮಾನದಂಡಕ್ಕೆ ಅನುಗುಣವಾಗಿ ಹೊಸ ದರಪಟ್ಟಿ ನಿಗದಿಪಡಿಸಬೇಕು ಎಂದು ಗುತ್ತಿಗೆದಾರರು ಒತ್ತಾಯಿಸಿದ್ದಾರೆ.

ಇದೇ ವೇಳೆ, ಕರ್ನಾಟಕ ರಾಜ್ಯ ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯ ಪ್ರಕಾರ 2026–27ನೇ ಸಾಲಿಗೆ ನಿಗದಿಪಡಿಸಿರುವ ವಿ.ಡಿ.ಎ ವ್ಯತ್ಯಾಸದ ಮೊತ್ತ ಪಾವತಿಗೆ ಸರ್ಕಾರ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಮನೆಮನೆಗಳಿಂದ ತ್ಯಾಜ್ಯ ಸಂಗ್ರಹಣೆ, ಸಾಗಾಣಿಕೆ ಮತ್ತು ವಿಲೇವಾರಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆದಾರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಈಗಾಗಲೇ ಎರಡು ಬಾರಿ ಮನವಿ ಸಲ್ಲಿಸಿದ್ದರೂ ಸಭೆ ಕರೆಯಲಾಗಿಲ್ಲ ಎಂದು ಆರೋಪಿಸಿದ್ದಾರೆ.

ಇದಲ್ಲದೆ, ಬಿ.ಎಸ್.ಡಬ್ಲ್ಯು.ಎಂ.ಎಲ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಗುತ್ತಿಗೆದಾರರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ, ಮುನ್ಸೂಚನೆ ಇಲ್ಲದೆ ಆದೇಶ ಹೊರಡಿಸುತ್ತಿದ್ದು, ಇದರಿಂದ ಗುತ್ತಿಗೆದಾರರು ಕಚೇರಿ ಯಿಂದ ಕಚೇರಿಗೆ ಅಲೆದಾಡುವಂತಾಗಿದೆ ಎಂದು ದೂರಿದ್ದಾರೆ.

ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಂಡುಹಿಡಿಯದಿದ್ದರೆ ಮುಂದಿನ ದಿನಗಳಲ್ಲಿ ತ್ಯಾಜ್ಯ ಸಂಗ್ರಹ ಮತ್ತು ವಿಲೇವಾರಿ ಸೇವೆಗಳನ್ನು ಸ್ಥಗಿತ ಗೊಳಿಸುವ ಅನಿವಾರ್ಯತೆ ಎದುರಾಗಬಹುದು ಎಂದು ಗುತ್ತಿಗೆದಾರರು ಎಚ್ಚರಿಕೆ ನೀಡಿದ್ದಾರೆ.

## ಆರ್‌ಸಿಬಿ ಅಭಿಮಾನಿಗಳಿಗೆ ಇಂದು ಮೆಟ್ರೋದಲ್ಲಿ ಉಚಿತ ಪ್ರಯಾಣ ಸೌಲಭ್ಯ ಸುಳ್ಳು ವದಂತಿ: ಬಿಎಂಆರ್‌ಸಿ ಸ್ಪಷ್ಟನೆ

**ಬೆಂಗಳೂರು, ಮೇ. 31:** ಅಹಮದಾಬಾದ್‌ನಲ್ಲಿ ಭಾನುವಾರ (ಮೇ31) ನಡೆಯಲಿರುವ ಐಪಿಎಲ್) ಫೈನಲ್ ಪಂದ್ಯಾವಳಿಯ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಪೋಸ್ಟ್ ಒಂದಕ್ಕೆ ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಬ್ರೇಕ್ ಹಾಕಿದೆ. ಆರ್‌ಸಿಬಿ ಅಭಿಮಾನಿಗಳಿಗೆ ನಮ್ಮ ಮೆಟ್ರೋದಲ್ಲಿ ಉಚಿತ ಪ್ರಯಾಣ ಸೌಲಭ್ಯ ಇರಲಿದೆ ಎಂದು ಹರಿದಾಡುತ್ತಿರುವ ಸುದ್ದಿ ಸಂಪೂರ್ಣ ಸುಳ್ಳು ಎಂದು ಬಿಎಂಆರ್‌ಸಿಎಲ್ ಸ್ಪಷ್ಟಪಡಿಸಿದೆ.

ಕೆಲವು ಖಾಸಗಿ ವ್ಯಕ್ತಿಗಳು ಮತ್ತು ಸಂಸ್ಥೆಗಳು ಸಾಮಾಜಿಕ ಜಾಲತಾಣಗಳಲ್ಲಿ ಜಾಹೀರಾತು ಹಾಗೂ ಸಂದೇಶಗಳನ್ನು ಪ್ರಕಟಿಸಿ, ಭಾನುವಾರ ಆರ್‌ಸಿಬಿ ಅಭಿಮಾನಿಗಳಿಗೆ ಅಥವಾ ಯಾವುದೇ ಇತರೆ ಪ್ರಯಾಣಿಕ ವರ್ಗಕ್ಕೆ ಉಚಿತವಾಗಿ ಮೆಟ್ರೋ ಪ್ರಯಾಣ ಒದಗಿಸುವ ಯಾವುದೇ ಯೋಜನೆ ಸಂಸ್ಥೆ ಘೋಷಿಸಿಲ್ಲ ಹಾಗೂ ಅನುಮೋದಿಸಿಲ್ಲ. ಮೆಟ್ರೋ ಪ್ರಯಾಣ ಉಚಿತವಾಗಿರುತ್ತದೆ ಎಂದು ಜಾಹೀರಾತು ನೀಡಲು ಅಥವಾ ಪ್ರಚಾರ ಮಾಡಲು ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಂಘಟನೆಗೆ ಬಿಎಂಆರ್‌ಸಿಎಲ್ ಮಾನ್ಯತೆ ನೀಡಿದಿಲ್ಲ ಎಂದು ತಿಳಿಸಿದೆ.

**ನಿಯಮಿತ ಟಿಕೆಟ್ ಕಡ್ಡಾಯ:** ನಮ್ಮ ಮೆಟ್ರೋದಲ್ಲಿ ಪ್ರಯಾಣಿಸಲು ಎಲ್ಲಾ ಪ್ರಯಾಣಿಕರು ಎಂದಿನಂತೆ ಟಿಕೆಟ್ ಖರೀದಿಸಬೇಕು. ಅಥವಾ ಸ್ಮಾರ್ಟ್ ಕಾರ್ಡ್, ಕ್ಯೂಆರ್ ಟಿಕೆಟ್ ಎನ್‌ಸಿಎಂಸಿ ಕಾರ್ಡ್) ಬಳಸಿಯೇ ಪ್ರಯಾಣಿಸಬೇಕು. ಎಲ್ಲವೂ ಪ್ರಚಲಿತ ದರ ನಿಯಮಗಳಿಗೇ ಒಳಪಟ್ಟಿರುತ್ತವೆ. ಅಧಿಕೃತ ಮಾಹಿತಿ ಮಾತ್ರ ನಂಬಿ "ಸಾರ್ವಜನಿಕರು ಅನಧಿಕೃತ ಸಾಮಾಜಿಕ ಜಾಲತಾಣದ ಪೋಸ್ಟ್‌ಗಳು, ಜಾಹೀರಾತುಗಳು ಅಥವಾ ಸಂದೇಶಗಳನ್ನು ನಂಬಬಾರದು. ನಿಖರ ಮಾಹಿತಿಗಾಗಿ ಬಿಎಂಆರ್‌ಸಿಎಲ್‌ನ ಅಧಿಕೃತ ಪ್ರಕಟಣೆಗಳು ಮತ್ತು ಅಧಿಕೃತ ಮಾಧ್ಯಮಗಳನ್ನು ಮಾತ್ರ ಅವಲಂಬಿಸಬೇಕು" ಎಂದು ನಿಗಮವು ಸಾರ್ವಜನಿಕರಲ್ಲಿ ವಿನಂತಿಸಿಕೊಂಡಿದೆ.

ಸುರಕ್ಷಿತ ಹಾಗೂ ಸುಗಮ ಮೆಟ್ರೋ ಸೇವೆ ಒದಗಿಸಲು ಬದ್ಧವಾಗಿರುವ ನಿಗಮವು, ಇಂತಹ ತಪ್ಪು ಮಾಹಿತಿಯ ಪ್ರಸಾರವನ್ನು ತಡೆಯಲು ಸಾರ್ವಜನಿಕರ ಸಹಕಾರ ವನ್ನು ಕೋರಿದೆ.

## ಎದೆಗುಂದದೇ ದೇಶರಕ್ಷಣೆಗೆ ಮುಂದಾಗಿ: ಬ್ರೀಗೇಡಿಯರ್ ಅಜಯ್ ಸಿಂಗ್ ಠಾಕೂರ್ ಕರೆ

**ಬೆಂಗಳೂರು, ಮೇ 30:** ಯಾವುದೇ ಸಂದರ್ಭಗಳಲ್ಲಿ ಎದೆಗುಂದದೆ ದೇಶವನ್ನು ರಕ್ಷಿಸಲು ಮುಂದಾಗಬೇಕು ಎಂದು ಇಂಜಿನಿಯರ್‌ಗಳ ತರಬೇತಿ ಕೇಂದ್ರದ ಮುಖ್ಯಸ್ಥ ಬ್ರೀಗೇಡಿಯರ್ ಅಜಯ್ ಸಿಂಗ್ ಠಾಕೂರ್ ಹೇಳಿದ್ದಾರೆ.

ನಗರದ ಪರೇಡ್ ಮೈದಾನ ದಲ್ಲಿಂದು ಅಗ್ನಿವೀರ ತರಬೇತಿ ಪೂರ್ಣಗೊಳಿಸಿದ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನದಲ್ಲಿ ತರ ಬೇತಿ ಅವಧಿಯಲ್ಲಿ ಉತ್ತಮ ಪ್ರದರ್ಶನ ನೀಡಿದ ಸೈನಿಕರಿಗೆ ಪದಕಗಳನ್ನು ವಿತರಣೆ ಮಾಡಿದರು.



ಬ್ರೀಗೇಡಿಯರ್ ಅಜಯ್ ಸಿಂಗ್ ಠಾಕೂರ್, ಅಗ್ನಿವೀರ ಸೈನಿಕರ ತರ ಬೇತಿಯನ್ನು ಪೂರ್ಣಗೊಳಿ ಸಿದ ಪ್ರಶಿಕ್ಷಣಾರ್ಥಿಗಳಿಗೆ ದಕ್ಷತೆ, ಪ್ರಾಮಾಣಿಕತೆ ಯಿಂದ ದೇಶ ಸೇವೆ ಮಾಡುವ ಅವಕಾಶ ದೊರೆತಿದೆ. ಯಾವುದೇ ಸಂದರ್ಭಗಳಲ್ಲಿ ಎದೆಗುಂದದೆ ದೇಶವನ್ನು ರಕ್ಷಿಸಲು ಮುಂದಾಗಬೇಕು. ದೇಶ ರಕ್ಷಣೆಯಲ್ಲಿ ನಿಮ್ಮ ಪಾತ್ರ ಮುಖ್ಯವಾಗಿದೆ. ಮುಂದಿನ ನಿಮ್ಮ ವೃತ್ತಿಜೀವನ ಶುಭಕರವಾಗಲಿ ಎಂದರು.

### ಸಿಲಿಕಾನ್ ಸಿಟಿಯ ಬಣ್ಣ ತೆರೆದಿಟ್ಟ ಶುಕ್ರವಾರದ ಮಳೆ

## ಕಾಂಪೌಂಡ್ ಕುಸಿದು ಆಟೋಚಾಲಕ ಸಾವು, ರಸ್ತೆಗಳು ಜಲಾವೃತ, ಅಂಡರ್‌ಪಾಸ್‌ಗಳಲ್ಲಿ ನೀರು ನಿಂತು ಸಂಚಾರ ಅಸ್ತವ್ಯಸ್ತ

**ಬೆಂಗಳೂರು, ಮೇ 30:** ಶುಕ್ರವಾರ ಸುರಿದ ಭಾರಿ ಮಳೆ ಸಿಲಿಕಾನ್ ಸಿಟಿಯ ಬಣ್ಣ ಬಯಲು ಮಾಡಿದೆ. ಮತ್ತೊಮ್ಮೆ ನಗರದ ಮೂಲಸೌಕರ್ಯಗಳ ದುರ್ಬಲತೆಯನ್ನು ಮಳೆ ಬಹಿರಂಗಗೊಳಿಸಿದೆ.ವಿಜಯನಗರದಲ್ಲಿ ಕಾಂಪೌಂಡ್ ಕುಸಿದು ಆಟೋಚಾಲಕ ಮೃತಪಟ್ಟರೆ, ನಗರದ ವಿವಿಧ ಭಾಗಗಳಲ್ಲಿ ಮರಗಳು ಉರುಳಿ ಮೂವರು ಗಾಯಗೊಂಡಿದ್ದಾರೆ. ರಸ್ತೆಗಳು ಜಲಾವೃತಗೊಂಡಿದ್ದರೆ, ಅಂಡರ್‌ಪಾಸ್‌ಗಳಲ್ಲಿ ನೀರು ನಿಂತು ಸಂಚಾರ ಅಸ್ತವ್ಯಸ್ತಗೊಂಡಿತ್ತು.



ವಿಜಯನಗರ ಕ್ಲಬ್‌ನ ಕಾಂಪೌಂಡ್ ಕುಸಿದು ಆಟೋ ಮೇಲೆ ಬಿದ್ದ ಪರಿಣಾಮ 52 ವರ್ಷದ ಆಟೋ ಚಾಲಕ ಶಿವಬೋರಯ್ಯ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮದ್ದೂರು ಮೂಲದ ಶಿವಬೋರಯ್ಯ ಅತ್ತಿಗುಪ್ಪೆಯಲ್ಲಿ ವಾಸವಿದ್ದು, ಹಲವು ವರ್ಷಗಳಿಂದ ನಗರದಲ್ಲಿ ಬಾಡಿಗೆ ಆಟೋ ಚಾಲಕರಾಗಿ ಕೆಲಸ ಮಾಡುತ್ತಿದ್ದರು. ನಿನ್ನೆ ಸಂಜೆ ಮಳೆ ಆರಂಭವಾದ ಹಿನ್ನೆಲೆಯಲ್ಲಿ ವಿಜಯನಗರ ಕ್ಲಬ್ ಸಮೀಪದ ರಸ್ತೆಯಲ್ಲಿ ಆಟೋ ನಿಲ್ಲಿಸಿ ಅದರೊಳಗೆ ಕುಳಿತಿದ್ದ ವೇಳೆ, ಭಾರೀ ಮಳೆಯಿಂದ ಕ್ಲಬ್‌ನ ಕಾಂಪೌಂಡ್ ಕುಸಿದು ಆಟೋ ಮೇಲೆ ಬಿದ್ದಿದೆ. ಗೋಡೆ ಬೀಳುವ ರಭಸಕ್ಕೆ ಆಟೋ ಸಂಪೂರ್ಣ ನಜ್ಜುಗುಜ್ಜಾಗಿದ್ದು, ಅದರೊಳಗಿದ್ದ ಶಿವಬೋರಯ್ಯ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನೆಯಲ್ಲಿ ಪಕ್ಕದಲ್ಲೇ ನಿಲ್ಲಿಸಿದ್ದ ಮತ್ತೊಂದು ಆಟೋ ಕೂಡ ಹಾನಿಗೊಳಗಾಗಿದ್ದು, ಅದರಲ್ಲಿ ಯಾರೂ ಇರದ ಕಾರಣ ಮತ್ತಷ್ಟು ಅನಾಹುತ ತಪ್ಪಿದೆ. ಗೋಡೆಯೊಂದಿಗೆ ಎರಡು ವಿದ್ಯುತ್ ಕಂಬಗಳೂ ಆಟೋ ಮೇಲೆ ಬಿದ್ದಿರುವುದು ದುರಂತದ ತೀವ್ರತೆಯನ್ನು ಹೆಚ್ಚಿಸಿದೆ.

## ಅಂಚೆ ಮೂಲಕ ಮಾವು, ಹಣ್ಣು, ತರಕಾರಿ ಮಾರಾಟ ಅಂಚೆ ಇಲಾಖೆ, ಹಾಪ್‌ಕಾಮ್ಸ್‌ನಿಂದ ರೈತರ ಅಂಚೆಗೆ ಚಾಲನೆ

**ಬೆಂಗಳೂರು, ಮೇ. 30:** ಹಾಪ್‌ಕಾಮ್ಸ್ ಬೆಂಗಳೂರು ಮತ್ತು ಭಾರತೀಯ ಅಂಚೆ ಇಲಾಖೆ ಸಹಯೋಗದಲ್ಲಿ 'ರೈತರ ಅಂಚೆ' ಆರಂಭಿಸಿದ್ದು, ಈ ಮೂಲಕ ಮಾವು ಹಾಗೂ ಇತರೆ ಹಣ್ಣು , ತರಕಾರಿಗಳನ್ನು ಆನ್ ಲೈನ್ ಮೂಲಕ ಮಾರಾಟ ಮಾಡುವ ವ್ಯವಸ್ಥೆಗೆ ನಗರದಲ್ಲಿಂದು ಚಾಲನೆ ನೀಡಲಾಯಿತು.

ಇದೇ ಸಂದರ್ಭದಲ್ಲಿ ಭಾರತೀಯ ಅಂಚೆ ಮತ್ತು ಹಾಪ್ ಕಾಮ್ಸ್ ನಡುವೆ ಆನ್ ಲೈನ್ ಮಾರಾಟ ವ್ಯವಸ್ಥೆಯ ಒಡಂಬಡಿಕೆ ಪತ್ರವನ್ನು ವಿನಿಮಯ ಮಾಡಿಕೊಳ್ಳಲಾಯಿತು. ಬೆಂಗಳೂರು ಮುಖ್ಯಾಲಯ ಕ್ಷೇತ್ರದ ಅಂಚೆ ಸೇವೆಗಳ ನಿರ್ದೇಶಕ ವಿ.ತಾರಾ, ಹಾಪ್ ಕಾಮ್ಸ್ ಅಧ್ಯಕ್ಷ ಎನ್.ಎಸ್.ಚಂದ್ರೇಗೌಡ, ಉಪಾಧ್ಯಕ್ಷ ನಾರಾಯಣ ಗೌಡ, ಹಾಪ್ ಕಾಮ್ಸ್ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಮಿರ್ಜಾ ಉಮೇಶ್ ಶಂಕರ್‌ಅಂಚೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.




ಬಳಿಕ ವಿ. ತಾರಾ ಮಾತನಾಡಿ, ಅಂಚೆ ಇಲಾಖೆ 2019ರಿಂದ ಮಾವಿನ ಹಣ್ಣುಗಳನ್ನು ಆನ್ ಲೈನ್ ಮೂಲಕ ಮಾರಾಟ ಮಾಡುವ ವ್ಯವಸ್ಥೆ ಜಾರಿಗೆ ತರಲಾಗಿತ್ತು. ಇದೀಗ ಹಾಪ್ ಕಾಮ್ಸ್ ಸಹಯೋಗದಲ್ಲಿ ಮಾವಿನ ಹಣ್ಣಿನ ಜೊತೆಗೆ ತರಕಾರಿ ಮತ್ತು ಇತರ ಹಣ್ಣುಗಳನ್ನು ಮಾರಾಟ ಮಾಡಲು ರೈತರ ಅಂಚೆ ಆರಂಭಿಸಲಾಗಿದೆ. ರೈತರಿಂದ ನೇರವಾಗಿ ಗ್ರಾಹಕರಿಗೆ ತಲುಪಿಸುವ ಉದ್ದೇಶ ಇದ್ದಾಗಿದ್ದು, ನಿನ್ನೆ ಪ್ರಯೋಗಿಕವಾಗಿ ಬುಕ್ಕಿಂಗ್ ಆರಂಭಿಸಿದ್ದು, ಒಂದೇ ದಿನ 400ಕ್ಕೂ ಹೆಚ್ಚು ಮಂದಿಗೆ ತಲುಪಿಸಲಾಗಿದೆ. ಇಂದು ಈ ಸಂಖ್ಯೆ ಎರಡೂವರೆ ಸಾವಿರ ದಾಟಿದೆ ಎಂದು ಮಾಹಿತಿ ನೀಡಿದರು. ಎಸ್. ಎನ್. ಚಂದ್ರೇಗೌಡ ಮಾತನಾಡಿ, ಮಧ್ಯವರ್ತಿಗಳ ಸಹಭಾಗಿತ್ವವಿಲ್ಲದೆ, ನೇರವಾಗಿ ಗ್ರಾಹಕರಿಗೆ ಹಾಪ್‌ಕಾಮ್ಸ್‌ನಲ್ಲಿ ಸಿಗುವ ಹಣ್ಣು, ತರಕಾರಿಗಳನ್ನು ಭಾರತೀಯ ಅಂಚೆ ಸಹಯೋಗದಲ್ಲಿ ಜನರಿಗೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಹಾಪ್ ಕಾಮ್ಸ್ ಗೆ 67 ವರ್ಷಗಳ ಸುದೀರ್ಘ ಇತಿಹಾಸವಿದ್ದು, 1,200ಕ್ಕೂ ಹೆಚ್ಚು ಸಿಬ್ಬಂದಿ ಕಾರ್ಯನಿರ್ವಹಿಸು ತ್ತಿದ್ದಾರೆ. ಬೆಂಗಳೂರು ಸೇರಿದಂತೆ ಹಲವೆಡೆ ಕಾರ್ಯನಿರ್ವಹಿಸುತ್ತಿದ. ಮಿರ್ಜಾ ಉಮೇಶ್ ಶಂಕರ್ ಮಾತನಾಡಿ, ಹಾಪ್ ಕಾಮ್ಸ್ ನಲ್ಲಿ ಮೊದಲು ದ್ರಾಕ್ಷಿ ಮಾರಾಟ ಮಾಡಲಾಗುತ್ತಿತ್ತು. ಆ ನಂತರ ಮಾವು ಸೇರಿದಂತೆ ವಿವಿಧ ಹಣ್ಣುಗಳು ಹಾಗು ತರಕಾರಿ ಗಳನ್ನು ಮಾರಾಟ ಮಾಡಲಾಗುತ್ತಿದೆ. ಇದೀಗ ಭಾರತೀಯ ಅಂಚೆ ಮೂಲಕ ರೈತರ ಅಂಚೆ ಆರಂಭಿಸಿರುವುದರಿಂದ ರೈತರಿಗೆ ಮತ್ತು ಗ್ರಾಹಕರಿಗೆ ಮತ್ತಷ್ಟು ಅನುಕೂಲವಾಗಲಿದೆ ಎಂದು ತಿಳಿಸಿದರು.

## ಕರ್ನಾಟಕವನ್ನು ಮುನ್ನಡೆಸಲು ಡಿಕೆಶಿಗೆ ಕಾಲ ಪ್ರಶಸ್ತವಾಗಿದೆ

## ನಾಡು ಪ್ರಗತಿಯ ಪಥದಲ್ಲಿ ಸಾಗಲಿ ಎಂದು ಶಾಸಕ ಅರವಿಂದ ಬೆಲ್ಲದ ಆಶಯ



**ಧಾರವಾಡ, ಮೇ 30:** ಪ್ರಸ್ತುತ ಸರ್ಕಾರದ ಆಡಳಿತದಲ್ಲಿ ಸಿಎಂ ಬದಲಾವಣೆ ಕುರಿತು ಮಾತನಾಡಿದ ಬಿಜೆಪಿ ನಾಯಕ ಅರವಿಂದ ಬೆಲ್ಲದ್ ಕಾಂಗ್ರೆಸ್ ಆಡಳಿತ ವೈಖರಿಯಿಂದಾಗಿ ರಾಜ್ಯದ ಹಣಕಾಸಿನ ಪರಿಸ್ಥಿತಿ ತೀವ್ರವಾಗಿ ಕಂಗೆಟ್ಟಿದೆ ಎಂದು ತೀವ್ರ ಅಸಮಾಧಾನ ಹೊರಹಾಕಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಯಾವುದೇ ಪ್ರಗತಿಪರ ಕೆಲಸಗಳು ನಡೆಯದೆ, ಕೇವಲ ಒಂದು ನಿರ್ದಿಷ್ಟ ಸಮುದಾಯದ ಪ್ರಸನ್ನತೆಗಾಗಿ ಆಡಳಿತ ನಡೆಸಲಾಗುತ್ತಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದ ಜನರ ನಿರೀಕ್ಷೆಗಳು ಹುಸಿಯಾಗಿದ್ದು, ಭ್ರಷ್ಟಾಚಾರ ಹಿಂದೆಂದೂ ಕಾಣದ ಮಟ್ಟಿಗೆ ವ್ಯಾಪಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಂತಹ ಕಠಿಣ ಸನ್ನಿವೇಶದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ರಾಜ್ಯವನ್ನು ಮುನ್ನಡೆಸಲು ಪ್ರಶಸ್ತವಾದ ಕಾಲಾವಕಾಶ ದೊರೆತಿದೆ.

ಚುನಾವಣೆಯಲ್ಲಿ ಬಹುಮತ ನೀಡಿದ ಜನಸಾಮಾನ್ಯರ ಹಿತದೃಷ್ಟಿಯಿಂದ, ಲಭ್ಯವಿರುವ ಈ ಅವಕಾಶವನ್ನು ಅವರು ಸಮರ್ಥವಾಗಿ ಬಳಸಿಕೊಳ್ಳಬೇಕಿದೆ ಎಂದು ಹೇಳಿದ್ದಾರೆ. ಯಾವುದೇ ಪಕ್ಷಪಾತವಿಲ್ಲದೆ ಸಮಾಜದ ಪ್ರತಿಯೊಂದು ವರ್ಗವನ್ನೂ ಸಮಾನವಾಗಿ ಗೌರವಿಸುವ ಮತ್ತು ಕುಸಿದಿರುವ ಆರ್ಥಿಕತೆಯನ್ನು ತಮ್ಮ ಚತುರತೆಯಿಂದ ಮರಳಿ ಹಳಿಗೆ ತರುವ ಜವಾಬ್ದಾರಿ ಅವರ ಮೇಲಿದೆ. ಮುಂದಿನ ದಿನಗಳಲ್ಲಾದರೂ ನಾಡು ಪ್ರಗತಿಯ ಪಥದಲ್ಲಿ ಸಾಗಲಿ ಎಂದು ಅರವಿಂದ ಬೆಲ್ಲದ್ ಹೇಳಿದ್ದಾರೆ.

# ಸಿದ್ದರಾಮಯ್ಯ ರಾಜಿನಾಮೆಗೆ ಕೆರಳಿದ ಕುರುಬ ಸಮಾಜ

## ಕಾಂಗ್ರೆಸ್ ವರಿಷ್ಠರ ಪ್ರತಿಕೃತಿ ದಹಿಸಿ ಆಕ್ರೋಶ ಹೊರಹಾಕಿ ಪ್ರತಿಭಟನೆ

**ಕಲಬುರಗಿ, ಮೇ. 30:** ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ಧರಾಮಯ್ಯ ಅವರು ರಾಜೀನಾಮೆ ನೀಡಿದ್ದನ್ನು ಖಂಡಿಸಿ ಕುರುಬ ಸಮಾಜದವರು ನಗರದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ಮಾಡಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ವರಿಷ್ಠರ ಪ್ರತಿಕೃತಿ ಹರಿದುಹಾಕಿ, ದಹನ ಮಾಡಿ ವರಿಷ್ಠರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಕಾರರು ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ್ ಖರ್ಗೆ, ಪಕ್ಷದ ವರಿಷ್ಠರಾದ ಶ್ರೀಮತಿ ಸೋನಿಯಾಗಾಂಧಿ, ಪ್ರಿಯಾಂಕಾ ವಾಡ್ರಾ, ರಾಹುಲ್‌ಗಾಂಧಿ ಅವರ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಹಾಕಿದರು. ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಕೃತಿಗಳಿಗೆ ದಹಿಸಿ ಪ್ರತಿಭಟಿಸಲು ಯತ್ನಿಸಿದಾಗ ಪೋಲಿಸರು ಆಕ್ಷೇಪ ವ್ಯಕ್ತಪಡಿಸಿದರು. ಇದರಿಂದ ಕುಪಿತರಾದ ಪ್ರತಿಭಟನೆಕಾರರು ಕಾಂಗ್ರೆಸ್ ಪಕ್ಷದ ವಯಿರಿಷ್ಠರ ಪ್ರತಿಕೃತಿಗಳನ್ನು ಹರಿದು ಹಾಕಿ ಆಕ್ರೋಶ ವ್ಯಕ್ತಪಡಿಸಿದರು. ನಮಗೆ ಬೆಂಕಿ ಹತ್ತಿದೆ. ಪ್ರತಿಕೃತಿಗಳಿಗೆ ಬೆಂಕಿ ಹಚ್ಚಿದರೆ ಏನಾಗುತ್ತದೆ? ಎಂದು ಪ್ರತಿಭಟನೆಕಾರರು ಖಾರವಾಗಿ ಪೋಲಿಸರಿಗೆ ಪ್ರಶ್ನಿಸಿದರು.




ಕಲಬುರಗಿಯಲ್ಲಿ ಕಮುನಿಸ್ಟ್ ಪಕ್ಷದ ಕಾರ್ಯಕರ್ತರು ಕೇರಳ ಮಾಜಿ ಸಿಎಂ ಪಿಣರಾಯಿ ವಿಜಯನ್ ಅವರ ಮನೆಯ ಮೇಲೆ ಇಡಿ ದಾಳಿ ವಿರೋಧಿಸಿಮತ್ತು ಮುಖಂಡರ ಬಂಧನ ಖಂಡಿಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಕಾಂಗ್ರೆಸ್ ಪಕ್ಷದ ವರಿಷ್ಠರಾದ ರಾಹುಲ್‌ಗಾಂಧಿ, ಡಾ. ಮಲ್ಲಿಕಾರ್ಜುನ್ ಖರ್ಗೆ ಅವರಿಗೆ ಮನವಿ ಪತ್ರ ಸಲ್ಲಿಸಿ, ಸಿದ್ಧರಾಮಯ್ಯ ಅವರು ಪೂರ್ಣಾವಧಿಯವರೆಗೆ 2028ರವರೆಗೆ ಮುಖ್ಯಮಂತ್ರಿಗಳಾಗಿ ಮುಂದುವರೆಯಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಿದ್ಧರಾಮಯ್ಯನವರು ಅಹಿಂದ ನಾಯಕನಾಗಿ ಹಿಂದುಳಿದ ವರ್ಗಗಳು, ದಲಿತರು. ಹಾಗೂ ಅಲ್ಪ ಸಂಖ್ಯಾತರ ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸಿದ ನಿಷ್ಠಾವಂತ ರಾಜಕಾರಣಿ ಆಗಿದ್ದಾರೆ. ಎಂದು ಪ್ರಂಶುಸಲಾಗಿದೆ. ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸು ಅವರ ನಂತರ ಹಿಂದುಳಿದ ವರ್ಗಗಳ ಪರವಾಗಿ ಅನೇಕ ಜನಪರ ಯೋಜನೆಗಳನ್ನು ಜಾಯಿರಿಗೆ ತಂದ ನಾಯಕರೆಂದರೆ ಅದು ಸಿದ್ಧರಾಮಯ್ಯ. 2006ರಲ್ಲಿ ಜೆಡಿಯಿಎಸ್ ಪಕ್ಷ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ಬಳಿಕ ಸಿದ್ಧರಾಮಯ್ಯ ಅವರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠವಾಗಿ ಕಟ್ಟುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. 2008ರಿಂದ 2013ರವರೆಗೆ ವಿರೋಧ ಪಕ್ಷದ ನಾಯಕರಾಗಿ ಸರ್ಕಾರದ ಹಗರಣಗಳನ್ನು ಬಹಿರಂಗಪಡಿಸಿ ಜನರ ಗಮನ ಸೆಳೆದರು. 2013 ರಲ್ಲಿ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ ಸಿದ್ಧರಾಮಯ್ಯ ಅವರು ಮುಖ್ಯಮಂತ್ರಿಯಾದ ಬಳಿಕ ಅನ್ನಭಾಗ್ಯ. ಕ್ಷೀರಭಾಗ್ಯ, ಕೃಷಿಭಾಗ್ಯ ವಿದ್ಯಾಶ್ರೀ, ಶಾದಿಭಾಗ್ಯ ಸೇರಿದಂತೆ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದರು. 2023ರ ಚುನಾವಣೆಯಲ್ಲಿ ನೀಡಿದ 5 ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜನರಿಗೆ ತಲುಪಿಸುವ ಕೆಲಸ ಮಾಡಿದ್ದಾರೆ.

ಯಾವುದೇ ಕಾರಣವಿಲ್ಲದೆ ಹಿಂದುಳಿದ ನಾಯಕರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗೆ ಇಳಿಸುವುದು ದುಃಖಕರ ಸಂಗತಿಯಾಗಿದೆ. ಆದ್ದರಿಂದ 2028ರವರೆಗೆ ಸಿದ್ಧರಾಮಯ್ಯರವರೇ ರಾಜ್ಯದ ಮುಖ್ಯಮಂತ್ರಿಯಾಗಿ ಮುಂದುವರೆಯಲು ಅವಕಾಶ ನೀಡಬೇಕು. ಇಲ್ಲದೇ ಹೋದಲ್ಲಿ ಪ್ರತಿಯಿಕೂಲ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

## ಮುಂಗಾರು ಬಿತ್ತನೆ ಬೀಜ ವಿತರಣೆ: ರೈತರು ಮಧ್ಯವರ್ತಿಗಳಿಂದ ದೂರವಿರಲು ಶಾಸಕ ಡಾ.ಬೆಲ್ದಾಳೆ ಕರೆ



**ಬೀದರ್, ಮೇ. 30:** ಈ ಬಾರಿ ಉತ್ತಮ ಮಳೆಯಾಗುವ ನಿರೀಕ್ಷೆ ಇದ್ದು, ರೈತರು ಸಮಯಕ್ಕೆ ಸರಿಯಾಗಿ ಬಿತ್ತನೆ ಕಾರ್ಯ ಆರಂಭಿಸಬೇಕು. ಸರ್ಕಾರದ ವತಿಯಿಂದ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರವನ್ನು ರೈತಯಿರಿಗೆ ತಲುಪಿಸುವ ಕೆಲಸ ನಡೆಯುತ್ತಿದೆ. ರೈತರು ಯಾವುದೇ ಮಧ್ಯವರ್ತಿಗಳ ಮಾತಿಗೆ ಒಳಗಾಗದೆ ಕೃಷಿ ಇಲಾಖೆಯ ಸಲಹೆ ಪಡೆದು ಬೆಳೆ ಬೆಳೆಸಬೇಕು ಎಂದು ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಕ್ಷೇತ್ರದ ಮನ್ನಳ್ಳಿ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ಆಯೋಜಿಸಲಾದ ರೈತರಿಗೆ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸೋಯಾಬೀನ್, ತೊಗರಿ, ಹೆಸರು ಹಾಗೂ ಉದ್ದು ಬೆಳೆಗಳು ರೈತರಿಗೆ ಉತ್ತಮ ಆದಾಯ ತರುವ ಬೆಳೆಗಳಾಗಿದ್ದು, ವೈಜ್ಞಾನಿಕ ಕೃಷಿ ಪದ್ಧತಿಯನ್ನು ಅನುಸಯಿರಿಸಿದರೆ ಇನ್ನಷ್ಟು ಉತ್ತಮ ಉತ್ಪಾದನೆ ಪಡೆಯಬಹುದು. ಕೃಷಿಯಲ್ಲಿ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಕಡಿಮೆ ವೆಚ್ಚದಲ್ಲಿ ಹೆಚ್ಚು ಲಾಭ ಪಡೆಯುವತ್ತ ಗಮನ ಹರಿಸಬೇಕು ಎಂದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರ ರೈತರ ಪರವಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಪ್ರತಿಯೊಬ್ಬ ರೈತನಿಗೂ ಅದರ ಸೌಲಭ್ಯ ತಲುಪಿಸುವ ಕೆಲಸ ನಿರಂತರವಾಗಿ ನಡೆಯಲಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದರು.

ದಕ್ಷಿಣ ಕ್ಷೇತ್ರ ಕೃಷಿ ಪ್ರಧಾನ ಕ್ಷೇತ್ರವಾಗಿದೆ. ಇಲ್ಲಿನ ರೈತರು ಶ್ರಮಜೀವಿಗಳು. ನಿಮ್ಮ ಪರಿಶ್ರಮದಿಂದಲೇ ಈ ಭಾಗದ ಅಭಿವೃದ್ಧಿ ಸಾಧ್ಯವಾಗಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ನನ್ನ ಕರ್ತವ್ಯವಾಗಿದೆ. ನೀರಾವರಿ, ರಸ್ತೆ, ವಿದ್ಯುತ್, ಕೃಷಿ ಸಂಪರ್ಕ ರಸ್ತೆ ಸೇಯಿರಿದಂತೆ ರೈತರ ಅನುಕೂಲಕ್ಕೆ ಬೇಕಾದ ಎಲ್ಲಾ ಅಭಿವೃದ್ಧಿ ಕಾಮಗಾರಿಗಳಿಗೆ ನಾನು ಸದಾ ಆದ್ಯತೆ ನೀಡುತ್ತೇನೆ ಎಂದು ಅವರು ಭರವಸೆ ನೀಡಿದರು.

ಕಾರ್ಯಕ್ರಮದ ಮೂಲಕ ರೈತರಿಗೆ ಸಮಯಕ್ಕೆ ಸರಿಯಾಗಿ ಬೀಜ ಹಾಗೂ ರಸಗೊಬ್ಬರ ವಿತರಣೆ ಆಗುತ್ತಿರುವುದು ಸಂತಸದ ವಿಚಾರ. ರೈತರು ಗುಣಮಟ್ಟದ ಬೀಜ ಬಳಸಿ ಉತ್ತಮ ಬೆಳೆ ಬೆಳೆಯಬೇಕು. ಕೃಷಿಯಲ್ಲಿ ನಷ್ಟವಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು ಎಂದು ರೈತರಿಗೆ ಅವರು ಶುಭ ಹಾರೈಸಿದರು.

## ಶಾಲೆ ಆರಂಭದಲ್ಲೇ ಪಠ್ಯಪುಸ್ತಕ ವಿತರಣೆಗೆ ಸಿದ್ಧತೆ



**ರಾಯಚೂರು, ಮೇ. 30:** 2026–27ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜೂ.1ರಂದು ಚಾಲನೆ ದೊರೆಯಲಿದ್ದು, ಶಾಲಾ ಶಿಕ್ಷಣ ಇಲಾಖೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಪೂರ್ಣಗೊಳಿಸುತ್ತಿದೆ. ಬೇಸಿಗೆ ರಜೆ ಬಳಿಕ ಶಾಲೆಯತ್ತ ಮರಳುವ ಮಕ್ಕಳನ್ನು ಸ್ವಾಗತಿಸಲು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳು ಸಜ್ಜಾಗಿವೆ.

ಈ ಬಾರಿ ಶಾಲೆ ಆರಂಭದ ಮೊದಲ ದಿನವೇ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹಾಗೂ ಸಮವಸ್ತ್ರ ವಿತರಿಸಲು ಶಾಲಾ ಶಿಕ್ಷಣ ಇಲಾಖೆ ವಿಶೇಷ ಯೋಜನೆ ರೂಪಿಸಿದೆ. ಮಕ್ಕಳಿಗೆ ತೊಂದರೆ ಆಗದಂತೆ ಅಗತ್ಯ ಶೈಕ್ಷಣಿಕ ಸಾಮಗ್ರಿಗಳನ್ನು ಮುಂಚಿತವಾಗಿಯೇ ಶಾಲೆಗಳಿಗೆ ತಲುಪಿಸುವ ಕಾರ್ಯ ವೇಗವಾಗಿ ನಡೆಯುತ್ತಿದೆ. ಜಿಲ್ಲೆಯ 1ರಿಂದ 10ನೇ ತರಗತಿವರೆಗಿನ ಸಾವಿರಾರು ವಿದ್ಯಾರ್ಥಿಗಳು ಹೊಸ ಶೈಕ್ಷಣಿಕ ವರ್ಷಕ್ಕೆ ಸೇರ್ಪಡೆಯಾಗಲಿದ್ದು, ಶಾಲಾ ಆವರಣಗಳಲ್ಲಿ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ, ತರಗತಿ ಕೊಠಡಿಗಳ ದುರಸ್ತಿ ಸೇರಿದಂತೆ ಮೂಲಸೌಕರ್ಯಗಳ ಮೇಲೂ ಅಧಿಕಾರಿಗಳು ಗಮನ ಹರಿಸಿದ್ದಾರೆ.

ವಿದ್ಯಾರ್ಥಿಗಳನ್ನು ಆಕರ್ಷಿಸುವ ಉದ್ದೇಶದಿಂದ ಕೆಲವು ಶಾಲೆಗಳಲ್ಲಿ ಸ್ವಾಗತ ಸಮಾರಂಭ, ಹೂವಿನ ಮಳೆ, ಕಾರ್ಯಕ್ರಮಗಳನ್ನು ಆಯೋಜಿಸಲು ಸಿದ್ಧತೆ ನಡೆಯುತ್ತಿದೆ. ಮೊದಲ ದಿನವೇ ಮಕ್ಕಳಲ್ಲಿ ಉತ್ಸಾಹ ಹೆಚ್ಚಿಸುವ ಮೂಲಕ ದಾಖಲಾತಿ ಹೆಚ್ಚಿಸಲು ಇಲಾಖೆ ಮುಂದಾಗಿದೆ. ಇಲಾಖೆ ಅಧಿಕಾರಿಗಳ ಮಾಹಿತಿ ಪ್ರಕಾರ ಅಂದು ಪಠ್ಯಪುಸ್ತಕಗಳ ವಿತರಣೆ ನಡೆಯಲಿದೆ. ಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರು ಶಾಲಾ ಆರಂಭವನ್ನು ಹಬ್ಬದ ವಾತಾವರಣದ ಮಾದರಿಯಲ್ಲಿ ನಡೆಸಲು ತಯಾರಿ ನಡೆಸಿದ್ದಾರೆ.

ಹೊಸ ಶೈಕ್ಷಣಿಕ ವರ್ಷ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಪೋಷಕರಲ್ಲೂ ಸಂತಸ ಮನೆ ಮಾಡಿದ್ದು, ಮಕ್ಕಳ ಶಿಕ್ಷಣದತ್ತ ಮತ್ತಷ್ಟು ಗಮನ ಹರಿಸಲು ಶಾಲೆಗಳು ಮುಂದಾಗಿವೆ.

## ಪಿಣರಾಯಿ ವಿಜಯನ್ ಮೇಲೆ ಇ.ಡಿ ದಾಳಿ ಖಂಡಿಸಿ ಎಡಪಕ್ಷಗಳ ಪ್ರತಿಭಟನೆ

**ಕಲಬುರಗಿ, ಮೇ. 30:** ಕೇರಳದ ಮಾಜಿ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನಿವಾಸದ ಮೇಲಿನ ಇಡಿ ದಾಳಿಯನ್ನು ವಿರೋಧಿಸಿ ಮತ್ತು ಪಕ್ಷದ ನಾಯಕರ ಬಂಧನ ಖಂಡಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಜಿಲ್ಲಾ ಘಟಕದ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಪ್ರದರ್ಶನ ಮಾಡಿದರು.




ಪಕ್ಷದ ಜಿಲ್ಲಾ ಕಾರ್ಯದರ್ಶಿ ಕೆ. ನೀಲಾ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಭೀಮಶೆಟ್ಟಿ ಯಂಪಳ್ಳಿ, ಸುಧಾಮ್ ಧನ್ನಿ, ಶ್ರೀಮಂತ ಬಿರಾದಾರ್, ಶಾಂತಾ ಘಂಟೆ, ಚಂದಮ್ಮ ಗೋಳಾ, ಚಂದಮ್ಮ, ನಾಗಪ್ಪ ರಾಯಚೂರಕರ್, ಪದ್ಮಿನಿ ಕಿರಣಗಿ ಮುಂತಾದವರು ಪಾಲ್ಗೊಂಡಿದ್ದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಪತ್ರ ಸಲ್ಲಿಸಿ, ಕೇರಳದ ಮಾಜಿ ಮುಖ್ಯಮಂತ್ರಿ ಕಾಮ್ರೇಡ್ ಪಿಣರಾಯಿ ವಿಜಯನ್ ಅವರ ನಿವಾಸದ ಮೇಲಿನ ದಾಳಿಯು ಸೇಡಿನಿಂದ ಕೂಡಿದೆ. ರಾಜಯಿಕೀಯ ಪ್ರತಿಕಾರಕ್ಕಾಗಿ ಇಡಿಯಂಥ ಅಸ್ತ್ರಗಳನ್ನು ಬಿಜೆಪಿಯು ಬಳಸುತ್ತಿರುವುದು ಖಂಡನಾರ್ಹ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಖಂಡನಾ ಭಾಗವಾಗಿ ಪ್ರತಿಭಟನೆ ನಡೆಸುತ್ತಿದ್ದ ಹಿರಿಯ ನಾಯಕರು ಸೇಯಿರಿದಂತೆ ಪ್ರತಿಭಟನಾಕಾರರನ್ನು ಪೊಲೀಸರು ಬಲತ್ಕಾರವಾಗಿ ಬಂಧಿಸಿದ್ದಾರೆ. ಇದನ್ನು ಪಕ್ಷವು ತೀವ್ರವಾಗಿ ಖಂಡಿತ್ತದೆ. ಕೇರಳದ ಮಾಜಿ ಮುಖ್ಯಮಂತ್ರಿ ಮತ್ತು ಸಿಪಿಐ(ಎಂ) ಪೊಲಿಟ್ ಬ್ಯೂರೋ ಸದಸ್ಯ ಪಿಣರಾಯಿ ವಿಜಯನ್ ಅವರ ನಿವಾಸದಲ್ಲಿ ಜಾರಿ ನಿರ್ದೇಶನಾಲಯ ನಡೆಸಿದ ದಾಳಿ ಖಂಡನಾರ್ಹ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ಸಮಯದಲ್ಲಿ ದಿಲ್ಲಿ ಪೊಲೀಸರು ಪ್ರತಿಭಟನಾಕಾರರನ್ನು ಬಲತ್ಕಾರವಾಗಿ ಬಂಧಿಸಿದರು. ಬಂಧನಕ್ಕೊಳಗಾದವರಲ್ಲಿ ಹಿರಿಯ ನಾಯಕಿ ಬೃಂದಾ ಕಾರಟ್, ಪಾಲಿಟ್ ಬ್ಯೂರೋ ಸದಸ್ಯರಾದ ಅಶೋಕ್ ಧವಳೆ, ಮರಿಯಮ್ ಧವಳೆ ಮುಂತಾದವರನ್ನು ಬಂಧಿಸಲಾಗಿದರ. ಇದು ಬಿಜೆಪಿ ಸರಕಾರವು ಹೋರಾಟಗಳನ್ನು ಹತ್ತಿಕ್ಕಲು ನಡೆಸುತ್ತಿರುವ ಷಡ್ಯಂತ್ರವಾಗಿದೆ ಎಂದು ಅವರು ಕಿಡಿಕಾರಿದರು.

ಕೇಂದ್ರ ಸರ್ಕಾರದ ನಿರ್ದೇಶನದ ಮೇರೆಗೆ ಜಾರಿ ನಿರ್ದೇಶನಾಲಯ ನಡೆಸಿದ ಕ್ರಮವನ್ನು ಸಿಪಿಐಎಂ ತೀವ್ರವಾಗಿ ಖಂಡಿಸುತ್ತದೆ. ಪಿಣರಾಯಿ ವಿಜಯನ್ ಅವರ ನಿವಾಸದ ಮೇಲಿನ ದಾಳಿಯು ರಾಜಕೀಯ ಪ್ರೇರಿತ ಪ್ರತೀಕಾರದ ಕೃತ್ಯವಾಗಿದೆ. ಪಿಣರಾಯಿ ವಿಜಯನ್ ಅವರಿಗೂ ಎಕಲಾಜಿಕ್ ಪ್ರಕರಣಕ್ಕೂ ಯಾವುದೇ ಸಂಬಂಧವಿಲ್ಲ ಎಂದು ನ್ಯಾಯಾಲಯಗಳು ಪದೇ ಪದೇ ಗಮನಿಸಿವೆ. ಆದರೂ ಅವರ ವಿರುದ್ಧದ ರಾಜಕೀಯ ಬೇಟೆ ನಿರಂತರವಾಗಿ ಮುಂದುವರೆದಿದೆ ಎಂದು ಅವರು ದೂರಿದರು.

ವೀಣಾ ಅವರ ತಂದೆ ಎಂಬುದೇ ಕಾರಣವಾಗಿ ಅವರನ್ನು ಗುರಿಯಾಗಿಸಲಾಗುತ್ತಿದೆ. ಮುಖ್ಯಮಂತ್ರಿ ವಿ.ಡಿ. ಸತೀಶನ್ ಅವರು ದಿಲ್ಲಿಯಲ್ಲಿ ಪ್ರಧಾನಮಂತ್ರಿಯವರನ್ನು ಭೇಟಿಯಾದ ತಕ್ಷಣ ಇಂತದ ಕ್ರಮವು ನಡೆಯುತ್ತಿರುವುದು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಮತ್ತು ಇದೊಂದು ರಾಜಕೀಯ ಷಡ್ಯಂತ್ರವಾಗಿದೆ. ಕೇರಳದ ಮುಖ್ಯಮಂತ್ರಿಯ ವ್ಯಂಗ್ಯದ ಪ್ರತಿಕ್ರಿಯೆಯು ಕೋಮುವಾದಿ ಕಾರ್ಪೊರೇಟ್ ಫ್ಯಾಸಿಸಂ ವಿರೋಧಿ ಹೋರಾಟದ ಏಕತೆಗೆ ಧಕ್ಕೆ ತರುವಂತಹದ್ದಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಸಿಎಂಆರ್‌ಎಲ್ ಡೈರಿಯಲ್ಲಿ ಹೆಸರುಗಳು ಕಾಣಿಸಿಕೊಂಡಿದೆ ಎಂದು ವರದಿಯಾಗಿರುವ ಹಲವಾರು ವ್ಯಕ್ತಿಗಳು ರಾಜ್ಯ ಸರ್ಕಾರದಲ್ಲಿ ಪ್ರಮುಖ ಹುದ್ದೆಗಳನ್ನು ಹೊಂದಿದ್ದಾರೆ. ಆದಾಗ್ಯೂ, ಅವರೆಲ್ಲರನ್ನೂ ನಿರ್ಲಕ್ಷಿಸಿ ಪಿಣರಾಯಿ ವಿಜಯನ್ ಅವರನ್ನು ನಿರಂತರವಾಗಿ ಗುರಿಯಾಗಿಸುತ್ತಿರುವುದು. ಈ ಕ್ರಮಗಳ ಹಿಂದಿನ ರಾಜಕೀಯ ಪ್ರತೀಕಾರವನ್ನು ಮತ್ತಷ್ಟು ಬಹಿರಂಗಪಡಿಸುತ್ತದೆ. ಪಕ್ಷವು ಯಾವುದೇ ತನಿಖಾ ಪ್ರಕ್ರಿಯೆಯನ್ನು ತಡೆಯುವ ಯಾವುದೇ ಉದ್ದೇಶವನ್ನು ಹೊಂದಿಲ್ಲ ಆದರೆ, ಕೇಂದ್ರ ಸರ್ಕಾರವು ರಾಜಕೀಯ ಪ್ರೇರಿತವಾಗಿ ಕೇಂದ್ರ ಸಂಸ್ಥೆಗಳ ನಗ್ನ ದುರುಪಯೋಗ ಮಾಡಿಕೊಳ್ಳುವುದನ್ನು ಒಪ್ಪಿಕೊಳ್ಳಲಾಗುವುದಿಲ್ಲ ವಿರೋಧ ಪಕ್ಷದ ನಾಯಕರನ್ನು ಗುರಿಯಾಗಿಸಿ ಕೊಂಡು ನಡೆಸಲಾಗುತ್ತಿರುವ ದಾಳಿ ಮತ್ತು ಪ್ರಜಾಪ್ರಭುತ್ವ ಹಕ್ಕುಗಳ ಮೇಲಿನ ದಾಳಿಯ ವಿರುದ್ಧ ಪಕ್ಷವು ಜನರನ್ನು ಸಜ್ಜುಗೊಳಿಸಿ ದೇಶಾದ್ಯಂತ ಬಲವಾದ ಪ್ರತಿಭಟನೆಗಳನ್ನು ಸಂಘಟಿಸುತ್ತದೆ ಎಂದು ಅವರು ಹೇಳಿದರು.

### ಇಂಧನ ಉಳಿತಾಯ ಸಿಬ್ಬಂದಿಗೆ ನಗದು ಬಹುಮಾನ

## ಸಂಸ್ಥೆಯ ಚಾಲಕರು ಸೇವಾ ಯೋಧರು ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ



**ಕಲಬುರಗಿ, ಮೇ. 30:** ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಚಾಲಕರು ಕೇವಲ ವಾಹನ ಚಾಲಕರು ಮಾತ್ರವಲ್ಲ, ಪ್ರತಿದಿನ ಸಾವಿರಾರು ಪ್ರಯಾಣಿಕರ ಜೀವವನ್ನು ಸುರಕ್ಷಿತವಾಗಿ ತಲುಪಿಸುವ ಹೊಣೆಗಾರಿಕೆಯನ್ನು ಹೊತ್ತಿರುವ ಸೇವಾಯೋಧರಾಗಿದ್ದಾರೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣ ಕುಮಾರ ಪಾಟೀಲ ಹೇಳಿದರು.

2025–26ನೇ ಸಾಲಿನ ಇಂಧನ ಉಳಿತಾಯ ದ್ವಿಮಾಸಿಕ ಕಾರ್ಯಕ್ರಮದಡಿ ಕೆ.ಎಂ.ಪಿ.ಎಲ್ ವೃದ್ಧಿಯ ಮೂಲಕ ಅತ್ಯುತ್ತಮ ಇಂಧನ ಉಳಿತಾಯ ಸಾಧನೆ ಮಾಡಿ ನಿಗಮದ ಆರ್ಥಿಕ ಸದೃಢತೆಗೆ ಕೊಡುಗೆ ನೀಡಿದ ನಿಗಮದ ವಿಭಾಗೀಯ ನಿಯಂತ್ರಕರು, ವಿಭಾಗೀಯ ಯಾಂತ್ರಿಕ ಅಭಿಯಂತರರು, ಘಟಕ ವ್ಯವಸ್ಥಾಪಕರು, ಚಾಲಕರು ಹಾಗೂ ಯಾಂತ್ರಿಕ ಸಿಬ್ಬಂದಿಗಳನ್ನು ಸನ್ಮಾನಿಸಿ ಪ್ರಶಂಸನಾ ಪತ್ರ ಹಾಗೂ ನಗದು ಬಹುಮಾನ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಖಾಸಗಿ ವಾಹನಗಳ ಚಾಲಕರಿಗಿಂತ ನಮ್ಮ ನಿಗಮದ ಚಾಲಕರು ಸೇವಾ ಮನೋಭಾವ, ಶಿಸ್ತು, ಪ್ರಾಮಾಣಿಕತೆ, ನಿಷ್ಠೆ ಹಾಗೂ ಪ್ರಯಾಣಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಾ ವಿಭಿನ್ನ ಸ್ಥಾನ ಹೊಂದಿದ್ದಾರೆ. ನಮ್ಮ ಚಾಲಕರ ಕಾರ್ಯಕ್ಷಮತೆ ನಿಜವಾಗಿಯೂ ಹೆಮ್ಮೆಯ ಸಂಗತಿಯಾಗಿದೆ. ಜೊತೆಗೆ ಯಾಂತ್ರಿಕ ನಿರ್ವಹಣೆ ಮಾಡುವ ಎಲ್ಲಾ ಯಾಂತ್ರಿಕ ಸಿಬ್ಬಂದಿಯ ಶ್ರದ್ಧೆ, ನಿಷ್ಠೆ ಹಾಗೂ ಸೇವಾ ಮನೋಭಾವದಿಂದಲೇ ನಿಗಮ ಪ್ರಯಾಣಿಕರಿಗೆ ಗುಣಮಟ್ಟದ ಸೇವೆ ನೀಡುತ್ತಿದೆ ಎಂದು ಸಿಬ್ಬಂದಿಯ ಕಾರ್ಯವೈಖರಿಯನ್ನು ಶ್ಲಾಘಿಸಿದರು.

ಇಂದು ಕರ್ನಾಟಕದ ಸಾರಿಗೆ ವ್ಯವಸ್ಥೆ ದೇಶದಲ್ಲಿಯೇ ಮಾದರಿಯಾಗಿರುವುದಕ್ಕೆ ನೌಕರರ ಅವಿರತ ಶ್ರಮ, ಸೇವಾ ಮನೋಭಾವನೆಯೆ ಕಟರಣವಾಗಿದೆ. ಹಲವು ರಾಜ್ಯಗಳ ಸಾರಿಗೆ ಸೇವೆಗೆ ಹೋಲಿಸಿದರೆ ಕರ್ನಾಟಕದ ಸಾರಿಗೆ ಸೇವೆ ಪ್ರಯಾಣಿಕರ ವಿಶ್ವಾಸ ಗಳಿಸಿರುವುದು ಹೆಮ್ಮೆಯ ವಿಚಾರ. ಅತ್ಯುತ್ತಮ ಸೇವೆಗಳಿಗಾಗಿ ನಮ್ಮ ನಿಗಮ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಅನೇಕ ಪ್ರಶಸ್ತಿಗಳನ್ನು ಪಡೆದಿದೆ ಎಂದರು.

ಇದೇ ಸಂದರ್ಭದಲ್ಲಿ ಕೆ.ಎಂ.ಪಿ.ಎಲ್ ಉತ್ತಮ ಸಾಧನೆಗೈದ 43 ಚಾಲಕರು, ನಾಲ್ವರು ವಿಭಾಗೀಯ ನಿಯಂತ್ರಣಾಧಿಕಾರಿಗಳು, ನಾಲ್ವರು ವಿಭಾಗೀಯ ಯಾಂತ್ರಿಕ ಅಭಿಯಂತರರು ಹಾಗೂ 12 ಜನ ಘಟಕ ವ್ಯವಸ್ಥಾಪಕರು ಹಾಗೂ 10 ಯಾಂತ್ರಿಕ ಇಲಾಖೆಯ ಸಿಬ್ಬಂದಿ ಸೇರಿದಂತೆ ಒಟ್ಟು 73 ಸಾಧಕರಿಗೆ ನಗದು ಬಹುಮಾನ, ಪ್ರಶಂಸನಾಪತ್ರ ನೀಡಿ ಗೌರವಿಸಲಾಯಿತು.

## ನಾರಾಯಣಪ್ಪ ಕುರುಬರ್ ದಕ್ಷ ಅಧಿಕಾರಿ, ಪ್ರೊ. ರಾಜು ಆಲಗೂರು ಅಭಿಮತ: ನಿವೃತ್ತಿಯಾದ ಡಿ.ಸಿ ಕುರುಬರ್‌ಗೆ ಬೀಳ್ಕೊಡುಗೆ




**ವಿಜಯಪುರ,ಮೇ.30–**ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ್ ಅವರು ದಕ್ಷ ಪ್ರಾಮಾಣಿಕ ಅಧಿಕಾರಿಯಾಗಿ ತಮ್ಮ ಸೌಮ್ಯ ಸ್ವಭಾವದಿಂದ ಕಾನೂನು ಪರಿಪಾಲಿಸುವುದರೊಂದಿಗೆ ಉತ್ತಮ ಸೇವೆ ಸಲ್ಲಿಸಿದ್ದಾರೆ ಎಂದು ಮಾಜಿ ಶಾಸಕ ಪ್ರೊ. ರಾಜು ಆಲಗೂರು ಹೇಳಿದರು.

ಸೇವಾ ನಿವೃತ್ತಿ ಹೊಂದಿದ ಕಲ್ಯಾಣ ಕರ್ನಾಟ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ ಜೊತೆಗೆ ನಿವೃತ್ತಿ ಹೊಂದಿದ ಇತರೇ ಸಿಬ್ಬಂದಿಗೆ ಇಲ್ಲಿನ ರಾಜರಾಜೇಶ್ವರಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ, ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿ ಜೀವನದಲ್ಲಿ ಉತ್ತರೋತ್ತರ ಸುಖ–ಸಂತೋಷ ತರಲಿ ಎಂದು ಹಾರೈಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಅರವಿಂದ ಹಾಗರಗಿ ಮಾತನಾಡಿ, ಸಂಸ್ಥೆಯ ಸಿಬ್ಬಂದಿ ಸಹಕಾರದೊಂದಿಗೆ ನಾರಾಯಣಪ್ಪ ಕುರುಬರ್ ಅವರು ಸಂಸ್ಥೆ ಕಟ್ಟುವಲ್ಲಿ ಅವಿರತ ಶ್ರಮ ವಹಿಸಿದ್ದಾರೆ. ಖಡಕ್ ಅಧಿಕಾರಿಯಾಗಿದ್ದ ಕುರುಬರ್ ಅವರು, ಕಾನೂನು ಸೇವಾ ಪ್ರಾಧಿಕಾರದೊಂದಿಗೆ ಸುಮಧುರ ಒಡನಾಟ ಹೊಂದಿದ್ದರು. ಅವರೊಬ್ಬ ಸ್ನೇಹಜೀವಿ, ಅವರ ವಿಶ್ರಾಂತ ಜೀವನ ಆನಂದದಿಂದ ಕೂಡಿರಲಿ ಎಂದು ಆಶಿಸಿದರು.

# ಖಾಸಗಿ ಬಸ್ ಪಲ್ಟಿ: ಓರ್ವ ಸಾವು 21 ಮಂದಿಗೆ ಗಾಯ

**ಅಂಕೋಲಾ, ಮೇ.30–** ಬಳ್ಳಾರಿಯಿಂದ ಗೋವಾಕ್ಕೆ ತೆರಳುತ್ತಿದ್ದ ಖಾಸಗಿ ಸೀಬರ್ಡ್ ಸ್ಲೀಪರ್ ಬಸ್ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾದ ಪರಿಣಾಮ ಓರ್ವ ಪ್ರಯಾಣಿಕ ಮೃತಪಟ್ಟು, 21ಕ್ಕೂ ಹೆಚ್ಚು ಮಂದಿ ಗಾಯಗೊಂಡ ಘಟನೆ ಶನಿವಾರ ಬೆಳಗಿನ ಜಾವ ಕಂಚಿನಬಾಗಿಲ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿದೆ.

ಅಪಘಾತಕ್ಕೀಡಾದ ಬಸ್‌ನಲ್ಲಿ ಒಟ್ಟು 36 ಪ್ರಯಾಣಿಕರಿದ್ದರು ಎಂದು ತಿಳಿದುಬಂದಿದೆ. ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಆಂಧ್ರ ಮೂಲದ ಪ್ರಯಾಣಿಕ ಶರಣಯ್ಯ (42) ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಕೊನೆಯುಸಿರೆಳೆದಿದ್ದಾನೆ. ಗಂಭೀರವಾಗಿ ಗಾಯಗೊಂಡಿರುವ 6 ಮಂದಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಾರವಾರದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಇನ್ನುಳಿದ 15ಕ್ಕೂ ಹೆಚ್ಚು ಪ್ರಯಾಣಿಕರಿಗೆ ಸ ಣ್ಣ ಪ ು ಟ್ಟ ಗಾಯಗಳಾಗಿದ್ದು, ಅವರಿಗೆ ಅಂಕೋಲಾ ತಾಲೂಕು ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.




ಅಪಘಾತದ ತೀವ್ರತೆಗೆ ಬಸ್ ರಾಷ್ಟ್ರೀಯ ಹೆದ್ದಾರಿಗೆ ಅಡ್ಡಲಾಗಿ ಬಿದ್ದಿದ್ದರಿಂದ ಹೆದ್ದಾರಿಯಲ್ಲಿ ವಾಹನ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿತ್ತು. ಇದರ ಪರಿಣಾಮವಾಗಿ ರಸ್ತೆಯ ಎರಡೂ ಬದಿಯಲ್ಲಿ ಕಿಲೋಮೀಟರ್ ಗಟ್ಟಲೆ ನೂರಾರು ವಾಹನಗಳು ಸಾಲುಗಟ್ಟಿ ನಿಂತಿದ್ದವು.

ಮಾಹಿತಿ ತಿಳಿಯುತ್ತಿದ್ದಂತೆ ತಕ್ಷಣವೇ ಸ್ಥಳಕ್ಕೆ ಧಾವಿಸಿದ ಅಂಕೋಲಾ ಠಾಣೆಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ, ಗಾಯಾಳುಗಳನ್ನು ರಕ್ಷಿಸುವ ಕಾರ್ಯಾಚರಣೆ ಕೈಗೊಂಡರು. ತದನಂತರ ಕ್ರೇನ್ ಮೂಲಕ ಬಸ್ ಅನ್ನು ರಸ್ತೆಯ ಪಕ್ಕಕ್ಕೆ ಸರಿಸಿ, ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ. ಈ ಕುರಿತು ಅಂಕೋಲಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರಯಾಣಿಕರಿಗೆ ಸದಾ ಕಾಡುತ್ತಿರುವ ಶಿರೂರು ಗುಡ್ಡ: ಆಡಳಿತ ವ್ಯವಸ್ಥೆಯ ನಿಷ್ಕ್ರಿಯತೆ

**ಅಂಕೋಲಾ, ಮೇ.30– :** ಮಳೆಗಾಲ ಎಂದಕೂಡಲೇ ಅಂಕೋಲಿಗರಿಗೆ ಮೊದಲಿಗೆ ನೆನಪಿಗೆ ಬರುವುದು ಶಿರೂರಿನಲ್ಲಿ ನಡೆದ ಗುಡ್ಡ ಕುಸಿತದ ಕರಾಳ ಛಾಯೆ. ಐಆರ್‌ಬಿಯವರು ಚತುಷ್ಪಥ ಹೆದ್ದಾರಿಗಾಗಿ ಅವೈಜ್ಞಾನಿಕವಾಗಿ ಗುಡ್ಡ ಕತ್ತರಿಸಿದ ಪರಿಣಾಮ 2024 ಜುಲೈ 16 ರಂದು ಶಿರೂರಿನಲ್ಲಿ ಗುಡ್ಡ ಕುಸಿದು 11 ಜನರು ಈ ದುರಂತದಲ್ಲಿ ಮೃತರಾಗಿದ್ದರು. ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿರುವುದು ಇಂದಿಗೂ ಕಣ್ಣಿಗೆ ಕಟ್ಟಿದಂತಿದೆ.



ಇನ್ನು ಮಂಜಗುಣಿ–ಗಂಗಾವಳಿ ಸೇತುವೆ ನಿರ್ಮಾಣಗೊಂಡಿದ್ದರಿಂದ ಮಳೆಗಾಲ ಕೆಲವರು ಈ ರಸ್ತೆಯ ಮೂಲಕವೇ ಸಂಚರಿಸಲು ನಿರ್ಧರಿಸಿದ್ದಾರೆ. ಇನ್ನು ಪೊಲೀಸರು ಹಾಗೂ ಜಿಲ್ಲಾಡಳಿತ ಕೂಡ ಇಲ್ಲಿ ಸಮಸ್ಯೆಗಳು ಕಂಡುಬಂದರೂ ಕೂಡ ತಕ್ಷಣ ವಾಹನ ಸಂಚಾರ ಸ್ಥಗಿತಗೊಳಿಸಿ ಮಂಜಗುಣಿ ಗಂಗಾವಳಿ ಸೇತುವೆ ಹಾಗೂ ಯಲ್ಲಾಪುರ ಕಡೆಯಿಂದ ಬರುವವರಿಗೆ ಹೊಸಕಂಬಿ ಮೂಲಕ ತೆರಳಲು ಮುಂಜಾಗೃತಾ ಕ್ರಮ ವಹಿಸಿದ್ದಾರೆ ಎನ್ನಲಾಗಿದೆ.

ಐಆರ್‌ಬಿಯವರು ಈ ಹಿಂದೆ ಗುಡ್ಡ ಕುಸಿದ ಸ್ಥಳದಲ್ಲಿ ಯಾವುದೇ ಪರ್ಯಾಯ ವ್ಯವಸ್ಥೆ ಕಲ್ಪಿಸದೇ ಸಿಮೆಂಟ್ ಬ್ಯಾರಿಕೆಡ್ ಹಾಕಿ ಕೈತೊಳೆದುಕೊಂಡಿದ್ದಾರೆ. ಹಾಗೇ ಗಂಗಾವಳಿ ನದಿಯಲ್ಲಿ ಬಿದ್ದ ಮಣ್ಣು ಕೂಡ ಸಣ್ಣ ಗುಡ್ಡದಂತೆ ಕಾಣುತ್ತಿದೆ. ಇತ್ತೀಚಿಗೆ ಈ ಮಣ್ಣನ್ನು ತೆಗೆಯಲು ಟೆಂಡರ್ ಕಾರ್ಯವು ಮುಗಿದಿದೆ. ಆದರೆ ಮಳೆಗಾಲದ ನಂತರವೇ ನದಿಯಲ್ಲಿ ಬಿದ್ದ ಮಣ್ಣನ್ನು ತೆರವುಗೊಳಿಸಬೇಕಾಗಿದೆ.

# ಪಾಕಿಸ್ತಾನದ ಕರಾಚಿಯಲ್ಲಿ ಗಂಭೀರ ಜಲಕ್ಷಾಮ



**ನವದೆಹಲಿ, ಮೇ 30:** ಭಾರತ ಮತ್ತು ಪಾಕಿಸ್ತಾನ ನಡುವಿನ ಸಿಂಧೂ ನದಿನೀರು ಒಪ್ಪಂದವು ಸ್ಥಗಿತಗೊಂಡಿರುವುದು ಪಾಕಿಸ್ತಾನದ ಜಲ ಭದ್ರತೆಯ ಆತಂಕವನ್ನು ಹೆಚ್ಚಿಸಿದೆ. ಇದರ ಬೆನ್ನಲ್ಲೇ ಪಾಕಿಸ್ತಾನದ ಆರ್ಥಿಕ ರಾಜಧಾನಿ ಕರಾಚಿಯಲ್ಲಿ ಬೇಸಿಗೆಯ ಉತ್ತುಂಗದ ನಡುವೆ ತೀವ್ರ ನೀರಿನ ಕೊರತೆ ಉಂಟಾಗಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಕೈಗೊಂಡಿರುವ ದಂಡನಾತ್ಮಕ ಕ್ರಮಗಳಿಂದ ಪಾಕಿಸ್ತಾನ ಈಗಾಗಲೇ ತೀವ್ರ ರಾಜತಾಂತ್ರಿಕ ಮತ್ತು ಆರ್ಥಿಕ ಒತ್ತಡ ಎದುರಿಸುತ್ತಿದೆ.

ದೇಶಾದ್ಯಂತ ಈದ್–ಉಲ್–ಅಧಾ (ಬಕ್ರೀದ್) ಹಬ್ಬದ ಆಚರಣೆ ನಡೆಯುತ್ತಿರುವಾಗಲೇ ಈ ಜಲಬಿಕ್ಕಟ್ಟು ಎದುರಾಗಿದೆ. ಕರಾಚಿ ನಗರದ ಸುಮಾರು ಶೇಕಡಾ 70 ರಷ್ಟು ಭಾಗಕ್ಕೆ ನೀರಿನ ಪೂರೈಕೆ ಸಂಪೂರ್ಣ ಸ್ಥಗಿತಗೊಂಡಿದೆ.

ತಾಪಮಾನ ಏರುತ್ತಿದೆ, ಗುಲಿಸ್ತಾನ್–ಎ–ಜೌಹರ್, ಗುಲ್ಶನ್–ಎ–ಇಕ್ಬಾಲ್, ಅಜೀಜಾಬಾದ್, ಲಿಯಾಖತಾಬಾದ್ ಮತ್ತು ಉತ್ತರ ಕರಾಚಿಯಂತಹ ಪ್ರಮುಖ ಪ್ರದೇಶಗಳಲ್ಲಿ ಕಳೆದ ಎರಡು ವಾರಗಳಿಂದ ಹನಿ ನೀರು ಸಿಗುತ್ತಿಲ್ಲ. ಇದರಿಂದಾಗಿ ಜನರು ದುಬಾರಿ ಬೆಲೆಯ ಖಾಸಗಿ ನೀರಿನ ಟ್ಯಾಂಕರ್ಗಳನ್ನು ಅವಲಂಬಿಸಬೇಕಾಗಿದೆ.

ಸಿಂಧ್ ಘನತ್ಯಾಜ್ಯ ನಿರ್ವಹಣಾ ಮಂಡಳಿಯು 43 ಶತಕೋಟಿ ರೂ.ಗಳ ಬೃಹತ್ ಬಜೆಟ್ ಹೊಂದಿದ್ದರೂ, ಹಬ್ಬದ ಸಮಯದಲ್ಲಿ ಪ್ರಾಣಿಗಳ ತ್ಯಾಜ್ಯವನ್ನು ವಿಲೇವಾರಿ ಮಾಡಲು ಮತ್ತು ನೈರ್ಮಲ್ಯ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ನಾಗರಿಕರು ಆಕ್ರೋಶ ಹೊರಹಾಕಿದ್ದಾರೆ.

ಪ್ರಾಂತೀಯ ಸರ್ಕಾರದ ವಿರುದ್ಧ ಜಮಾತ್–ಎ–ಇಸ್ಲಾಮಿ ವಾಗ್ದಾಳಿ ಕರಾಚಿಯ ಮೇಯರ್ ಮುರ್ತಾಜಾ ವಹಾಬ್ ನಗರದಲ್ಲಿ ಯಾವುದೇ ನೀರಿನ ಕೊರತೆಯಿಲ್ಲ ಎಂದು ಹೇಳಿಕೆ ನೀಡಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಈ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿರುವ ಜಮಾತ್–ಇ–ಇಸ್ಲಾಮಿ ಮುಖ್ಯಸ್ಥ ಹಫೀಜ್ ನಯೀಮ್ ಉರ್ ರೆಹಮಾನ್, ಆಡಳಿತ ಪಕ್ಷವಾದ ಪಾಕಿಸ್ತಾನ ಪೀಪಲ್ಸ್ ಪಾರ್ಟಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸಿಂಧ್ ಪ್ರಾಂತ್ಯದಲ್ಲಿ ಪಿಪಿಪಿ ಪಕ್ಷವು ಕಳೆದ 18 ವರ್ಷಗಳಿಂದ ಆಡಳಿತ ನಡೆಸುತ್ತಿದ್ದರೂ ಕರಾಚಿಯ ದೀರ್ಘಕಾಲದ ನೀರಿನ ಸಮಸ್ಯೆಯನ್ನು ಬಗೆಹರಿಸಲಾಗಿಲ್ಲ. ಜನಸಾಮಾನ್ಯರ ಹಣವನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದ್ದು, ಹಬ್ಬದ ದಿನಗಳಲ್ಲೂ ಸಾವಿರಾರು ನಿವಾಸಿಗಳು ಕುಡಿಯುವ ನೀರಿಗಾಗಿ ಹೆಣಗಾಡುವಂತಾಗಿದೆ ಎಂದು ಹಫೀಜ್ ನಯೀಮ್ ದೂರಿದ್ದಾರೆ. ಬಿಕ್ಕಟ್ಟಿನ ನಡುವೆಯೂ ತಮ್ಮ ಸಂಘಟನೆಯು ನಗರದ 150ಕ್ಕೂ ಹೆಚ್ಚು ಕಡೆಗಳಲ್ಲಿ ಸಾಮೂಹಿಕ ಹಬ್ಬದ ವ್ಯವಸ್ಥೆಗಳನ್ನು ಮಾಡಿ ಜನರಿಗೆ ನೆರವಾಗಿದೆ ಎಂದು ಅವರು ತಿಳಿಸಿದ್ದಾರೆ.

# ತಾಜಮಹಲ್ ವೀಕ್ಷಿಸಿದ ಟ್ರಂಪ್ ಪುತ್ರಿ ಟಿಫಾನಿ, ಅಕ್ಷರಧಾಮ ಮಂದಿರಕ್ಕೂ ಭೇಟಿ

**ಆಗ್ರಾ, ಮೇ 20:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪುತ್ರಿ ಟಿಫಾನಿ ಅವರು ಪತಿ ಮೈಕೆಲ್ ಬೌಲೋಸ್ ಅವರೊಂದಿಗೆ ಐತಿಹಾಸಿಕ ತಾಜ್‌ಮಹಲ್‌ಗೆ ಶನಿವಾರ ಭೇಟಿ ನೀಡಿದ್ದು, ಸುಮಾರು ಒಂದು ಗಂಟೆ ಸ್ಮಾರಕವನ್ನು ವೀಕ್ಷಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಳಿಗ್ಗೆ 11 ಗಂಟೆ ಸುಮಾರಿಗೆ ಟಿಫಾನಿ, ತನ್ನ ಪತಿ ಬೌಲೋಸ್ ಮತ್ತಿತರ ಕೆಲವು ಆಪ್ತರೊಂದಿಗೆ ತಾಜ್‌ಮಹಲ್‌ಗೆ ಆಗಮಿಸಿದ್ದು, ಪ್ರೇಮಸೌಧದ ಸುತ್ತ ಸುತ್ತಾಡಿದ್ದು, ವಿವಿಧ ಸ್ಥಳಗಳಲ್ಲಿ ಚಿತ್ರಗಳನ್ನು ಕ್ಲಿಕ್ಕಿಸಿದ್ದಾರೆ. ಸ್ಮಾರಕದ ಇತಿಹಾಸ ಮತ್ತು ವಾಸ್ತುಶಿಲ್ಪದ ಬಗ್ಗೆ ತೀವ್ರ ಆಸಕ್ತಿ ತೋರಿಸಿದರು.



ಅಲ್ಲದೇ ನಿರ್ಮಾಣದ ಬಗ್ಗೆ ಹಲವು ಪ್ರಶ್ನೆಗಳು ಕೇಳಿದರು ಎಂದು ಪ್ರವಾಸಿ ಮಾರ್ಗದರ್ಶಿ ರಮೇಶ್ ದಿವಾನ್ ತಿಳಿಸಿದ್ದಾರೆ. ಭೇಟಿ ಮುಗಿದ ನಂತರ ಸ್ಮಾರಕದ ಸೌಂದರ್ಯವನ್ನು ಟಿಫಾನಿ ಟ್ರಂಪ್ ಹೊಗಳಿದ್ದಾರೆ ಎಂದು ಪ್ರವಾಸದ ಸಮಯದಲ್ಲಿ ಹಾಜರಿದ್ದ ಜನರು ತಿಳಿಸಿದ್ದಾರೆ.

ದೆಹಲಿಯಿಂದ ಚಾರ್ಟರ್ಡ್ ವಿಮಾನದ ಮೂಲಕ ಆಗ್ರಾ ವಿಮಾನ ನಿಲ್ದಾಣಕ್ಕೆ ಬಂದಿಳಿದಿದ್ದಾರೆ. ಬಳಿಕ ತಾಜ್ ಮಹಲ್‌ಗೆ ಹೋಗುವ ಮೊದಲು ರಸ್ತೆಯ ಮೂಲಕ ಹೋಟೆಲ್‌ಗೆ ಪ್ರಯಾಣಿಸಿದರು. ಇದಕ್ಕಾಗಿ ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ವಿಮಾನ ನಿಲ್ದಾಣದಿಂದ ತಾಜ್ ಮಹಲ್ ವರೆಗೂ ಹೆಚ್ಚಿನ ಭದ್ರತಾ ವ್ಯವಸ್ಥೆ ಮಾಡಲಾಗಿತ್ತು. ಮಾರ್ಗದಲ್ಲಿ ಮತ್ತು ಸ್ಮಾರಕದ ಸುತ್ತಲೂ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಟ್ರಂಪ್ ಪುತ್ರಿ ತಾಜ್ ಮಹಲ್‌ಗೆ ಭೇಟಿ ನೀಡಿದ ನಂತರ, ತಮ್ಮ ಪತಿಯೊಂದಿಗೆ ಹೋಟೆಲ್‌ಗೆ ಮರಳಿದ್ದಾರೆ.

ಇದಕ್ಕೂ ಮುನ್ನ ದೆಹಲಿಯ ಅಕ್ಷರಧಾಮ ಮಂದಿರಕ್ಕೂ ಟಿಫಾನಿ ದಂಪತಿ ಭೇಟಿ ನೀಡಿದ್ದರು. ಭಾನುವಾರ ರಾಜಸ್ಥಾನದ ಜೈಸಲ್ಮೇರ್‌ಗೆ ತೆರಳಿದ್ದಾರೆ.

# ಜಾರ್ಖಂಡ್ ಆರೋಗ್ಯ ಇಲಾಖೆಗೆ ವೈಭವ್ ಸೂರ್ಯವಂಶಿ ರಾಯಭಾರಿ



**ರಾಂಚಿ, ಮೇ 30:** ಐಪಿಎಲ್‌ನಲ್ಲಿ ಸ್ಫೋಟಕ ಬ್ಯಾಟಿಂಗ್‌ನಿಂದ ಭಾರೀ ಸದ್ದು ಮಾಡಿದ ಹದಿನೈದು ವರ್ಷದ ವೈಭವ್ ಸೂರ್ಯವಂಶಿಗೆ ಬಂಪರ್ ಕೊಡುಗೆ ಸಿಕ್ಕಿದೆ. ಅದೇನೆಂದರೆ ಜಾರ್ಖಂಡ್ ರಾಜ್ಯದ ಆರೋಗ್ಯ ಇಲಾಖೆಯ ಬ್ರಾಂಡ್ ರಾಯಭಾರಿಯಾಗಲಿದ್ದಾರೆ. ಈ ಬಗ್ಗೆ ಜಾರ್ಖಂಡ್ ರಾಜ್ಯದ ಆರೋಗ್ಯ ಸಚಿವ ಡಾ. ಇರ್ಫಾನ್ ಅನ್ಸಾರಿ ಅವರು ತಮ್ಮ ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಶನಿವಾರ ಘೋಷಿಸಿದ್ದಾರೆ. ಯುವ ಕ್ರಿಕೆಟಿಗನ ಅತ್ಯುತ್ತಮ ಪ್ರದರ್ಶನ ಮತ್ತು ಸ್ಫೂರ್ತಿದಾಯಕ ಸಾಧನೆಯನ್ನು ಶ್ಲಾಘಿಸಿದರು. ವೈಭವ್ ಸೂರ್ಯವಂಶಿ ರಾಜ್ಯದಾದ್ಯಂತದ ಮಹತ್ವಾಕಾಂಕ್ಷಿ ಯುವಕರಿಗೆ ಮಾದರಿ ಎಂದು ಬಣ್ಣಿಸಿದರು.

"ತನ್ನ ಸ್ಫೋಟಕ ಬ್ಯಾಟಿಂಗ್, ಗಮನಾರ್ಹ ಪ್ರತಿಭೆ ಮತ್ತು ಇಷ್ಟು ಚಿಕ್ಕ ವಯಸ್ಸಿನಲ್ಲಿ ಇಡೀ ರಾಷ್ಟ್ರವನ್ನು ಆಕರ್ಷಿಸುವ ಸಾಮರ್ಥ್ಯದಿಂದ ಕ್ರಿಕೆಟ್ ಜಗತ್ತಿನಲ್ಲಿ ಹೊಸ ಸಂಚಲನ ಸೃಷ್ಟಿಸಿದ ಯುವ ಕ್ರಿಕೆಟ್ ತಾರೆ ವೈಭವ್ ಸೂರ್ಯವಂಶಿಗೆ ಜಾರ್ಖಂಡ್‌ನಲ್ಲಿ ಗೌರವಿಸಲಾಗುವುದು" ಎಂದು ಅನ್ಸಾರಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. "ಹೆಚ್ಚುವರಿಯಾಗಿ, ವೈಭವ್ ಸೂರ್ಯವಂಶಿಯನ್ನು ಜಾರ್ಖಂಡ್ ಆರೋಗ್ಯ ಇಲಾಖೆಯ ಬ್ರಾಂಡ್ ರಾಯಭಾರಿಯಾಗಿ ನೇಮಿಸಲಾಗುವುದು" ಎಂದು ಸಚಿವರು ತಿಳಿಸಿದ್ದಾರೆ. "ವೈಭವ್, ನಿಮ್ಮ ತಂಡ, ಕ್ವಾಲಿಫೈಯರ್–2 ಪಂದ್ಯದಲ್ಲಿ ಸೋತಿದ್ದರೂ, ನೀವು ಈಗಾಗಲೇ ಲಕ್ಷಾಂತರ ಭಾರತೀಯರ ಹೃದಯಗಳನ್ನು ಗೆದ್ದಿದ್ದೀರಿ. ನಾನು ಸ್ವತಃ ಕ್ರಿಕೆಟಿಗ, ಆದರೆ ಇಷ್ಟು ಚಿಕ್ಕ ವಯಸ್ಸಿನಲ್ಲಿಯೇ ಅಂತರರಾಷ್ಟ್ರೀಯ ಮಟ್ಟದ ದೊಡ್ಡ ಬೌಲರ್‌ಗಳನ್ನು ಅಂತಹ ಆತ್ಮವಿಶ್ವಾಸ ಮತ್ತು ಆಕ್ರಮಣಶೀಲತೆಯಿಂದ ಎದುರಿಸುವುದು ಮತ್ತು ಅವರನ್ನು ನಿರಂತರವಾಗಿ ಸೋಲಿಸುವುದು ಅಸಾಧಾರಣ ಪ್ರತಿಭೆಗೆ ಸಾಕ್ಷಿಯಾಗಿದೆ. ನೀವು ನಿಮ್ಮ ಸ್ವಂತ ಹೆಸರನ್ನು ಬೆಳಗಿಸಿದ್ದಲ್ಲದೆ, ನಿಮ್ಮ ಪೋಷಕರು, ಬಿಹಾರ ಮತ್ತು ಇಡೀ ಹಿಂದೂಸ್ತಾನ್‌ಗೆ ಕೀರ್ತಿ ತಂದಿದ್ದೀರಿ" ಎಂದು ಅನ್ಸಾರಿ ಹೇಳಿದ್ದಾರೆ.

# ಏಷ್ಯನ್ ಗೇಮ್ಸ್ ಆಯ್ಕೆ ಪ್ರಕ್ರಿಯೆ: ವಿನೇಶ್ ಫೋಗಟ್‌ಗೆ ಅನುಮತಿ

ನವದೆಹಲಿ, ಮೇ 30: ಮಾಜಿ ವಿಶ್ವ ಚಾಂಪಿಯನ್‌ಶಿಪ್ ಪದಕ ವಿಜೇತೆ ವಿನೇಶ್ ಫೋಗಟ್ ಅವರು ಏಷ್ಯನ್ ಗೇಮ್ಸ್ ಆಯ್ಕೆ ಟ್ರಯಲ್ಸ್‌ನಲ್ಲಿ ಮಹಿಳೆಯರ 53 ಕೆಜಿ ವಿಭಾಗದಲ್ಲಿ ಸ್ಪರ್ಧಿಸಲು ಅವಕಾಶ ಪಡೆದಿದ್ದಾರೆ. ಭಾರತೀಯ ಕುಸ್ತಿ ಒಕ್ಕೂಟ (ಡಬ್ಲ್ಯುಎಫ್‌ಐ) 50 ಕೆಜಿ ವಿಭಾಗಕ್ಕೆ ಮಾತ್ರ ಭಾಗವಹಿಸುವ ತನ್ನ ಹಿಂದಿನ ನಿಲುವನ್ನು ಹಿಂತೆಗೆದುಕೊಂಡ ನಂತರ ಈ ಬೆಳವಣಿಗೆ ನಡೆದಿದೆ.

ಶನಿವಾರ ಬೆಳಿಗ್ಗೆ ಈ ನಾಟಕೀಯ ಈ ಬೆಳವಣಿಗೆ ನಡೆದಿದೆ. ಪ್ಯಾರಿಸ್ ಒಲಿಂಪಿಕ್ಸ್ ಸೇರಿ ತನ್ನ ಕೊನೆಯ ನಾಲ್ಕು ಅಂತರರಾಷ್ಟ್ರೀಯ ಸ್ಪರ್ಧೆಗಳಲ್ಲಿ ಆ ತೂಕದ ವರ್ಗದಲ್ಲಿ ಭಾಗವಹಿಸುವಿಕೆಯನ್ನು ಉಲ್ಲೇಖಿಸಿ, ವಿನೇಶ್ ಅವರಿಗೆ 50 ಕೆಜಿ ವಿಭಾಗದಲ್ಲಿ ಮಾತ್ರ ಸ್ಪರ್ಧಿಸಲು ಅವಕಾಶ ನೀಡಲಾಗುವುದು ಎಂದು ತಿಳಿಸಲಾಯಿತು. ಆದರೆ ವಿನೇಶ್ ಈ ನಿರ್ಧಾರವನ್ನು ತೀವ್ರವಾಗಿ ಆಕ್ಷೇಪಿಸಿದರು. ಫೆಡರೇಶನ್ ತನ್ನ ಆಯ್ಕೆಯ ವಿಭಾಗದಲ್ಲಿ ಸ್ಪರ್ಧಿಸಲು ಅವಕಾಶವನ್ನು ನಿರಾಕರಿಸುವ ಮೂಲಕ ತಾರತಮ್ಯ ಮಾಡಿದೆ ಎಂದು ಆರೋಪಿಸಿದರು.

ಡಬ್ಲ್ಯುಎಫ್‌ಐ ಅಧ್ಯಕ್ಷ ಸಂಜಯ್ ಸಿಂಗ್ ಮಧ್ಯ ಪ್ರವೇಶಿಸಿದ್ದರಿಂದ ವಿನೇಶ್ ಅವರಿಗೆ 53 ಕೆಜಿ ಟ್ರಯಲ್ಸ್‌ಗೆ ಪ್ರವೇಶಿಸಲು ಅವಕಾಶ ನೀಡುವ ಮೊದಲು ಈ ವಿಚಾರ ಉಲ್ಬಣಗೊಂಡಿತು ಎಂದು ಮೂಲಗಳು ತಿಳಿಸಿವೆ. ಅವರು ಆರೋಪಗಳನ್ನು ಹೊರಿಸಿ ತನ್ನ ತೂಕ ತೆಗೆದುಕೊಳ್ಳುವಂತೆ ಅಧಿಕಾರಿಗಳನ್ನು ಕೇಳಿದ ನಂತರ ನಾವು ಆಕೆಗೆ ಅವಕಾಶ ನೀಡಿದ್ದೇವೆ ಎಂದು ಡಬ್ಲ್ಯೂ ್ಯಎಫ್‌ಐ ಅಧ್ಯಕ್ಷ ಸಂಜಯ್ ಸಿಂಗ್ ತಿಳಿಸಿದ್ದಾರೆ ಎಂದು ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ನಾವು ಯಾರಿಗೂ ತಾರತಮ್ಯ ಮಾಡಲು ಬಯಸುವುದಿಲ್ಲ. ಅವರು ಯಾವ ವಿಭಾಗದಲ್ಲಿ ಸ್ಪರ್ಧಿಸಲು ಬಯಸುತ್ತಾರೆ ಎಂಬುದನ್ನು ತಿಳಿಸಲಿಲ್ಲ, ಆದರೂ ಆಕೆಗೆ ಅವಕಾಶ ನೀಡಲಾಗಿದೆ ಎಂದು ಹೇಳಿದರು. ಬಳಿಕ, ವಿನೇಶ್ ಅವರು 53.9 ಕೆಜಿ ತೂಕದೊಂದಿಗೆ 53 ಕೆಜಿ ಡ್ರಾದಲ್ಲಿ ಸ್ಥಾನ ಪಡೆದರು. ಈಗ ಆಕೆಯ, ಮತ್ತೊಬ್ಬ ಪ್ರತಿಸ್ಪರ್ಧಿ ಆಂಟಿಮ್ ಪಂಗಲ್ ಮತ್ತು ಮೀನಾಕ್ಷಿ ಗೋಯತ್ ನಡುವೆ ಕುತೂಹಲಕಾರಿ ಹೋರಾಟಕ್ಕೆ ಕಾರಣವಾಗಿದೆ.



ಈ ಬೆಳವಣಿಗೆಯು ಡಬ್ಲ್ಯುಎಫ್‌ಐಗೆ ಗಮನಾರ್ಹ ಹಿನ್ನಡೆಯಾಗಿದ್ದು, ವಿನೇಶ್ ಅವರನ್ನು 50 ಕೆಜಿ ವಿಭಾಗಕ್ಕೆ ಮಾತ್ರ ಪರಿಗಣಿಸಲಾಗುವುದು ಎಂದು ಹೇಳಿತ್ತು. ವಿನೇಶ್ ಇತ್ತೀಚಿನ ಅಂತರರಾಷ್ಟ್ರೀಯ ಸ್ಪರ್ಧೆಗಳಲ್ಲಿ ಆ ವಿಭಾಗದಲ್ಲಿ ನಿರಂತರವಾಗಿ ಸ್ಪರ್ಧಿಸಿದ್ದಾರೆ. ಟ್ರಯಲ್ಸ್‌ಗಾಗಿ ವಿಭಾಗಗಳನ್ನು ಬದಲಾಯಿಸುವ ಬಗ್ಗೆ ಡಬ್ಲ್ಯೂ ್ಯಎಫ್‌ಐಗೆ ಔಪಚಾರಿಕವಾಗಿ ತಿಳಿಸಿಲ್ಲ ಎಂಬುದು ಒಕ್ಕೂಟದ ವಾದವಾಗಿತ್ತು.

ದೆಹಲಿ ಹೈಕೋರ್ಟ್ ವಿನೇಶ್ ಅವರನ್ನು ಪ್ರಮುಖ ಕ್ರೀಡಾಪಟು ಎಂದು ಪರಿಗಣಿಸಲು ಮತ್ತು ಏಷ್ಯನ್ ಗೇಮ್ಸ್ ಆಯ್ಕೆ ಟ್ರಯಲ್ಸ್‌ನಲ್ಲಿ ಭಾಗವಹಿಸಲು ಅವಕಾಶ ನೀಡುವಂತೆ ಡಬ್ಲ್ಯುಎಫ್‌ಐಗೆ ನಿರ್ದೇಶನ ನೀಡಿದ ನಂತರ ಈ ವಿಷಯವು ಈಗಾಗಲೇ ಸಾಕಷ್ಟು ವಿವಾದವನ್ನು ಸೃಷ್ಟಿಸಿತ್ತು.

ವಿನೇಶ್ ತಮ್ಮ ವೃತ್ತಿಜೀವನದಲ್ಲಿ 53 ಕೆಜಿ ಸೇರಿದಂತೆ ಬಹು ತೂಕ ವಿಭಾಗಗಳಲ್ಲಿ ಸ್ಪರ್ಧಿಸಿದ್ದಾರೆ. ಆ ವಿಭಾಗದಲ್ಲಿ ಟ್ರಯಲ್ಸ್‌ನಲ್ಲಿ ಸ್ಪರ್ಧಿಸಲು ಉತ್ಸುಕರಾಗಿದ್ದರು. ಟ್ರಯಲ್ಸ್‌ನ ವಿಜೇತರು ಈ ವರ್ಷದ ಕೊನೆಯಲ್ಲಿ ಏಷ್ಯನ್ ಗೇಮ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸುವ ಹಕ್ಕನ್ನು ಗಳಿಸುತ್ತಾರೆ. ವಿನೇಶ್ ಅವರನ್ನು 53 ಕೆಜಿ ಡ್ರಾದಲ್ಲಿ ಸೇರಿಸಿಕೊಳ್ಳುವ ಡಬ್ಲ್ಯೂ ್ಯಎಫ್‌ಐ ನಿರ್ಧಾರವು ಗಂಟೆಗಳ ಅನಿಶ್ಚಿತತೆಯನ್ನು ಕೊನೆಗೊಳಿಸಿತು. ಭಾರತದ ಅತ್ಯಂತ ಪ್ರಸಿದ್ಧ ಮಹಿಳಾ ಕುಸ್ತಿಪಟುಗಳಲ್ಲಿ ಒಬ್ಬರು ಏಷ್ಯನ್ ಗೇಮ್ಸ್‌ನಲ್ಲಿ ಸ್ಥಾನ ಪಡೆಯುವ ಸ್ಪರ್ಧೆಯಲ್ಲಿ ಉಳಿಯುವಂತೆ ಖಚಿತಪಡಿಸಿತು.

ಪ್ಯಾರಿಸ್ ಒಲಿಂಪಿಕ್ಸ್ 2024ರಲ್ಲಿ ವಿನೇಶ್ ಫೋಗಟ್ ಅವರು ಮಹಿಳೆಯರ 50 ಕೆಜಿ ಫ್ರೀಸ್ಟೈಲ್ ಕುಸ್ತಿ ವಿಭಾಗದಲ್ಲಿ ಸ್ಪರ್ಧಿಸಿದ್ದರು. ತಮ್ಮ ಅಪ್ರತಿಮ ಪ್ರದರ್ಶನದ ಮೂಲಕ ವಿಶ್ವ ಚಾಂಪಿಯನ್ ಜಪಾನಿನ ಯುಯಿ ಸುಸಾಕಿ ಸೇರಿದಂತೆ ಬಲಿಷ್ಠ ಸ್ಪರ್ಧಿಗಳನ್ನು ಸೋಲಿಸಿ, ಒಲಿಂಪಿಕ್ಸ್ ಇತಿಹಾಸದಲ್ಲೇ ಕುಸ್ತಿ ವಿಭಾಗದಲ್ಲಿ ಫೈನಲ್ ತಲುಪಿದ ಮೊದಲ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

ಆದರೆ, ಚಿನ್ನದ ಪದಕದ ಐತಿಹಾಸಿಕ ಪಂದ್ಯಕ್ಕೆ ಕೆಲವೇ ಗಂಟೆಗಳ ಮುನ್ನ ನಡೆದ ಕಡ್ಡಾಯ ತೂಕ ತಪಾಸಣೆಯಲ್ಲಿ ಅವರು ನಿಗದಿತ 50 ಕೆಜಿಗಿಂತ ಕೇವಲ 100 ಗ್ರಾಂ ಹೆಚ್ಚಿರುವುದು ಕಂಡುಬಂದಿತು. ಯುನೈಟೆಡ್ ವರ್ಲ್ಡ್ ರೆಸ್ಲಿಂಗ್ (ಯುಡಬ್ಲ್ಯುಡಬ್ಲ್ಯು) ನಿಯಮಗಳ ಪ್ರಕಾರ, ತೂಕದ ಮಿತಿಯನ್ನು ಮೀರಿದ್ದಕ್ಕಾಗಿ ಅವರನ್ನು ಸ್ಪರ್ಧೆಯಿಂದ ತಕ್ಷಣವೇ ಅನರ್ಹಗೊಳಿಸಲಾಯಿತು. ನಿಯಮಾವಳಿಗಳ ಪ್ರಕಾರ ಅವರಿಗೆ ಕೊನೆಯ ಸ್ಥಾನ ನೀಡಲಾಯಿತು.

ಈ ತೂಕವನ್ನು ಕಡಿಮೆ ಮಾಡಲು ವಿನೇಶ್ ಮತ್ತು ಅವರ ತರಬೇತುದಾರರ ತಂಡ ಇಡೀ ರಾತ್ರಿ ನೀರು, ಆಹಾರ ತ್ಯಜಿಸಿ, ತಲೆಗೂದಲನ್ನು ಕತ್ತರಿಸಿಕೊಳ್ಳುವ ಮೂಲಕ ತೀವ್ರ ಪ್ರಯತ್ನ ನಡೆಸಿದ್ದರು. ಆದರೂ ಕೇವಲ 100 ಗ್ರಾಂ ವ್ಯತ್ಯಾಸದಿಂದಾಗಿ ಅವರಿಗೆ ಖಚಿತವಾಗಿದ್ದ ಒಲಿಂಪಿಕ್ಸ್ ಪದಕ (ಕನಿಷ್ಠ ಬೆಳ್ಳಿ) ಕೈತಪ್ಪಿಹೋಯಿತು. ಈ ತೀವ್ರ ಆಘಾತದ ಬೆನ್ನಲ್ಲೇ ಅವರು ಕುಸ್ತಿ ಜೀವನಕ್ಕೆ ನಿವೃತ್ತಿ ಘೋಷಿಸಿದ್ದರು.

ಸಿರಿ
ಬೆಳ್ತಂಗಡಿಯಲ್ಲಿ ನಿರ್ಮಾಣಗೊಂಡಿರುವ ಸುಸಜ್ಜಿತ
ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್
ಉದ್ಘಾಟನಾ ಸಮಾರಂಭ
ಸ್ಥಳ : ಅಮೃತವರ್ಷಿಣಿ ಸಭಾಭವನ, ಧರ್ಮಸ್ಥಳ
ದಿನಾಂಕ : 31 ಮೇ 2026, ಭಾನುವಾರ ಬೆಳಗ್ಗೆ 10.00 ಗಂಟೆಗೆ






ಉದ್ಘಾಟಕರು
ಶ್ರೀ ಸಿ. ಪಿ. ರಾಧಾಕೃಷ್ಣನ್
ಭಾರತದ ಗೌರವಾನ್ವಿತ ಉಪರಾಷ್ಟ್ರಪತಿಗಳು



ಗೌರವ ಉಪಸ್ಥಿತಿ
ಶ್ರೀ ಥಾವರ್ ಚಂದ್ ಗೆಹ್ಲೋಟ್
ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರು



ಡಾ. ಡಿ. ವೀರೇಂದ್ರ ಹೆಗ್ಗಡೆಯವರು
ಧರ್ಮಾಧಿಕಾರಿಗಳು, ಶ್ರೀ ಕ್ಷೇತ್ರ ಧರ್ಮಸ್ಥಳ ಹಾಗೂ ಅಧ್ಯಕ್ಷರು, ಶ್ರೀ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆ (ರಿ.)

ಗೌರವಾನ್ವಿತ ಅತಿಥಿಗಳು
ಶ್ರೀ ದಿನೇಶ್ ಗುಂಡೂರಾವ್
ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು, ದಕ್ಷಿಣ ಕನ್ನಡ
ಕ್ಯಾಪ್ಟನ್ ಬ್ರಿಜೇಶ್ ಚೌಟ
ಮಾನ್ಯ ಸಂಸದರು, ದಕ್ಷಿಣ ಕನ್ನಡ
ಶ್ರೀ ಹರೀಶ್ ಪೂಂಜ
ಮಾನ್ಯ ವಿಧಾನಸಭಾ ಸದಸ್ಯರು, ಬೆಳ್ತಂಗಡಿ
ಶ್ರೀ ಕೆ. ಪ್ರತಾಪಸಿಂಹ ನಾಯಕ್
ಮಾನ್ಯ ವಿಧಾನ ಪರಿಷತ್ ಸದಸ್ಯರು
ಶ್ರೀಮತಿ ಹೇಮಾವತಿ ವೀ. ಹೆಗ್ಗಡೆಯವರು
ಸಿರಿ ಸಂಸ್ಥಾಪಕರು ಹಾಗೂ ಅಧ್ಯಕ್ಷರು, ಜ್ಞಾನವಿಕಾಸ ಕಾರ್ಯಕ್ರಮ, ಧರ್ಮಸ್ಥಳ
ಡಾ. ಕೆ. ಎಸ್. ಸೋಮಶೇಖರ್
ಕಾರ್ಯದರ್ಶಿ, ರಾಜ್ಯಸಭೆ, ದೆಹಲಿ
ಶ್ರೀ ಡಿ. ಸುರೇಂದ್ರ ಕುಮಾರ್
ಉಪಾಧ್ಯಕ್ಷರು, ಎಸ್.ಡಿ.ಎಂ. ಶಿಕ್ಷಣ ಸಂಸ್ಥೆ (ರಿ.), ಉಜಿರೆ

ಈ ಕಾರ್ಯಕ್ರಮಕ್ಕೆ ತಮ್ಮನ್ನು ಹೃತ್ಪೂರ್ವಕವಾಗಿ ಆಹ್ವಾನಿಸುತ್ತೇವೆ.
ಆಡಳಿತ ಮಂಡಳಿಯ ನಿರ್ದೇಶಕರು ಮತ್ತು ಸದಸ್ಯರು ಹಾಗೂ ಸಿರಿ ಸಿಬ್ಬಂದಿ
ಕೆ. ಎನ್. ಜನಾರ್ಧನ
ವ್ಯವಸ್ಥಾಪಕ ನಿರ್ದೇಶಕರು, ಸಿರಿ
ಸೂಚನೆ : ಕಾರ್ಯಕ್ರಮಕ್ಕೆ ಅರ್ಧ ಗಂಟೆ ಮುಂಚಿತವಾಗಿ ಬಂದು ಆಸನಗಳಲ್ಲಿ ಕುಳಿತುಕೊಳ್ಳಬೇಕಾಗಿ ವಿನಂತಿ ಹಾಗೂ ನಿಮ್ಮ ಮೊಬೈಲ್ ಅನ್ನು ಸ್ವಿಚ್‌ಆಫ್ ಮಾಡಿ ಸಹಕರಿಸಲು ಕೋರಲಾಗಿದೆ.